ಸಂಪುಟ: 22, ಸಂಚಿಕೆ: 252, ಪುಟಗಳು: 8, ಶನಿವಾರ, 21 ಜೂನ್ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

# ಸುದ್ದಿಗಳ ಹೊನಲು ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

### ಸುಭಾಷಿತ

ಕಾಲು ಎಡವಿದರೆ ನಡೆಯುವುದನ್ನು ಕಲಿಸುತ್ತದೆ, ಮನಸ್ಸು ಎಡವಿದರೆ ಬದುಕುವುದನ್ನು ಕಲಿಸುತ್ತದೆ.

### ಪಂಚಾಂಗ

(ಶನಿವಾರ 21 ಜೂನ್-2025)

- ಶ್ರೀ ವಿಶ್ವಾವಸುನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಕೃಷ್ಣ ಪಕ್ಷ,
- ದಶಮಿ / ಉಪರಿ ಏಕಾದಶಿ,
- ಶನಿವಾರ, ಅಶ್ವಿನಿ ನಕ್ಷತ್ರ
- ರಾಹುಕಾಲ: 09:12 ರಿಂದ 10:48
- ಗುಳಿಕಕಾಲ: 05:59 ರಿಂದ 07:36
- ಯಮಗಂಡ ಕಾಲ: 02:01 ರಿಂದ 03:37

## ಸಂಕ್ಷಿಪ್ತ ಸುದ್ದಿ

### ಜಮೀರ್ ಇಲಾಖೆಯಲ್ಲಿ ಭ್ರಷ್ಟಾಚಾರ ಆರೋಪ ಮುಲಾಜಿಲ್ಲದೇ ಕ್ರಮ



**ಬೀದರ್:** ವಸತಿ ಯೋಜನೆಯ ಭ್ರಷ್ಟಾಚಾರದಲ್ಲಿ ಯಾರೇ ಇದ್ರು ಮುಲಾಜಿಲ್ಲದೇ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಬೀದರ್‌ನಲ್ಲಿ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ. ಯೋಗ ದಿನದ ಸಲುವಾಗಿ ಐತಿಹಾಸಿಕ ಬೀದರ್ ಕೋಟೆಯಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ವೇಳೆ, ಜಮೀರ್ ಇಲಾಖೆಯಲ್ಲಿ ಭ್ರಷ್ಟಾಚಾರ ಆರೋಪ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿದರು. ಪುಟ 2

### ಮಹಿಳೆಯ ಪ್ರಾಣ ತೆಗೆದ ಮೊಬೈಲ್



**ಉಡುಪಿ:** ಹೆಚ್ಚು ಮೊಬೈಲ್ ಬಳಸುತ್ತಾಳೆಂದು ಕೋಪಗೊಂಡ ವ್ಯಕ್ತಿ ತನ್ನ ಪತ್ನಿಯನ್ನೇ ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಪತ್ನಿ ಹೆಚ್ಚು ಸಮಯ ಮೊಬೈಲ್ ಬಳಸುತ್ತಾಳೆ ಎಂದು ಪತಿ ಕತ್ತಿಯಿಂದ ಕಡಿದು ಹತ್ಯೆಗೈದ ಘಟನೆ ಉಡುಪಿಯ ಬ್ರಹ್ಮಾವರ ತಾಲೂಕಿನ ಹಿಲಿಯಾಣ ಗ್ರಾಮದ ಹೊಸಮಠ ಎಂಬಲ್ಲಿ ನಡೆದಿದೆ. ರೇಖಾ(27) ಕೊಲೆಯಾದ ಮಹಿಳೆ. ಕೊಳಂಬೆ ಗ್ರಾಮದ ನಿವಾಸಿಯಾದ ಆರೋಪಿ ಪತಿ ಗಣೇಶ ಪೂಜಾರಿಯನ್ನು(42) ಸದ್ಯ ಬಂಧಿಸಲಾಗಿದೆ. ಆದ್ರೆ, ಪಾಪ ಇಬ್ಬರು ಮಕ್ಕಳು ಅನಾಥವಾಗಿವೆ.

» **ಪತ್ನಿಯನ್ನೇ ಕೊಂದ ಪತಿ, ಮಕ್ಕಳು ಅನಾಥ**

ವೃತ್ತಿಯಲ್ಲಿ ಪೇಂಟಿಂಗ್ ಕೆಲಸ ಮಾಡಿಕೊಂಡಿದ್ದ ಗಣೇಶ್ ಪೂಜಾರಿ ಹಾಗೂ ರೇಖಾಳಿಗೆ 8 ವರ್ಷದ ಹಿಂದೆ ಮದುವೆಯಾಗಿದ್ದು ಇಬ್ಬರು ಮಕ್ಕಳಿದ್ದರು. ರೇಖಾ ಪೆಟ್ರೋಲ್ ಬಂಕ್‌ವೊಂದರಲ್ಲಿ ಕೆಲಸಕ್ಕಿದ್ದು ಗಣೇಶ್ ಮೊಬೈಲ್ ವಿಚಾರದಲ್ಲಿ ಆಗಾಗ್ಗೆ ಗಲಾಟೆ ಮಾಡುತ್ತಿದ್ದ. ಈ ಬಗ್ಗೆ ಈ ಹಿಂದೆ ಶಂಕರನಾರಾಯಣ ಪೊಲೀಸರಿಗೆ ದೂರು ಅರ್ಜಿ ನೀಡಲಾಗಿದ್ದು ಅವರು ಬುದ್ದಿವಾದ ಹೇಳಿ ಮುಚ್ಚಳಿಕೆ ಬರೆಸಿಕೊಂಡು ಕಳುಹಿಸಿದ್ದರು. ಆದರೆ ಗಣೇಶ್ ತನ್ನ ಚಾಳಿ ಮುಂದುವರೆಸಿದ್ದು, ಗುರುವಾರ ತಡರಾತ್ರಿ ಮನೆಗೆ ಬಂದು ಕ್ಷುಲ್ಲಕ ಕಾರಣಕ್ಕೆ ಪತ್ನಿಯೊಂದಿಗೆ ಜಗಳ ತೆಗೆದಿದ್ದು, ಪುಟ 2

## ರಾಜ್ಯದಲ್ಲೂ ಅಂತಾರಾಷ್ಟ್ರೀಯ ಯೋಗ ದಿನಾಚರಣೆ






**ಬೆಂಗಳೂರು:** ದೇಹ ಮತ್ತು ಮನಸ್ಸಿನ ಸಂಯೋಗವೇ ಯೋಗ. ಭಾರತೀಯ ಯೋಗ ಪರಂಪರೆಯಿಂದು ವಿಶ್ವವ್ಯಾಪಿಯಾಗಿ ಬೆಳೆದಿದೆ. ಭಾರತ ಮತ್ತು ಇತರ ದೇಶಗಳ ಸಂಬಂಧವನ್ನು ಆರೋಗ್ಯಪೂರ್ಣವಾಗಿಸುವ ಮಹತ್ವದ ಕಾರ್ಯವಾಗಿ ರೂಪುಗೊಂಡಿದೆ. ಯೋಗವು ಯಾವುದೇ ಜಾತಿ, ಧರ್ಮ, ಮತಕ್ಕೆ ಸೀಮಿತವಾಗದೇ ಎಲ್ಲವನ್ನೂ ಎಲ್ಲರನ್ನೂ ಮೀರಿಸುವ ವಿಶ್ವಕುಟುಂಬಿಯಾಗಿ ಹಾಗೂ ವಿಶ್ವ ಆರೋಗ್ಯಕ್ಕಾಗಿ ಎನ್ನುವ ನಿಟ್ಟಿನಲ್ಲಿ ಸಾಕಾರಾರಗೊಂಡಿದೆ. ಹೀಗಾಗಿ ಕರ್ನಾಟವೂ ಈ ಆಚರಣೆಯಿಂದ ಹೊರತಾಗಿಲ್ಲ.

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆ ಬೆಂಗಳೂರಿನ ವಿಧಾನಸೌಧದ ಮುಂಭಾಗದಲ್ಲಿಂದು ಸಾವಿರಾರು ಯೋಗಪಟುಗಳಿಂದ ಯೋಗಭ್ಯಾಸ್ಯ ನಡೆಯಿತು. ಆಯುಷ್ ಇಲಾಖೆಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ನಟ ಅನಿರುದ್ಧ್, ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ್ ಹೊರಟ್ಟಿ, ನಟಿ ಸಾನ್ಯ ಅಯ್ಯರ್, ನಟ ಶೈನ್ ಶೆಟ್ಟಿ ಭಾಗಿಯಾಗಿ ವಿವಿಧ ಆಸನಗಳನ್ನ ಪ್ರದರ್ಶಿಸಿದರು.

'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎನ್ನುವ ಧ್ಯೇಯವಾಕ್ಯ ಸಾಕಾರಗೊಳಿಸುವ ನಿಟ್ಟಿನಲ್ಲಿ ಬೆಳಗ್ಗೆ 6 ಗಂಟೆಯಿಂದ ಶುರುವಾಗಿ 8:30ರ ವರೆಗೆ ಯೋಗ ಪ್ರದರ್ಶನ ನಡೆಯಿತು. ಹಿರಿಯ ರಾಜಕೀಯ ನಾಯಕರೂ ಸೇರಿ ವಿವಿಧ ಸಂಸ್ಥೆಯ ಯೋಗಪಟುಗಳು ಇದರಲ್ಲಿ ಪಾಲ್ಗೊಂಡಿದ್ದರು.

ಬಳಿಕ ಯೋಗ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಕನ್ನಡದಲ್ಲಿ ಎಲ್ಲರಿಗೂ ಸ್ವಾಗತ ಕೋರಿ ಭಾಷಣ ಶುರು ಮಾಡಿದರು.

ಯೋಗ ಭಾರತದ ಸಂಸ್ಕೃತಿಯ ಪ್ರತೀಕವಾಗಿದೆ. ಯೋಗ ಎಲ್ಲರ ಕಲ್ಯಾಣ ಮಾಡೋ ಭಾವನೆ ಆಗಿದೆ. ವಿಶ್ವದ ಬಹುತೇಕ ದೇಶಗಳಲ್ಲಿ ಯೋಗ ದಿನವನ್ನ ಆಚರಣೆ ಮಾಡಲಾಗುತ್ತಿದೆ. ಕರ್ನಾಟಕ ಸರ್ಕಾರದ ಯೋಗ ದಿನ ಉತ್ತಮವಾಗಿ ಆಚರಣೆ ಮಾಡಿದೆ. ಸರ್ಕಾರಕ್ಕೆ ಧನ್ಯವಾದ ಹೇಳ್ತೀನಿ. ಯೋಗ ಜೀವನವನ್ನ ಪರಿಪೂರ್ಣ ಮಾಡುತ್ತದೆ. 'ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ' ಅನ್ನೋ ಘೋಷ ವಾಕ್ಯ ಉತ್ತಮವಾಗಿದೆ ಎಂದರಲ್ಲದೇ ಯೋಗ ಮಾಡಿ ಪುಟ 2

## 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

# ಯೋಗಾಂಧ್ರದಲ್ಲಿ ನಮೋ ಯೋಗ

**ವಿಶಾಖಪಟ್ಟಣಂ:** 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಜಗತ್ತಿನಾದ್ಯಂತ ಸಾಮೂಹಿಕ ಯೋಗ ಕಾರ್ಯಕ್ರಮಗಳು ನಡೆಯುತ್ತಿವೆ. ಅದರಂತೆ ವಿಶಾಖಪಟ್ಟಣಂನಲ್ಲಿ ಪ್ರಧಾನಿ ಮೋದಿ ನೇತೃತ್ವದಲ್ಲಿ ವಿಶ್ವದಾಖಲೆಯ ಯೋಗ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮಕ್ಕಾಗಿ ಆರ್.ಕೆ ಬೀಚ್‌ನಿಂದ ಭೋಗಪುರಂವರೆಗೆ 26 ಕಿಮೀ ಕಾರಿಡಾರ್ನಿ ರ್ಮಾಣ ಮಾಡಲಾಗಿತ್ತು. ಈ ಕಾರಿಡಾರ್‌ನಲ್ಲಿ 3 ಲಕ್ಷಕ್ಕೂ ಅಧಿಕ ಜನ ಯೋಗಾಸನ ಮಾಡಿದ್ದಾರೆ. ಇನ್ನೂ 25,000 ವಿದ್ಯಾರ್ಥಿಗಳಿಂದ 108 ನಿಮಿಷ ಸೂರ್ಯ ನಮಸ್ಕಾರ ಮಾಡಿ ಗಮನ ಸೆಳೆದರು. ಈ ಬಾರಿ 'ಒಂದು ಭೂಮಿಗಾಗಿ, ಒಂದು ಆರೋಗ್ಯಕ್ಕಾಗಿ' ಎಂಬ ಥೀಮ್'ನಲ್ಲಿ ಈ ಬಾರಿಯ ಯೋಗ ದಿನ ಆಚರಣೆ ಮಾಡಲಾಗುತ್ತಿದೆ.

ಯೋಗ ಕೇವಲ ವ್ಯಾಯಾಮವಲ್ಲ, ಅದು ಒಂದು ಜೀವನದ ಭಾಗ. ಪ್ರತಿಯೊಬ್ಬರು ಯೋಗ ಮಾಡುವಂತೆ ಪ್ರಧಾನಿ ಮೋದಿ ಹೇಳಿದ್ದಾರೆ.

ಯೋಗ ಎಂದರೆ ಎಲ್ಲರೂ ಒಂದಾಗುವುದು. ಇಡೀ ವಿಶ್ವವೇ ಯೋಗ ದಿನ ಆಚರಿಸುತ್ತಿರುವುದು ಸಾಧಾರಣ ವಿಷಯವಲ್ಲ. ಯೋಗ ಇಂದು ವಿಶ್ವವನ್ನೇ ಒಂದು ಮಾಡಿದೆ. ವಿಶ್ವದ ಕೋಟ್ಯಂತರ ಜನರ ಜೀವನ ಶೈಲಿಯನ್ನು ಯೋಗ ಬದಲಿಸಿದೆ ಎಂದಿದ್ದಾರೆ ಪ್ರಧಾನಿ ಮೋದಿ.

ಆಂಧ್ರ ಸಿಎಂ ಚಂದ್ರಬಾಬು ನಾಯ್ಡು ಕೂಡ ಯೋಗ ಮಾಡುವ ಮೂಲಕ ಯೋಗ ದಿನವನ್ನು ಆಚರಿಸಿದ್ದಾರೆ. ಇದೇ ವೇಳೆ ಮಾತನಾಡಿರುವ ಅವರು ವಿಶ್ವಕ್ಕೆ ಯೋಗವನ್ನು ಪರಿಚಯಿಸಿದ ಕೀರ್ತಿ ಪ್ರಧಾನಿ ಮೋದಿಗೆ ಸಲ್ಲಬೇಕು ಎಂದು ಹೇಳಿದ್ದಾರೆ.

ಡಿಸಿಎಂ ಪವನ್ ಕಲ್ಯಾಣ್ ಕೂಡ ಪ್ರಧಾನಿ ಮೋದಿ ಅವರೊಂದಿಗೆ ಯೋಗ ಮಾಡಿದರು. ಈ ವೇಳೆ ಮಾತನಾಡಿದ ಅವರು ಯೋಗದ ಮಹತ್ವವನ್ನು ವಿಶ್ವಕ್ಕೆ ಪರಿಚಯಿಸಿದ್ದು ಪ್ರಧಾನಿ ಮೋದಿ ಎಂದು ಹೇಳಿದ್ದಾರೆ. ಪುಟ 2














## ಹೊಸ ದಾಖಲೆ ಬರೆದ ಕೆಆರ್‌ಎಸ್ ಡ್ಯಾಂ
# 118.60 ಅಡಿ ನೀರು ಭರ್ತಿ

**ಮಂಡ್ಯ:** ಜೂನ್ ತಿಂಗಳಲ್ಲೇ ಕೆಆರ್‌ಎಸ್ ಡ್ಯಾಂನಲ್ಲಿ 118.60 ಅಡಿ ನೀರು ಭರ್ತಿ ಆಗಿದ್ದು, ಇದೀಗ ಹಳೇ ಮೈಸೂರು ಭಾಗದ ಜೀವನಾಡಿ ಹೊಸ ದಾಖಲೆ ಬರೆದಿದೆ.

ಜೂನ್ ತಿಂಗಳಲ್ಲೇ ಅಣೆಕಟ್ಟು ಸಂಪೂರ್ಣ ಭರ್ತಿಯತ್ತ ಸಾಗುತ್ತಿದ್ದು, ಈಗಾಗಲೇ ಹಳೇ ಮೈಸೂರು ಭಾಗದ ಜೀವನಾಡಿ ಕೆಆರ್‌ಎಸ್ ಡ್ಯಾಂ 118.60 ಅಡಿ ತುಂಬಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಜೂನ್‌ನಲ್ಲಿ ಇಷ್ಟು ಪ್ರಮಾಣದ ನೀರು ಸಂಗ್ರಹವಾಗಿದೆ.

ಜಲಾಶಯದ ನಿರ್ಮಾಣವಾದಾಗಿನಿಂದ ಮೊದಲ ಬಾರಿಗೆ ಜೂನ್‌ನಲ್ಲಿ ಇಷ್ಟೊಂದು ನೀರು ಸಂಗ್ರಹವಾಗುವ ಮೂಲಕ ಇತಿಹಾಸ ಸೃಷ್ಟಿಯಾಗಿದೆ. ಸಾಮಾನ್ಯವಾಗಿ ಜುಲೈ ಅಂತ್ಯ



ಅಥವಾ ಆಗಸ್ಟ್‌ನಲ್ಲಿ ಡ್ಯಾಂ ಭರ್ತಿಯಾಗುತ್ತಿತ್ತು. ಆದರೆ ಈ ಬಾರಿ ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆಯಾದ ಹಿನ್ನೆಲೆ ಕೆಆರ್ ಎಸ್ ಡ್ಯಾಂ 118.60 ಅಡಿ ಭರ್ತಿಯಾಗಿದೆ.

124.80 ಅಡಿ ಗರಿಷ್ಠ ಮಟ್ಟ ಹೊಂದಿರುವ ಕನ್ನಂಬಾಡಿಯ ಸಂಪೂರ್ಣ ಭರ್ತಿಗೆ ಕೇವಲ 6 ಅಡಿ ಮಾತ್ರ ಬಾಕಿಯಿದೆ. ಪುಟ 2

## ಸಿದ್ದರಾಮಯ್ಯಗೆ ತಮ್ಮ ಕಾನೂನು ಸಚಿವರಿಂದಲೇ ಖಾರವಾದ ಪತ್ರ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವರಿಂದಲೇ ಖಾರವಾದ ಪತ್ರಗಳು ಬಂದಿದೆ. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ.ಪಾಟೀಲ್ ಬರೋಬ್ಬರಿ



## ರಜೆ ಮಜಾ ಮಾಡಲು ಹೋಗಿ ಸೈಬರ್ ವಂಚಕರ ಬಲೆಗೆ ಬಿದ್ದ

**ಚಿಕ್ಕಮಗಳೂರು:** ಸೈಬರ್ ವಂಚನೆ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇವೆ. ಹೊಸ ಹೊಸ ರೀತಿಯಲ್ಲಿ ಸೈಬರ್ ವಂಚಕರು ತಮ್ಮ ವಂಚನೆಯ ಜಾಲವನ್ನು ಹೆಣೆಯುತ್ತಿದ್ದಾರೆ. ಶಾಲೆಗೆ ರಜೆ ಇದ್ದಿದ್ದರಿಂದ ಮಕ್ಕಳನ್ನು ಕರೆದುಕೊಂಡು ಕುಟುಂಬದವರ ಜೊತೆ ಮೈಸೂರು ಪ್ರವಾಸಕ್ಕೆ ಹೋಗಿದ್ದ ಚಿಕ್ಕಮಗಳೂರಿನ ವ್ಯಕ್ತಿ ಸೈಬರ್ ವಂಚಕರ ಜಾಲದಲ್ಲಿ ಬಿದ್ದು 25 ಸಾವಿರ ಹಣ ಕಳೆದುಕೊಂಡಿದ್ದಾರೆ.

ಚಿಕ್ಕಮಗಳೂರಿನ ಮಹೇಶ್ ಎಂಬುವರು ಕುಟುಂಬದವರ ಜೊತೆ ಮೈಸೂರಿಗೆ ಹೋಗಿದ್ದರು. ಮೈಸೂರಿನಲ್ಲಿನ GRS ಫ್ಯಾಂಟಸಿ ಪಾರ್ಕ್‌ಗೆ ಹೋಗಲು ಮಹೇಶ್ ಅವರು ಆನ್ಲೈನ್ ನಲ್ಲಿ ಟಿಕೆಟ್ ಬುಕ್ ಮಾಡಲು ಸರ್ಚ್ ಮಾಡಿದ್ದಾರೆ. ಆನ್ ಲೈನ್ ನಲ್ಲಿ



ತೋರಿಸಿದ GRS ಫ್ಯಾಂಟಸಿ ಪಾರ್ಕ್ ಎಂಬ ಲಿಂಕನ್ನು ಮಹೇಶ್ ಕ್ಲಿಕ್ ಮಾಡಿದ್ದಾರೆ. ಅದರಲ್ಲಿ ಬಂದ ಎಲ್ಲ ಆಟಗಳನ್ನು ಕಂಪ್ಲೀಟ್ ಮಾಡಿ, ನಂತರ ಹಣ ಪೇ ಮಾಡಲು ಕಂಪ್ಲೀಟ್ ಬುಕ್ಕಿಂಗ್‌ಗೆ ಹೋಗಿ ಪುಟ 2

## ಶಾಲೆ ನಡೆಸಲಾಗದ್ದಷ್ಟು ಬಡವಾಯ್ತೆ ಸರ್ಕಾರ
# ಮೈಶುಗರ್ ಶಾಲೆ ಕಾಂಗ್ರೆಸ್ ಮುಖಂಡನ ತೆಕ್ಕೆಗೆ

**ಮಂಡ್ಯ:** ಮೈಶುಗರ್ ಕಾರ್ಖಾನೆಯನ್ನು ಅಭಿವೃದ್ಧಿಗೊಳಿಸಲು ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದಿರುವ ಎಲ್ಲಾ ಸರ್ಕಾರಗಳು ಕೋಟ್ಯಾಂತರ ರೂಪಾಯಿ ಅನುದಾನವನ್ನು ನೀಡಿವೆ. ಕಳೆದ ಬಿಜೆಪಿ ಸರ್ಕಾರ ಮೈಶುಗರ್ ಕಾರ್ಖಾನೆಯನ್ನು ಖಾಸಗೀಕರಣ ಮಾಡಲು ಪ್ರಯತ್ನ ಪಟ್ಟಿತ್ತು. ಆಗ ರೈತ ಸಂಘಟನೆಗಳು, ಜೆಡಿಎಸ್ ನಾಯಕರು ಹೋರಾಟ ಮಾಡಿದ ಪರಿಣಾಮ ಈ ಪ್ರಯತ್ನ ವಿಫಲಾಗಿತ್ತು. ಇದಾದ ಬಳಿಕ ಇದೀಗ ಸಿದ್ದರಾಮಯ್ಯ ಸರ್ಕಾರ ಬಜೆಟ್‌ನಲ್ಲಿ ಹೊಸ ಮೈಶುಗರ್ ಕಾರ್ಖಾನೆ ನಿರ್ಮಾಣ ಮಾಡುವುದಾಗಿ ಘೋಷಣೆ ಮಾಡಿದೆ. ಇದರ ಬೆನ್ನಲ್ಲೇ ಮೈಶುಗರ್ ಆಸ್ತಿಯ ಪ್ರಮುಖ ಭಾಗವಾಗಿರುವ ಮೈಶುಗರ್ ಶಾಲೆಯನ್ನು ಕಾಂಗ್ರೆಸ್ ಮುಖಂಡನಿಗೆ




ಲೀಸ್‌ಗೆ ನೀಡಲು ಆಡಳಿತ ಮಂಡಳಿ ತೆರೆಮರೆಯ ಸರ್ಕಸ್ ಮಾಡುತ್ತಿದೆ. ಪುಟ 2

## ನಂದಿನಿ ಹಾಲಿಗೆ ಪರಿಸರಸ್ನೇಹಿ ಪ್ಯಾಕಿಂಗ್

**ಬೆಂಗಳೂರು:** ಶೀಘ್ರದಲ್ಲೇ ನಂದಿನಿ ಹಾಲಿನ ಪ್ಯಾಕೆಟ್ ಬದಲಾಗುವ ಸುಳಿವು ದೊರೆತಿದೆ. ಮೆಕ್ಕೆಜೋಳ ಬಳಸಿ ತಯಾರಾಗುವ ಬಯೋಡಿಗ್ರೇಡೆಬಲ್ ಪ್ಯಾಕಿಂಗ್ ವ್ಯವಸ್ಥೆ ಜಾರಿಗೆ ಬಮೂಲ್ ಮೊದಲ ಪ್ರಯೋಗಕ್ಕೆ ಹೊರಟಿದೆ. ಈ ಮೂಲಕ ದೇಶದಲ್ಲೇ ಮೊದಲ ಬಾರಿಗೆ ಈ ತಂತ್ರಜ್ಞಾನ ಪರಿಚಯಿಸಲು ಬಮೂಲ್ ಚಿಂತನೆ ನಡೆಸಿದೆ. ಶುಕ್ರವಾರವಷ್ಟೇ ಬಮೂಲ್ ಅಧ್ಯಕ್ಷ ಪಟ್ಟ ಪಡೆದ ಡಿ.ಕೆ. ಸುರೇಶ್, ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ಸ್ಥಾನ ಪಡೆಯುತ್ತಿದ್ದಂತೆಯೇ ನಂದಿನಿ ಹಾಲಿನ ಪ್ಯಾಕೆಟ್ ಗೆ ಹೊಸರೂಪ ಕೊಡಲು ಚಿಂತನೆ ನಡೆಸಿದ್ದಾರೆ.

ಸದ್ಯ ಪಾಲಿಥಿನ್ ಪ್ಯಾಕೆಟ್ ಗಳಲ್ಲಿನಂದಿನಿ ಹಾಲು ಮಾರಾಟವಾಗುತ್ತಿದೆ. ಇದಕ್ಕೆ ಹೊಸ




» **ಇನ್ನು ಮೆಕ್ಕೆಜೋಳದಲ್ಲಿ ತಯಾರಾಗಲಿದೆ ಹಾಲಿನ ಪ್ಯಾಕೆಟ್!**

ರೂಪ ಕೊಡಲು ಸಜ್ಜಾಗಿರುವ ಬಮೂಲ್, ಇದೀಗ ವಿದೇಶದಲ್ಲಿ ಬಳಕೆಯಲ್ಲಿರುವ ಬಯೋಡಿಗ್ರೇಡೇಬಲ್ ಪ್ಯಾಕೇಜಿಂಗ್ ಕವರ್ ತಯಾರಿಕೆಗೆ ಚಿಂತನೆ ನಡೆಸಿದೆ. ಪುಟ 2

## ಹಣ ತೋರಿಸಿ ಬಳಿಕ ಪೇಪರ್ ಬಂಡಲ್ ಕೊಟ್ಟು
# ಯೋಧನಿಗೆ ಪಂಗನಾಮ

**ಧಾರವಾಡ:** ಹಣ ಎಂದು ಪೇಪರ್ ಬಂಡಲ್ ಕೊಟ್ಟು ಮಾಜಿ ಯೋಧ ಸೇರಿದಂತೆ ಐವರಿಗೆ ವಂಚಿಸಿರುವ ಘಟನೆ ಧಾರವಾಡ ಉಪ ನೋಂದಣಿ ಕಚೇರಿ ಆವರಣದಲ್ಲಿ ನಡೆದಿದೆ. ಮಾಜಿ ಯೋಧ ಸುರೇಶ ತಡಕೋಡ, ಧರ್ಮೆಂದ್ರ, ರಾಯನಗೌಡರ ಹಾಗೂ ಸುರೇಶ ಬಳಗೇರ ವಂಚನೆಗೆ ಒಳಗಾದವರು. ಇವರು ಧಾರವಾಡ ತಾಲೂಕಿನ ಶಿವಳ್ಳಿಯ ಸುವರ್ಣಾ ಮುದ್ದಿ ಎಂಬುವವರಿಂದ 6 ಎಕರೆ ಜಮೀನು ಖರೀದಿಗೆ ಮುಂದಾಗಿ, 2023ರಲ್ಲಿ ಇದಕ್ಕೆ ಸಂಬಂಧಿಸಿದಂತೆ ಖರೀದಿ ಒಪ್ಪಂದ ಕೂಡ ಮಾಡಿಕೊಂಡು 24 ಲಕ್ಷ ರೂಪಾಯಿ ಕೊಟ್ಟಿದ್ದರು. ಆದರೆ, ಜಮೀನು ದರ ಹೆಚ್ಚಾಗಿದ್ದರಿಂದ ಸುವರ್ಣಾ ಮುದ್ದಿ ಜಮೀನು ಮಾರಲು ಹಿಂದೇಟು ಹಾಕಿದ್ದು, ಖರೀದಿ ಒಪ್ಪಂದ ರದ್ದು ಮಾಡಿಕೊಳ್ಳೋಣ ಎಂದಿದ್ದರು.

ಹೀಗಾಗಿ, ಐದು ಲಕ್ಷ ರೂಪಾಯಿ ಸಹ ಮರಳಿ ಕೊಟ್ಟು, ಉಳಿದ 19 ಲಕ್ಷ ರೂಪಾಯಿ ಒಪ್ಪಂದ ರದ್ದತಿಗೆ ಸಹಿಯಾದ ಬಳಿಕ ಕೊಡುವ ಮಾತಾಗಿತ್ತು. ಅದರಂತೆ ಇವತ್ತು ಸುವರ್ಣಾ ಮುದ್ದಿ, ಮಗಳು




ದಾನೇಶ್ವರಿ ಧಾರವಾಡ ಉಪನೋಂದಣಿ ಕಚೇರಿಗೆ ಬಂದಿದ್ದರು. ಈ ವೇಳೆ ಇವರಿಗೆ ಹಣ ತೋರಿಸಿ, ಸಹಿ ಮಾಡಿದ ಮೇಲೆ ಹಣದ ಬಂಡಲ್ ಕೊಡುವುದಾಗಿ ಹೇಳಿದ್ದಾರೆ.

ಅದರಂತೆ ಸಹಿ ಮಾಡಿ ಹೊರಗೆ ಬಂದಾಗ, ಹಣದ ಬಂಡಲ್ ಸಹ ಕೊಟ್ಟಿದ್ದಾರೆ. ಆದರೆ ಕಾರಿನಲ್ಲಿ ಬಂದು ಹಣದ ಬಂಡಲ್ ತೆಗೆದು ನೋಡಿದಾಗ ಶಾಕ್ ಆಗಿದೆ. ಏಕೆಂದರೆ 1 ಲಕ್ಷ 20 ಸಾವಿರ ಹಣ ಮಾತ್ರ ಕರೆನ್ಸಿ ಇದ್ದರೇ ಉಳಿದೆಲ್ಲವೂ ಹಾಳೆಗಳನ್ನು ನೋಟಿನಂತೆ ಕಟ್ ಮಾಡಿ ಬಂಡಲ್ ನೀಡಿ ಪುಟ 2

# ತಹಸೀಲ್ದಾರ್ರೇ ಈ ಮುಖ್ಯಾಧಿಕಾರಿಗೆ ಮೊದಲು ನೋಟಿಸ್ ಕೊಡಿ

## ಜನಸ್ಪಂದನ ಕಾರ್ಯಕ್ರಮದ ಪ್ರಚಾರ ಮಾಡದ ಪಪಂ ಮುಖ್ಯಾಧಿಕಾರಿಗಳ ಮೇಲೆ ಶಾಸಕ ಸಿ.ಬಿ.ಸುರೇಶ್‌ಬಾಬು ಫುಲ್ ಗರಂ

**ಹುಳಿಯಾರು:** ಹುಳಿಯಾರು ಪಟ್ಟಣದಲ್ಲಿ ಶುಕ್ರವಾರ ಶಾಸಕ ಸಿ.ಬಿ.ಸುರೇಶ್‌ಬಾಬು ಅವರ ವಿನೂತನ ಕಾರ್ಯಕ್ರಮವಾದ ಮನೆಬಾಗಿಲಿಗೆ ಮನೆ ಮಗ ಟೈಟಲ್‌ನ ಜನಸ್ಪಂದನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಪಪಂ ಸದಸ್ಯರಾದಿಯಾಗಿ ಸಭೆಗೆ ಆಗಮಿಸಿದ್ದ ಸಾರ್ವಜನಿಕರು ಈ ಸಭೆ ಇರುವ ಮಾಹಿತಿಯೇ ಇಲ್ಲ ಸಾರ್ ಎಂದು ದೂರಿದರು. ಅಲ್ಲದೆ ಸಭೆಗೆ ಆಗಮಿಸಿದ್ದ ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಮಾಧ್ಯಮದವರು, ಸಾರ್ವಜನಿಕರು ಕುಳಿತುಕೊಳ್ಳಲು ಚೇರ್‌ಗಳಿಲ್ಲದೆ ನಿಂತಿರುವುದನ್ನು ಕಂಡು ಪಪಂ ಮುಖ್ಯಾಧಿಕಾರಿ ಎಸ್.ನಾಗಭೂಷಣ್ ಮೇಲೆ ಶಾಸಕರು ಫುಲ್ ಗರಂ ಆದರು.

ತಹಸೀಲ್ದಾರ್‌ಗೆ ದೂರವಾಣಿ ಕರೆ ಮಾಡಿ ತಾಲೂಕು ಮಟ್ಟದ ಅಧಿಕಾರಿಗಳು ತಮ್ಮೆಲ್ಲ ಕೆಲಸಕಾರ್ಯ ಬಿಟ್ಟು ನೇರವಾಗಿ ಜನರನ್ನು ಬೇಟಿಯಾಗಿ ಸಮಸ್ಯೆ ಆಲಿಸಿ ಸ್ಥಳದಲ್ಲೇ ಪರಿಹರಿಸುವ ಸದುದ್ದೇಶದಿಂದ ಬಂದಿರುತ್ತಾರೆ. ಆದರೆ ಕಾರ್ಯಕ್ರಮ ಆಯೋಜಿಸಿರುವ ಬಗ್ಗೆ ಸರಿಯಾದ ಪ್ರಚಾರ ಸಹ ಮಾಡದೆ ಪಪಂ ಮುಖ್ಯಾಧಿಕಾರಿ ನಿರ್ಲಕ್ಷ್ಯಿಸಿದ್ದಾರೆ. ಮೊದಲು ಇವರಿಗೊಂದು ನೋಟಿಸ್ ಕೊಡಿ ಎಂದು ಸೂಚಿದರು. ಅಲ್ಲದೆ ಮುಂದಿನ ಜನಸ್ಪಂದನಾ ಕಾರ್ಯಕ್ರಮದಲ್ಲಿ ಪ್ರಚಾರ, ಆಯೋಜನೆಯ ಬಗ್ಗೆ ದೂರು ಕೇಳಿ ಬಂದರೆ ಸುಮ್ಮನಿರಲ್ಲ ಎಂದು ಎಚ್ಚರಿಸಿದರು.

ಹುಳಿಯಾರಿನ ಉರ್ದು ಶಾಲೆ ಮುಂಭಾಗ, ನುರಾನಿ ಮಸೀದಿ ಹತ್ತಿರ ಹಾಗೂ ಬೆಂಕಿ ಗಣಪತಿ ದೇವಸ್ಥಾನದ ಬಳಿ ಹೀಗೆ 3 ಕಡೆ ಶಾಸಕರು ಜನಸ್ಪಂದನಾ ಸಭೆ ನಡೆಸಿದರು. ಈ ಎಲ್ಲಾ ಸಭೆಯಲ್ಲೂ ಮನೆ ಹಾಗೂ ನಿವೇಶನ ಕೋರಿ ಸಾಕಷ್ಟು ಅರ್ಜಿಗಳು ಬಂದಿದ್ದವು. ಈ ವಿಚಾರವನ್ನು ಶಾಸಕರು ಸ್ಥಳದಲ್ಲೇ ಗಂಭೀರವಾಗಿ ಪರಿಗಣಿಸಿ ನಿವೇಶನ ಹಂಚಲು ಹುಳಿಯಾರು ಸಮೀಪದಲ್ಲಿ ಸರ್ಕಾರಿ ಜಮೀನಿದ್ದರೆ ಹೇಳಿ ಮಂಜೂರು ಮಾಡಿಸೋಣ ಎಂದರು. ಹೊಸಹಳ್ಳಿ ಕೈಮರದ ಬಳಿ ಕೆರೆಸೂರಗೊಂಡನಹಳ್ಳಿ ಸರ್ವೆ ನಂ 35 ರಲ್ಲಿ ಹತ್ತಾರು ಎಕರೆ ಸರ್ಕಾರಿ ಜಾಗ ಇರುವ ಬಗ್ಗೆ ಜನರು ಮಾಹಿತಿ ನೀಡಿದರು. ತಕ್ಷಣ ಆರ್‌ಐ ಶ್ರೀನಿವಾಸ್ ಅವರನ್ನು ಕರೆದು ಈ ಜಾಗ ಮಂಜೂರಾತಿಗೆ ಅಗತ್ಯ ದಾಖಲೆಗಳನ್ನು ಸಿದ್ದಪಡಿಸುವಂತೆ ಸೂಚಿಸಿದರು. ಅಲ್ಲದೆ ಮೂರ್‍ನಾಲ್ಕು ತಿಂಗಳಲ್ಲಿ ನಿವೇಶನದ ಬೇಡಿಕೆಗೆ ಪರಿಹಾರ ಕಂಡುಕೊಳ್ಳುವುದಾಗಿ ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿಯ ಡ್ರೈನೇಜ್ ತುಂಬಿಕೊಂಡಿದ್ದರೂ ಸ್ವಚ್ಚಗೊಳಿಸದೆ ನಿರ್ಲಕ್ಷ್ಯಿಸಿರುವುದರಿಂದ ಸೊಳ್ಳೆಯ ಆಶ್ರಯತಾಣವಾಗಿದೆಯಲ್ಲದೆ ರಸ್ತೆಯಲ್ಲಿ ಓಡಾಡಲಾಗದಷ್ಟು ದುರ್ನಾತ ಬೀರುತ್ತಿದೆ ಎಂದು ಸ್ಥಳೀಯರು ದೂರಿದರು.



ತಕ್ಷಣ ಹೈವೆ ಎಂಜಿನಿಯರ್ ಲಕ್ಷ್ಮೀಕಾಂತ್ ಹಾಗೂ ಗುತ್ತಿಗೆದಾರರಿಬ್ಬರಿಗೂ ದೂರವಾಣಿ ಕರೆ ಮಾಡಿ ಹತ್ತದಿನ್ನೈದು ದಿನದಲ್ಲಿ ಚರಂಡಿ ಕ್ಲೀನ್ ಆಗಬೇಕು ಎಂದು ಸೂಚಿಸಿದರು. ಅಲ್ಲದೆ ಅರ್ಧ ಮಾಡಿ ಬಿಟ್ಹೋಗಿರುವ ರಸ್ತೆ ಕಾಮಗಾರಿಯ ದೂರಿಗೆ ನಗರೋತ್ಥಾನ ಎಂಜಿನಿಯರ್‌ಗೆ ಶೀರ್ಘ ಕಾಮಗಾರಿ ಪೂರ್ಣಗೊಳಿಸುವಂತೆ ತಿಳಿಸಿದರು. ಕಸ ವಿಲೇವಾರಿ ಘಟಕದ ಸಮಸ್ಯೆಯ ಬಗ್ಗೆ ತಹಸೀಲ್ದಾರ್ ಅವರಿಗೆ ತಕ್ಷಣ ಸ್ಥಳ ಗುರಿತಿಸುವಂತೆ ಸೂಚಿಸಿದರು.

ಉಳಿದಂತೆ ಖಾತೆ ಆಗದಿರುವ ಬಗ್ಗೆ, ಹೈವೆ ಬೀದಿ ದೀಪ ಬೆಳಗದ ಬಗ್ಗೆ, ಸಮರ್ಪಕವಾಗಿ ನೀರು ಪೂರೈಕೆಯಾಗದ ಬಗ್ಗೆ, ಚರಂಡಿ ಸ್ವಚ್ಚವಾಗದ ಬಗ್ಗೆ, ರಸ್ತೆ ಬದಿಯಲ್ಲಿ ಜಂಗಲ್ ಕ್ಲೀನ್ ಆಗದ ಬಗ್ಗೆ, ಚರಂಡಿ ಕಾಮಗಾರಿ ಮಾಡದಿರುವ ಬಗ್ಗೆ ದೂರುಗಳು ಕೇಳಿ ಬಂದವು. ಮುಖ್ಯಾಧಿಕಾರಿಗಳಿಗೆ ಮುಂದಿನ ಜನಸ್ಪಂದನಾ ಸಭೆಯೊಳಗೆ ಈ ರೀತಿಯ ದೂರು ಕೇಳಿ ಬರದಂತೆ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಪಪಂ ಅಧ್ಯಕ್ಷೆ ರತ್ನಮ್ಮ, ಉಪಾಧ್ಯಕ್ಷೆ ಕಾವ್ಯರಾಣಿ, ಸದಸ್ಯರುಗಳಾದ ಬೀಬೀಫಾತೀಮಾ, ಪ್ರೀತಿ, ದಯಾನಂದ್, ರಾಜುಬಡಗಿ, ದಸ್ತುಗಿರಿಸಾಬ್ ಎಂಜಿನಿಯರ್ ಮಂಜುನಾಥ್, ಆರ್‌ಐ ಶೃತಿಬನಾರ, ಹೆಲ್ತ ಇನ್ಸ್‌ಪೆಕ್ಟರ್ ಮಾರೇಗೌಡ ಮತ್ತಿತರರು ಇದ್ದರು.

ತಾಲೂಕು ಮಟ್ಟದ ಅಧಿಕಾರಿಗಳಾದ ಬೆಸ್ಕಾಂ ಎಇಇ ಗವಿರಂಗಯ್ಯ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಚ್.ಎಸ್.ಶಿವರಾಜ್‌ಕುಮಾರ್, ಬಿಇಒ ಕಾಂತರಾಜು, ಪಶು ಇಲಾಖೆಯ ಸಹಾಯಕ ನಿರ್ದೇಶಕ ನಾಗಭೂಷಣ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಪಪಂ ಮಾಜಿ ಅಧ್ಯಕ್ಷ ಗೈರು

**ಹುಳಿಯಾರು ಪಪಂ ಮಾಜಿ ಅಧ್ಯಕ್ಷ ಕೆಎಂಎಲ್ ಕಿರಣ್ ಅವರು ತಮ್ಮ ವಾರ್ಡ್‌ನಲ್ಲೇ ಜನಸ್ಪಂದನ ಸಭೆ ಏರ್ಪಡಿಸಿದ್ದರೂ ಬಂದಿರಲಿಲ್ಲ. ಈ ಬಗ್ಗೆ ಶಾಸಕರು ತಮ್ಮ ಭಾಷಣದಲ್ಲಿ ಅಸಮಧಾನ ವ್ಯಕ್ತಪಡಿಸಿದರು. ಅವರ ವಾರ್ಡ್‌ಗೆ ಅನುದಾನ ಕೊಟ್ಟಿಲ್ಲವೆಂದು ಈ ಭಾಗದ ಸದಸ್ಯರು ಬಂದಿಲ್ವಂತೆ. ಅವರ ಮಾಹಿತಿಗಿರಲಿ ಎಂದು ಹೇಳುತ್ತಿದ್ದೇನೆ 15 ಲಕ್ಷ ರೂ. ಇದೇ ಬ್ಲಾಕಿಗೆ ಕೊಟ್ಟಿದ್ದೇನೆ. 45 ಲಕ್ಷ ರೂ.ನಲ್ಲಿ ಜೆಜೆಎಂ ಕಾಮಗಾರಿ ಮಾಡಿಸುತ್ತಿದ್ದೇನೆ. ಮುಂದಿನ ದಿನಗಳಲ್ಲಿ ಗಲ್ಲಿಗಲ್ಲಿಗೂ ಸಿಸಿ ರಸ್ತೆ ಮಾಡಿಸುತ್ತೇನೆ ಎಂದು ಶಾಸಕರು ಹೇಳಿದರು.**

### ಖಾತೆ ಮಾಡಲು ಕೊಡುವ ಅರ್ಜಿ ಕಾಣ್ಯೋಗ್ತಾವೆ

**ಖಾತೆ ಮಾಡಲು ಕೊಡುವ ಅರ್ಜಿಗಳು ಕಳೆದೋಗ್ತಿರ್ತಾವೆ ಸಾರ್, ಎಷ್ಟು ಬಾರಿ ಕೊಟ್ಟರೂ ಕಳೆದೋಗಿದೆ ಮತ್ತೊಂದು ಕೊಡಿ ಎನ್ನುತ್ತಾರೆ. ಅರ್ಜಿ ಕೊಟ್ಟುಕೊಟ್ಟು ಸಾಕಾಗಿದೆ. ಅಲ್ಲದೆ ಅರ್ಜಿ ಕೊಟ್ಟಿರುವಂತೆ ಸೀನಿಯಾರಿಟಿ ಪ್ರಕಾರ ಖಾತೆ ಮಾಡದೆ ಪ್ರಭಾವಿಗಳ, ಹಣಕೊಟ್ಟವರ ಖಾತೆಗಳು ಭೇಗ ಆಗುತ್ತಿವೆ ಎಂದು ತಾನು ಇದುವರೆವಿಗೂ ಕೊಟ್ಟಿರುವ ಅರ್ಜಿಯ ಸ್ವೀಕೃತಿಯನ್ನು ತೋರಿಸಿದರು. ಪಾರದರ್ಶಕವಾಗಿ ಖಾತೆ ಪ್ರಕ್ರಿಯೆ ನಡೆಸಿದಾಗ ಮಾತ್ರ ಬಡವರೂ ಇಲ್ಲಿ ಖಾತೆ ಮಾಡಿಸಿಕೊಳ್ಳಬಹುದು. ಇಲ್ಲವಾದರೆ ಕಷ್ಟಸಾರ್ ಎಂದು ಅವಲತ್ತುಕೊಂಡರು. ಈ ಸಮಸ್ಯೆಗೆ ಪರಿಹಾರದ ಮಾರ್ಗೋಪಾಯ ಕಂಡುಕೊಳ್ಳುವಂತೆ ಪಪಂ ಮುಖ್ಯಾಧಿಕಾರಿಗಳಿಗೆ ಶಾಸಕರು ಸೂಚಿಸಿದರು.**

### ನೀವು ಬರ್ತೀರ ಅಂತ ಕ್ಲೀನ್ ಮಾಡಿದ್ದಾರೆ

**ಮನೆ ಬಾಗಿಲಿಗೆ ಕಸದ ಟ್ರ್ಯಾಕ್ಟರ್ ಬಂದು ಆರು ತಿಂಗಳಾಗಿದೆ ಸಾರ್, ಉರ್ದು ಶಾಲೆಯ ಬಳಿಯ ಶುದ್ಧ ನೀರಿನ ಘಟಕದ ಬಳಿ ತಿಪ್ಪೆಯಾಗಿ ದುರ್ನಾತ ಬೀರ್‍ತಿತ್ತು ಸಾರ್, ಚರಂಡಿಗಳು ತುಂಬಿ ಸೊಳ್ಳೆಗಳ ಕಾಟ ಹೆಚ್ಚಾಗಿದೆ ಸಾರ್. ನೀವು ಬರ್ತಿದ್ದೀರಿ ಅಂತ ಈಗ ಕ್ಲೀನ್ ಮಾಡಿದ್ದಾರೆ ನೋಡಿ. ನೀವು ಹೋದ ಮೇಲೂ ಆಗಾಗ ಕ್ಲೀನ್ ಮಾಡಲು ಹೇಳಿ ಸಾರ್. ಇಲ್ಲಾ ಆಗಾಗ ನೀವೆ ಬಂದೋಗ್ತಿರಿ ಸಾರ್ ಎಂದು ಸಾರ್ವಜನಿಕರು ಸ್ವಚ್ಚತೆ ಮರೆತಿರುವ ಪಪಂನ ಬಗ್ಗೆ ಶಾಸಕರಿಗೆ ದೂರಿದ್ದು ಹೀಗಿತ್ತು.**

### ಅಂಗನವಾಡಿ ಕಟ್ಟಡ ನಿರ್ಮಿಸಲು ಮನವಿ

**ಹುಳಿಯಾರು ಪಟ್ಟಣದ 6 ಅಂಗನವಾಡಿ ಕಟ್ಟಡಗಳು ಬಾಡಿಗೆ ಕಟ್ಟಡದಲ್ಲಿ ಮಾಡಲಾಗುತ್ತಿದೆ. ಪಪಂ ಮುಖ್ಯಾಧಿಕಾರಿಗಳಿಗೆ ನಿವೇಶನ ಗುರುತಿಸುವಂತೆ ಅನೇಕ ಬಾರಿ ಮನವಿ ಕೊಟ್ಟಿದ್ದರೂ ಸಹ ಸ್ಪಂದಿಸುತ್ತಿಲ್ಲ ಎಂದು ಅಂಗನವಾಡಿ ನೌಕರರು ದೂರಿದರು. ಉರ್ದು ಸ್ಕೂಲ್ ಪಕ್ಕ ಶಿಥಿಲ ಕಟ್ಟಡವನ್ನು ಕೆಡವಿ ಹೊಸ ಕಟ್ಟಡ ಕಟ್ಟೋಣ, ರಾಮಹಾಲ್ ಮುಂಭಾಗದ ಕಟ್ಟಡವನ್ನು ಶೀಘ್ರ ದುರಸ್ತಿ ಮಾಡೋಣ, ಉಳಿದಂತೆ ಸರ್ಕಾರ ಜಾಗ ಗುರುತಿಸಿ ಕೊಟ್ಟರೆ ಕಟ್ಟಡಕ್ಕೆ ಅನುದಾನ ಕೊಡಿಸುವ ಭರವಸೆಯನ್ನು ಶಾಸಕರು ಈ ಸಂದರ್ಭದಲ್ಲಿ ನೀಡಿದರು.**

## ಮಾಜಿ ಸೈನಿಕರಿಗೆ ನಾಗರಿಕ ರಕ್ಷಣಾ ಪಡೆಯಲ್ಲಿ ನೊಂದಾಯಿಸಲು ಅವಕಾಶ

**ಬೆಂಗಳೂರು:** ನಾಗರಿಕ ರಕ್ಷಣಾ ಇಲಾಖೆಯು ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದಲ್ಲಿ ಪ್ರಕೃತಿ ವಿಕೋಪ, ಅಗ್ನಿ ದುರಂತ, ರಸ್ತೆ ಅಪಘಾತ, ಕಟ್ಟಡ ದುರಂತದಂತಹ ತುರ್ತು ಸಂದರ್ಭದಲ್ಲಿ ನಾಗರಿಕರ ರಕ್ಷಣೆಗೆ ಸ್ಪಂದಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ನಾಗರಿಕ ರಕ್ಷಣಾ ಪಡೆಯಲ್ಲಿ ಮಾಜಿ ಸೈನಿಕರು ನೋಂದಾಯಿಸಲು ಅವಕಾಶ ಕಲ್ಪಿಸಲಾಗಿದೆ. ನಾಗರಿಕ ರಕ್ಷಣಾ ಪಡೆ ಎಂದರೆ ಯುದ್ಧ ಅಥವಾ ನೈಸರ್ಗಿಕ ವಿಕೋಪಗಳಂತಹ ವಿಪತ್ತುಗಳ ಸಮಯದಲ್ಲಿ ನಾಗರಿಕರನ್ನು ರಕ್ಷಿಸಲು ಕೈಗೊಳ್ಳುವ ಕ್ರಮಗಳು, ಸಾರ್ವಜನಿಕ ಆಸ್ತಿ ಪಾಸ್ತಿಗಳು, ಸ್ಥಳಗಳು ಮತ್ತು ವ್ಯಕ್ತಿಗಳನ್ನು ರಕ್ಷಿಸುವ ಗುರಿಯನ್ನು ಹೊಂದಿರುತ್ತದೆ. ನಾಗರಿಕ ರಕ್ಷಣೆಯು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಮತ್ತು ವಿಪತ್ತು ನಿರ್ವಹಣೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಇತ್ತೀಚೆಗೆ ನಾಗರಿಕ ರಕ್ಷಣಾ ಪಡೆಗೆ ಸೇರುವುದನ್ನು ಆನ್‌ಲೈನ್ ಮತ್ತು ಮೊಬೈಲ್ ಆಪ್ ಮೂಲಕ ಸರಳಗೊಳಿಸಲಾಗಿರುತ್ತದೆ. ಆದುದರಿಂದ ಆಸಕ್ತ ಮಾಜಿ ಸೈನಿಕರು ವೆಬ್‌ಸೈಟ್ : www.civildefencewarriors.gov.in ಮತ್ತು ಮೊಬೈಲ್ ಆಪ್- CD warriors ಮೂಲಕ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಅವಕಾಶ ನೀಡಲಾಗಿರುತ್ತದೆ. ಎಲ್ಲಾ ಮಾಜಿ ಸೈನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ನಾಗರಿಕ ರಕ್ಷಣಾಪಡೆಗೆ ನೋಂದಾಯಿಸಿಕೊಂಡ ನಂತರ ಮಾಜಿ ಸೈನಿಕರು ತಮ್ಮ ನೋಂದಾಯಿಸಿದ ವಿವರಗಳನ್ನು ತಮ್ಮ ಜಿಲ್ಲಾ ಸೈನಿಕ ಕಾರ್ಯಾಲಯಕ್ಕೆ ಸಹ ನೀಡಬೇಕು ಎಂದು ಬೆಂಗಳೂರು ನಗರ ಜಿಲ್ಲೆಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಸ್ಯ ಸಂತೆಯಲ್ಲಿ ಮಾರಾಟ ಮಳಿಗೆ ನೋಂದಣಿಗೆ ಅವಕಾಶ

**ಬೆಂಗಳೂರು:** ಬೆಂಗಳೂರಿನ ಪ್ರಾದೇಶಿಕ ತೋಟಗಾರಿಕೆ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಆವರಣ, ಜಿಕೆವಿಕೆ ಅಂಚೆ, ವಿದ್ಯಾರಣ್ಯಪುರ- ಯಲಹಂಕ ರಸ್ತೆ ಇಲ್ಲಿ ಜುಲೈ 11 ರಿಂದ ಜುಲೈ 13, 2025 ರ ವರೆಗೆ ಸಸ್ಯ ಸಂತೆ ಯನ್ನು ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಈ ಸಸ್ಯ ಸಂತೆಯಲ್ಲಿ ಹಣ್ಣಿನ ಕಸಿ ಸಸಿಗಳು, ತರಕಾರಿ ಬೀಜ, ಔಷಧೀಯ ಮತ್ತು ಸುಗಂಧಿ ಸಸಿಗಳು ಮತ್ತು ಅಲಂಕಾರಿಕ ಸಸಿಗಳು, ಎರೆಹುಳು ಗೊಬ್ಬರ, ಜೈವಿಕ ಗೊಬ್ಬರ, ಇತರೆ ಸಾವಯವ ಪರಿಕರಗಳು, ಪೀಡೆನಾಶಕ, ಕೃಷಿ ಉಪಕರಣಗಳು, ಗಾರ್ಡನ್ ಪರಿಕರಗಳು ಮತ್ತು ಹೂವಿನ ಕುಂಡಗಳನ್ನು ಹಾಗೂ ಸಾವಯವ ಆಹಾರ ಪದಾರ್ಥಗಳನ್ನು ಮಾರಾಟ ಮಾಡಲು ಮಾರಾಟ ಮಳಿಗೆ ನೋಂದಾಯಿಸಿಕೊಳ್ಳಲು 7795072699/ 7892057925/ 9538771475ನ್ನು ಸಂಪರ್ಕಿಸಬಹುದು ಎಂದು ಸಹ ಸಂಶೋಧನಾ ಮತ್ತು ವಿಸ್ತರಣಾ ನಿರ್ದೇಶಕ ಡಾ. ಎಸ್.ಎಲ್. ಜಗದೀಶ್ ತಿಳಿಸಿದೆ.

## ರಾಜ್ಯ ಮಾಹಿತಿ ಆಯುಕ್ತರುಗಳ ಮಂಡ್ಯ ಜಿಲ್ಲೆ ಭೇಟಿ

**ಬೆಂಗಳೂರು:** ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರುಗಳಾದ ಬದ್ರುದ್ದೀನ್. ಕೆ ಮತ್ತು ಡಾ. ಹರೀಶ್ ಕುಮಾರ್ ಅವರು 2025ನೇ ಜೂನ್ 21 ರಂದು ಮಂಡ್ಯ ಜಿಲ್ಲೆಗೆ ಭೇಟಿ ನೀಡಿ, ಜಿಲ್ಲೆಯ ಅಧಿಕಾರಿಗಳು ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ''ಮಾಹಿತಿ ಹಕ್ಕು ಕಾಯ್ದೆ 2005'' ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಸಂವಾದ ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅಲ್ಲದೇ ''ಮಾಹಿತಿ ಹಕ್ಕು ಕಾಯ್ದೆ ಮಹತ್ವದ'' ಬಗ್ಗೆ ಸಾರ್ವಜನಿಕರೊಂದಿಗೆ ಚರ್ಚೆ ನಡೆಸಲಿದ್ದಾರೆ ಮತ್ತು ಅಂದು ಬೆಳಿಗ್ಗೆ 11.00 ಗಂಟೆಯಿಂದ 12.00 ಗಂಟೆಯವರೆಗೆ ಮಂಡ್ಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಸಂವಾದದ ನಂತರ ಮಧ್ಯಾಹ್ನ 12.00 ಗಂಟೆಯಿಂದ 12.30 ಗಂಟೆಯ ವರೆಗೆ ಸಾರ್ವಜನಿಕರೊಂದಿಗೆ ಚರ್ಚಿಸಲಿದ್ದಾರೆ. ಎಂದು ರಾಜ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ : ಜನೌಷಧ ಕೇಂದ್ರಗಳ ಸ್ಥಾಪನೆಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಜನೌಷಧ ಕೇಂದ್ರಗಳ ಸ್ಥಾಪನೆ ಮಾಡಲು ಉದ್ದೇಶಿಸಲಾಗಿದ್ದು, ಸದರಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ಆಸಕ್ತ ಡಿ ಫಾರ್ಮ ಅಥವಾ ಬಿ.ಫಾರ್ಮ ಆಗಿರುವ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ತಮ್ಮ ಸ್ವವಿವರಗಳೊಂದಿಗೆ ಪ್ರಮಾಣಪತ್ರದ ಜೆರಾಕ್ಸ್ ಪ್ರತಿ ಲಗತ್ತಿಸಿ ನಗರದ ಜಿಲ್ಲಾಡಳಿತ ಭವನದ 3ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 330ರ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಜೂನ್ 30ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಚಾಮರಾಜನಗರ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರಾದ ಜಿ.ಸಿ ಜ್ಯೋತಿ ಅರಸ್ ಮೊ.ಸಂ. 9008139232, ಚಾಮರಾಜನಗರ ಉಪವಿಭಾಗ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಪಿ. ಶೋಭಾ ಮೊ.ಸಂ. 9448750427, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಅಧೀಕ್ಷಕರಾದ ಎಸ್. ನಾಗೇಶ್ ಮೊ.ಸಂ. 9886355753, ಗುಂಡ್ಲುಪೇಟೆ ತಾಲ್ಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಎಂ.ಪಿ. ಪದ್ಮನಾಭ ಮೊ.ಸಂ. 8073184202, ಕೊಳ್ಳೇಗಾಲ ತಾಲ್ಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಸಿದ್ದಲಿಂಗಮೂರ್ತಿ ಮೊ.ಸಂ. 7676956380, ಯಳಂದೂರು ತಾಲ್ಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಎಸ್. ಸುಭಾಷಿಣಿ. ಮೊ.ಸಂ. 9900685310 ಸಂಪರ್ಕಿಸುವಂತೆ ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಮರಾಜೇಶ್ವರ ರಥೋತ್ಸವ ಹಿನ್ನೆಲೆ ರಥ ಚಲನ ಪೂಜೆ

**ಚಾಮರಾಜನಗರ:** ಜು.10 ರಂದು ಶ್ರೀಚಾಮ ರಾಜೇಶ್ವರ ಆಷಾಢ ಮಾಸದ ರಥೋತ್ಸವ ಹಿನ್ನೆಲೆಯಲ್ಲಿ ನಗರದಲ್ಲಿ ತೇರಿಗೆ ರಥ ಚಲನ ಪೂಜೆ ನೆರವೇರಿಸಲಾಯಿತು. ನಗರದ ಶ್ರೀಚಾಮರಾಜೇಶ್ವರ ದೇವ ಸ್ಥಾನದಲ್ಲಿ ಚಾಮ ರಾಜೇಶ್ವರನಿಗೆ ಅಲಂಕಾರ ಪೂಜೆ ಮಾಡಿ ವಿಶೇಷ ಸಲ್ಲಿಸಲಾಯಿತು. ನಂತರ ದೇವಸ್ಥಾನದ ಮುಂಭಾಗದಲ್ಲಿ ನಿಲ್ಲಿಸಲಾಗಿದ್ದ ರಥಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಎಂಎಸ್‌ಐಎಲ್ ಅಧ್ಯಕ್ಷ ಹಾಗೂ ಶಾಸಕ ಸಿ.ಪುಟ್ಟರಂ ಗಶೆಟ್ಟಿ ಅವರು ರಥಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು.

ರಥ ಚಲನ ಪೂಜೆಯು ರಥೋತ್ಸವದ ಭಾಗವಾಗಿದೆ. ಪೂಜೆಯಿಂದ ರಥವು ಸುಗಮವಾಗಿ ಚಲಿಸುತ್ತದೆ. ಅಲ್ಲದೆ ಭಕ್ತರಿಗೆ ಯಾವುದೇ ಅಡ್ಡಿಯಾಗುವುದಿಲ್ಲ ಎಂಬ ನಂಬಿಕೆ ಇದೆ. ಈ ಪೂಜೆಯು ದೇವರಿಗೆ ಸಲ್ಲಿಸುವ ಗೌರವ ಮತ್ತು ಭಕ್ತಿಯ ಸಂಕೇತವಾಗಿದೆ.

ಈ ಸಂದರ್ಭದಲ್ಲಿ ದೇವಸ್ಥಾನದ ಪ್ರಧಾನ ಅರ್ಚಕರು ದರ್ಶನ್, ಚಾಮುಂಡೇಶ್ವರಿ ದೇವಸ್ಥಾನದ ಅರ್ಚಕರಾದ ನಾಗರಾಜ ದೀಕ್ಷಿತ್, ಅನಿಲ್ಕುಮಾರ್ ದೀಕ್ಷಿತ್, ಅರ್ಚಕರಾದ ರಾಮಕೃಷ್ಣ ಭಾರದ್ವಾಜ್, ಶ್ರೇಯಸ್, ಅಣ್ಣಾಜಿ, ಚಿಕ್ಕಣ್ಣ, ಉತ್ಸವ ಸಮಿತಿ ಸದಸ್ಯರಾದ ಬಂಡಿಗಾರ್ ಮಹೇಶ್, ಪ್ರಭು, ಮನು, ಮುಖಂಡರಾದ ಜಯಕುಮಾರ್, ಸ್ವಾಮಿ, ಸುರೇಶ್, ಅತ್ಯಂತ ಮಹತ್ವದ ಕಾರ್ ದೇವರಾಜ್, ನಾಗೇಶ್, ಪ್ರವೀಣ್, ಪ್ರಜ್ವಲ್, ಅನಿಲ್, ಗಣಪತಿ, ಬಸವರಾಜ್ ಸೇರಿದಂತೆ ಇತರರಿದ್ದರು.



# ಕ್ರೀಡೆಗಳ ಅಭಿವೃದ್ಧಿಗೆ ಪೋಷಕರ ಸಹಕಾರ ಅಗತ್ಯ

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿ ಕ್ರೀಡೆಗಳು ವೇಗವಾಗಿ ದಾಪುಗಾಲನ್ನು ಹಾಕುತ್ತಿದ್ದು, ಕ್ರೀಡೆಗಳು ಮತ್ತಷ್ಟು ಅಭಿವೃದಿಯಾಗಲು ಪೋಷಕರ ಸಹಕಾರ ಅಗತ್ಯವಿದೆ ಎಂದು ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್‌ನ ಗೌರವ ಅಧ್ಯಕ್ಷರಾದ ಶ್ರೀಮತಿ ನರ್ಗೀಸ್‌ಬಾನು ತಿಳಿಸಿದರು.

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಚಾಲೆಂಜರ್ಸ್ ಸ್ಕೇಟಿಂಗ್ ಅಕಾಡೆಮಿ ಸಹಯೋಗದಲ್ಲಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು. ಪೋಷಕರು ತಮ್ಮ ಮಕ್ಕಳು ಡಾಕ್ಟರ್, ಇಂಜಿನಿಯರ್ ಮತ್ತಿತರ ಉನ್ನತ ಹುದ್ದೆಗೆ ತಮ್ಮ ಮಕ್ಕಳು ಏರಬೇಕೆಂದು ಪೋಷಕರು ಕನಸನ್ನು ಕಾಣುತ್ತಾರೆ. ಅದರ ಬದಲು ಮಕ್ಕಳ ಕನಸನ್ನು ಪೋಷಕರು ನನಸು ಮಾಡುವತ್ತ ಗಮನ ಹರಿಸಬೇಕು ಎಂದು ಪೋಷಕರಿಗೆ ಕಿವಿಮಾತು ಹೇಳಿದರು. ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಸುರೇಶ್ ರವರು ಮಾತನಾಡಿ, ವಿವಿಧ ಕ್ರೀಡೆಗಳನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಪೋಷಕರು ತಮ್ಮ ಸಹಕಾರ ನೀಡಬೇಕು ಎಂದರು. ಕ್ರೀಡೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರೇತರ ಸಂಸ್ಥೆಗಳ ಸಹಕಾರ ಅಗತ್ಯವಾಗಿದೆ. ಆಟೋಟ ಸ್ಪರ್ಧೆಗಳ ಜೊತೆಗೆ ತರಬೇತಿಗಳನ್ನು ನೀಡಲು ಮುಂದೆ ಬಂದರೆ ಇಲಾಖೆ ವತಿಯಿಂದ ಸ್ವಾಗತ ಕೋರುತ್ತೇನೆ. ಜೊತೆಗೆ ಇಲಾಖೆಯಿಂದ ಸಿಗಬೇಕಾದಂತಹ ಸವಲತ್ತನ್ನು ದೊರಕಿಸಲು ಇಲಾಖೆ ಸಿದ್ದವಿದೆ ಎಂದರು. ಇತ್ತೀಚೆಗೆ ಮಲೆ ಮಹದೇಶ್ವರ ಬೆಟ್ಟದಲ್ಲಿ



ನಡೆಸಿದ ಸಚಿವ ಸಂಪುಟ ಸಭೆಯಲ್ಲಿ 17 ಕೋಟಿ ರೂ.ಗಳನ್ನು ವಿವಿಧ ಕ್ರೀಡೆಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿದ್ದು, ವಿವಿಧ ಅಂಕಣಗಳನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಅಂದಾಜು ಪಟ್ಟಿ ತಯಾರಿಸಲಾಗುತ್ತಿದೆ ಎಂದರು. ಸ್ಕೇಟಿಂಗ್‌ರಿಂಗ್, ನೆಟ್ ಬಾಲ್, ಬ್ಯಾಸ್ಕೇಟ್ ಬಾಲ್ ಸೇರಿದಂತೆ ವಿವಿಧ ಅಂಕಣಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಇದರ ಜೊತೆಗೆ ಸ್ಥಗಿತಗೊಂಡಿರುವ ಈಜುಕೊಳವನ್ನು ಮುಂದುವರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು. ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್‌ನ ಜಿಲ್ಲಾಧ್ಯಕ್ಷ ವಿ.ಶ್ರೀನಿವಾಸಪ್ರಸಾದ್, ಎಂಇಟಿ ಆಂಗ್ಲ ಮಾಧ್ಯಮ ಶಾಲೆಯ ಪ್ರಾಂಶುಪಾಲ ಮೊಹಮ್ಮದ್ ಅಜೀಮ್, ಇನ್ಸ್ಟಾಗ್ರಾಂ ಪ್ರಭಾವಿ ಸೂಫಿ ರೋಷನ್, ಚಾಲೆಂಜರ್ಸ್ ಸ್ಕೇಟಿಂಗ್ ಅಕಾಡೆಮಿಯ ತರಬೇತುದಾರರಾದ ಫುರ್ಖಾನ್ ಪಾಷಾ, ಮಹಮ್ಮದ್ ಇದ್ರಿಸ್ ಸಾಹೇಬ್ ಹಾಜರಿದ್ದರು.

# ಹಾಡಹಗಲೇ ಮಹಿಳೆ ಮೇಲೆ ಹುಲಿ ದಾಳಿ : ದೇಶಿಪುರ ಕಾಲೋನಿ ಮಹಿಳೆ ಬಲಿ

**ಚಾಮರಾಜನಗರ:** ಹುಲಿ ದಾಳಿಗೆ ಕುರಿಗಾಹಿ ಮಹಿಳೆಯೊಬ್ಬಳು ಬಲಿಯಾಗಿರುವ ಘಟನೆ ಚಾಮರಾಜನಗರ ಜಿಲ್ಲೆಯ ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ ಓಂಕಾರ್ ಅರಣ್ಯ ವಲಯಕ್ಕೆ ಸೇರಿದ ದೇಶಿಪುರ ಕಾಲೋನಿಯಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ದೇಶಿಪುರ ಕಾಲೋನಿಯ ಹಾಡಿಯ ಪುಟ್ಟಮ್ಮ ಎಂಬ ಮಹಿಳೆ (36) ಹುಲಿ ದಾಳಿಗೆ ಬಲಿಯಾಗಿದ್ದಾರೆ. ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಕುರಿ ಮೇಯುಸಿತ್ತಿದ್ದ ಮಹಿಳೆಯ ಮೇಲೆರಗಿದ ಹುಲಿ ಕುತ್ತಿಗೆ ಮತ್ತು ಎದೆಭಾಗಕ್ಕೆ ಬಲವಾಗಿ ದಾಳಿ ನಡೆಸಿ ಕೊಂದುಹಾಕಿದೆ. ಮಹಿಳೆಯನ್ನ ಅರಣ್ಯದೊಳಗೆ ಎಳೆದೊಯ್ದು ಕೂಗಳತೆ ದೂರದಲ್ಲೇ ಬಿಟ್ಟು ಹೋಗಿದೆ. ಗ್ರಾಮಸ್ತರು ಪುಟ್ಟಮ್ಮನಿಗಾಗಿ ಹುಡುಕಾಟ ನಡೆಸಿದ ವೇಳೆ ಶವವಾಗಿ ಪತ್ತೆಯಾಗಿದ್ದಾರೆ. ಸ್ಥಳಕ್ಕೆ ಓಂಕಾರ್ ಅರಣ್ಯ ವಲಯದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

# ಯುವ ಕಾಂಗ್ರೆಸ್ ಸಮಿತಿಯಿಂದ ರಾಹುಲ್ ಹುಟ್ಟುಹಬ್ಬ ಆಚರಣೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲ್ಲೂಕ್ ಯುವ ಕಾಂಗ್ರೆಸ್ ಹಾಗೂ ನಂದಿಹಳ್ಳಿ ಗ್ರಾಮಸ್ಥರಿಂದ ರಾಷ್ಟ್ರೀಯ ಕಾಂಗ್ರೆಸ್ ನಾಯಕರು ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ರವರ ಜನ್ಮದಿನ ಆಚರಿಸಲಾಯಿತು.ಹುಳಿಯಾರು ಹೋಬಳಿಯ ನಂದಿಹಳ್ಳಿ ಹಿರಿಯ ಪ್ರಾಥಮಿಕ ಪಾಠಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಪೆನ್ನು ಮತ್ತು ಸಿಹಿ ವಿತರಿಸಿ ಮೊಬೈಲ್ ಬಳಕೆ ಕಡಿಮೆ ಮಾಡಿ ವಿದ್ಯಾಭ್ಯಾಸದ ಕಡೆ ಗಮನ ಹರಿಸಬೇಕು ಎಂದು ಕಿವಿ ಮಾತು ಹೇಳಲಾಯಿತು. ಯೂತ್ ಕಾಂಗ್ರೆಸ್ ಅಧ್ಯಕ್ಷ ಮಣಿಕಂಠ, ಎಸ್‌ಡಿಎಂಸಿ ಅಧ್ಯಕ್ಷರಾದ ಮಂಜುನಾಥ್, ತಾಲ್ಲೂಕ್ ಗ್ಯಾರಂಟಿ ಯೋಜನೆ ಉಪಾಧ್ಯಕ್ಷ ಪಾಂಡುರಂಗಯ್ಯ,



ಟಿಎಸ್‌ಹಳ್ಳಿಯ ಗ್ರಾಪಂ ಸದಸ್ಯರಾದ ಪ್ರಕಾಶ್, ಕಾಂಗ್ರೆಸ್ ಮುಖಂಡರಾದ ಬಸವರಾಜು, ಹನುಮೇಗೌಡ, ರಂಗಯ್ಯ, ಮಂಜುನಾಥ್, ಕುಮಾರ್, ಅನಂತರಾಜು, ಹನುಮಂತಯ್ಯ, ಅಶೋಕ್, ಗವಿರಂಗಯ್ಯ, ಅಂಜನಪ್ಪ ಉಪಸ್ಥಿತರಿದ್ದರು.

# ಭೂಮಿಯಿಂದ ಹೊರ ಬಂದ ಮನುಷ್ಯನ ಮುಂಗೈ : ಪೊಲೀಸರಿಂದ ಪರಿಶೀಲನೆ

**ಚಾಮರಾಜನಗರ :** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಹಳೇ ಹಂಪಾಪುರ ಗ್ರಾಮದ ಹೊರವಲಯದ ಭೂಮಿಯ ಹಳ್ಳದಲ್ಲಿ ಹುದುಗಿ ಹೋಗಿರುವ ಮನುಷ್ಯನ ಮುಂಗೈ ಮೇಲೆ ಬಂದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಸಮೀಪದಲ್ಲೇ ಪೂಜೆಯ ಕೆಲವು ವಸ್ತುಗಳು ಬಿದ್ದಿರುವುದು ವಾಮಾಚಾರ ಶಂಕೆ ಮೂಡಿಸಿದೆ. ಚಾಮರಾಜನಗರ ತಾಲ್ಲೂಕಿನ ಸುವರ್ಣಾವತಿ ಹೊಳೆ ನೀರು ಹರಿಯುವ ಹಳ್ಳದ ಹತ್ತಿರದ ಜಾಗದಲ್ಲಿ ಮನುಷ್ಯನ ಬೆರಳುಗಳು ಕಾಣುವಂತೆ ಮುಂಗೈ ಭೂಮಿಯ ಒಳಗಿನಿಂದ ಮೇಲೆ ಬಂದ ಸ್ಥಿತಿಯಲ್ಲಿ ಗುರುವಾರ ಗ್ರಾಮಸ್ಥರಿಗೆ ಕಾಣಿಸಿದೆ. ಈ ವಿಷಯವನ್ನು ತಿಳಿದ ಪಟ್ಟಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ ತನಿಖೆ ಕೈಗೊಂಡಿದ್ದಾರೆ. ಈ ಕುರಿತು ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಡಿವೈಎಸ್ಪಿ ಧರ್ಮೇಂದ್ರ, ಮಾತನಾಡಿ, ಭೂಮಿಯಲ್ಲಿ ಮನುಷ್ಯನ ಕೈ ಕಾಣಿಸುವಂತಿದ್ದು, ಸ್ಥಳದಲ್ಲಿ ಮೃತದೇಹವಿದೆ ಎಂದು ಹೇಳಲಾಗುತ್ತಿದ್ದು ಸದರಿ ಜಾಗದಲ್ಲಿ ಒಂದು ದೀಪ, ಕುಡಿಯುವ ನೀರಿನ ಬಾಟಲಿ ಇದೆ ಎಂದು ಹೇಳಲಾಗುತ್ತಿದೆ. ಸತ್ತಿರುವವರನ್ನು ಹೂತು ಹಾಕಿದ್ದಾರಾ ಇಲ್ಲಾ ಕಬಿನಿಯಲ್ಲಿ ನೀರು ಬಿಟ್ಟಿರುವುದರಿಂದ ಮಣ್ಣೆಲ್ಲ ಕೊಚ್ಚಿಕೊಂಡು ಹೋಗಿ ಕೈ ಕಾಣಿಸುತ್ತಿರಬಹುದಾ ಅಥವಾ ಕೊಲೆ ಮಾಡಿ ಶವವನ್ನು ತಂದು ಹಾಕಿದ್ದಾರಾ ಎಂಬ ಅನುಮಾನಗಳಿವೆ. ಈ ಕುರಿತು ತನಿಖೆ ನಡೆಸಲಾಗುತ್ತಿದೆ ಎಂದರು. ಮಾಟ, ಮಂತ್ರ ವಾಮಾಚಾರ ಶಂಕೆ ಸುತ್ತಕೊಳ್ಳೇಗಾಲ ವಾಮಾಚಾರದ ಅಪಖ್ಯಾತಿಯಿಂದ ಹೊರಬರುತ್ತಿದೆ.ಜಿಲ್ಲೆಯಲ್ಲಿ ಶೈಕ್ಷಣಿಕವಾಗಿ ಸಾಧನೆ ಮಾಡುತ್ತಿದೆ. ಆದರೂ ಕೊಳ್ಳೇಗಾಲವೆಂದರೆ ಮಾಟ-ಮಂತ್ರ ಎನ್ನುವುದು ಮಾತುಗಳು ನಿಲ್ಲುತ್ತಿಲ್ಲ. ನೆಲದಿಂದ ಹೊರಬಂದ ಸ್ಥಿತಿಯಲ್ಲಿ ಕೈ ಕಾಣಿಸಿ ಕೊಂಡಿದ್ದು, ಸಮೀಪದಲ್ಲೇ ದೀಪ, ಕುಡಿಯುವ ನೀರಿನ ಬಾಟಲಿ ಕಾಣಿಸಿದೆ ಎಂದು ಡಿವೈಎಸ್ಪಿ ಧರ್ಮೇಂದ್ರ ಹೇಳಿರುವುದು ವಾಮಾಚಾರದ ಶಂಕೆಯನ್ನು ಮೂಡಿಸಿದೆ. ಪೊಲೀಸರು ತನಿಖೆ ನಡೆಸಿ ನಿಜಾಂಶ ಬಯಲಿಗೆಳೆದ ಬಳಿಕವಷ್ಟೇ ಸತ್ಯ ತಿಳಿಯಲಿದೆ.ಈ ವಿಚಾರ ಸಂಬಂಧ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ. ಟಿ. ಕವಿತಾ ಭೇಟಿ ನೀಡುವುದಾಗಿ ತಿಳಿಸಿದ್ದಾರೆ.

# ವಿದ್ಯಾರ್ಥಿವೇತನ, ಪ್ರೋತ್ಸಾಹಧನ ಅಭಿಯಾನ

**ಬೆಂಗಳೂರು:** ಸಮಾಜಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ವಿದ್ಯಾರ್ಥಿವೇತನ, ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾವಕಾಶ ಕಾರ್ಯಕ್ರಮಗಳಡಿ ಪ್ರತಿಶತ ಗುರಿ ಸಾಧಿಸಲು 2025 ನೇ ಜೂನ್ 10 ರಿಂದ ವಿದ್ಯಾರ್ಥಿವೇತನ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳು, ವಿದ್ಯಾರ್ಥಿವೇತನ ಹಾಗೂ ಪ್ರೋತ್ಸಾಹಧನ ಪಡೆಯಲು ಅನುಸರಿಸ ಬೇಕಾದ ಕ್ರಮಗಳು

ಕೇಂದ್ರ ಸರ್ಕಾರವು 2025-26 ನೇ ಸಾಲಿನಿಂದ ವಿದ್ಯಾರ್ಥಿಗಳು ಹಾಗೂ INO/EMPOWERMENT OFFICER ಗಳ ಆಧಾರ್ ಬಯೋಮೆಟ್ರಿಕ್ ಇ-ದೃಡೀಕರಣವನ್ನು ಕಡ್ಡಾಯಗೊಳಿಸಲಾಗಿರುತ್ತದೆ. ಈ ಸಂಬಂಧ 1 ರಿಂದ 8ನೇ ತರಗತಿಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ, 9 ಮತ್ತು 10 ನೇ ತರಗತಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಆಧಾರ್ ಬಯೋಮೆಟ್ರಿಕ್ ಇ-ದೃಢೀಕರಣ ಕಡ್ಡಾಯವಾಗಿರುತ್ತದೆ.

ಆಧಾರ್ ಬಯೋಮೆಟ್ರಿಕ್ ಇ-ದೃಢೀಕರಣವನ್ನು ಇ-ಆಡಳಿತ ಇಲಾಖೆಯ ನಾಗರೀಕ ಸರಬರಾಜು ಕೇಂದ್ರಗಳಾದ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಈ ಪ್ರಕ್ರಿಯೆಯನ್ನು ಉಚಿತವಾಗಿ ಕೈಗೊಳ್ಳಲು ಕ್ರಮವಹಿಸಲಾಗಿರುತ್ತದೆ. ಹಾಗೂ ತಾಲ್ಲೂಕು ವ್ಯಾಪ್ತಿಯ ಸಮಾಜ ಕಲ್ಯಾಣ ಇಲಾಖಾ ಕಛೇರಿಯಲ್ಲಿಯು ಸಹ ಸದರಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. 2024-25 ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 60% ಕ್ಕಿಂತ ಹೆಚ್ಚಿನ ಅಂಕ ಪಡೆದು ಉತ್ತೀರ್ಣರಾಗಿರುವ ಹಾಗೂ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ನೇರವಾಗಿ ಪ್ರೋತ್ಸಾಹಧನದ ಮೊತ್ತವನ್ನು ಜಮೆ ಮಾಡಲಾಗುವುದು. ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆಯಾಗದಿರುವ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಸಿ ಇಲಾಖೆಯ ವೆಬ್‌ಸೈಟ್ https://swdservices.karnataka.gov.in/PrizeMoneyClientAp/ ಮೂಲಕ ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸುವುದು. 2024-25 ನೇ ಸಾಲಿನಲ್ಲಿ ಪಿ.ಯು.ಸಿ, ಪದವಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಶೇ. 60% ಕ್ಕಿಂತ ಹೆಚ್ಚಿನ ಅಂಕ ಪಡೆದು ಉತ್ತೀರ್ಣರಾಗಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

ವಿದ್ಯಾರ್ಥಿಗಳಿಗೆ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ ಸೈಟ್ https://swd.karnataka.gov.in/ ನ್ನು ವೀಕ್ಷಿಸಬಹುದು ಎಂದು ಆನೇಕಲ್ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್-1) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅವಿಭಕ್ತ ಕುಟುಂಬಗಳ ಕೊರತೆಯೇ ಇಂದಿನ ಸಾಮಾಜಿಕ ದುಷ್ಕೃತ್ಯಗಳಿಗೆ ಕಾರಣ

**ವಿಜಯಪುರ:** ಬದಲಾಗುತ್ತಿರುವ ಕಾಲಮಾನದಲ್ಲಿ ಅವಿಭಕ್ತ ಕುಟುಂಬಗಳು ಕಣ್ಮರೆಯಾಗುತ್ತಿದ್ದು ಕೇವಲ ಗಂಡ-ಹೆಂಡತಿ ಮಾತ್ರ ವಾಸ ಮಾಡುತ್ತಾ ಏನಾದರೂ ಸಣ್ಣಪುಟ್ಟ ಘಟನೆಗಳಿಗೂ ಜಗಳವಾಡುತ್ತಾ ವಿವಾಹ ವಿಚ್ಛೇದನಗಳಿಗೆ ಒಳಗಾಗುತ್ತಿರುತ್ತಾರೆ, ಕೊನೆಯ ಪಕ್ಷ ಮಕ್ಕಳು ಹುಟ್ಟುವವರೆಗೂ ಉತ್ತಮ ಸಂಬಂಧಗಳು ಇರದಂತಹ ಪರಿಸ್ಥಿತಿಗಳು ಹೆಚ್ಚಾಗಿ ಕಂಡುಬರುತ್ತವೆ. ಆದರೆ ಈ ಹಿಂದಿನ ಕಾಲದಲ್ಲಿ ಅವಿಭಕ್ತ ಕುಟುಂಬಗಳು ಇದ್ದ ಸಂದರ್ಭದಲ್ಲಿ ಮನೆಯಲ್ಲಿ ಗಂಡ ಹೆಂಡತಿ ನಡುವೆ ಯಾವುದೇ ಸಮಸ್ಯೆಗಳು ಬಂದರು ಅವರಿಗೆ ಆಸರೆಯಾಗಿ ಚಿಕ್ಕಪ್ಪ, ದೊಡ್ಡಪ್ಪ, ಸೋದರತ್ತೆ, ಮಾವ, ಅಜ್ಜಿ, ಮುತ್ತಜ್ಜಿ ಮುಂತಾಗಿ ಯಾರಾದರೂ ಗಂಡ ಹೆಂಡತಿಯ ನಡುವಿನ ಸಮಸ್ಯೆಗಳಿಗೆ ಪರಿಹಾರ ನೀಡುತ್ತಿದ್ದರು ಎಂದು ಹಿರಿಯ ಪತ್ರಕರ್ತರಾದ ವಿಎಮ್ ಕಿಶೋರ್ ಕುಮಾರ್ ರವರು ತಿಳಿಸಿದರು.

ಅವರು ಇಲ್ಲಿನ ಎಸ್ ಎನ್ ಫಾರ್ಮ್ ಹೌಸ್ ನ ನಲ್ಲಿ ಜೆಸಿಐ ಹಾಗೂ ಸೀನಿಯರ್ ಚೇಂಬರ್ ವತಿಯಿಂದ ಏರ್ಪಡಿಸಲಾಗಿದ್ದ ಗುರುವಾರದಂದು ವಿವಾಹ ವಾರ್ಷಿಕೋತ್ಸವ ಆಚರಿಸಿಕೊಳ್ಳುತ್ತಿದ್ದ ಹಿರಿಯ ದಂಪತಿಗಳ ಕಾರ್ಕಳದಲ್ಲಿ ನಡೆದ ಅಂತರಾಷ್ಟ್ರೀಯ ತರಬೇತಿ ಕಾರ್ಯಾಗಾರದಲ್ಲಿ ತರಭೇತಿ ಪಡೆದು ಬಂದವರ ಅಭಿನಂದನ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಅಭಿನಂದನೆ ಸ್ವೀಕರಿಸಿದ ರೇಷ್ಮೆ ಗೂಡು ಮಾರುಕಟ್ಟೆಯ ನಿವೃತ್ತ ರೇಷ್ಮೆ ಅಧಿಕಾರಿ ವೆಂಕಟೇಶ್ ರವರು ಮಾತನಾಡಿ ಕುಟುಂಬದಲ್ಲಿ ಸಣ್ಣ ಪುಟ್ಟ



ಲೋಪದೋಷಗಳು ಮಾತುಕತೆಗಳು ನಡೆದರೂ ಸಹ ಹೊಂದಾಣಿಕೆಯಿಂದ ಜೀವನ ಸಾಗಿಸಿದಾಗ ಆ ಕುಟುಂಬ ಸ್ವರ್ಗದಂತಿರುತ್ತದೆ ಎಂದರು.

ಶಿಡ್ಲಘಟ್ಟ ರೇಷ್ಮೆ ಗೂಡಿನ ಮಾರುಕಟ್ಟೆಯ ಸಹಾಯಕ ನಿರ್ದೇಶಕರಾದ ಕೆ ತಿಮ್ಮರಾಜುರವರು ಮಾತನಾಡಿ ಕಳೆದ 40 ವರ್ಷಗಳಿಂದಲೂ ಜೆಸಿಐ ಸಂಸ್ಥೆ ತದನಂತರ ಅದರಲ್ಲಿನ ಮಾಜಿ ಅಧ್ಯಕ್ಷರುಗಳು ಸೀನಿಯರ್ ಚೇಂಬರ್ ಎಂದು ಮಾಡಿಕೊಂಡು ಎಂಟು ವರ್ಷಗಳಿಂದ ನಿರಂತರ ಸೇವೆ ಸಲ್ಲಿಸುತ್ತಾ ಬಂದಿರುವುದು ಸಾಮಾನ್ಯವಾದ ವಿಷಯವಲ್ಲವೆಂದು ಪ್ರತಿ ವರ್ಷವೂ ಹೊಸ ಹೊಸ ಅಧ್ಯಕ್ಷರುಗಳ ನೇತೃತ್ವದಲ್ಲಿ ವಿಶೇಷ ಸೇವ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು ಇನ್ನೂ ಹೆಚ್ಚಿನ ಸೇವೆ ಇವುಗಳಿಂದ ಜನತೆಗೆ ದೊರೆಯಲಿ ಎಂದು ಆಶಿಸಿದರು. ಅಧ್ಯಕ್ಷತೆ ವಹಿಸಿದ್ದ ಸೀನಿಯರ್ ಚೇಂಬರ್ ನ ವಿಜಯಪುರ ಘಟಕದ ಅಧ್ಯಕ್ಷರಾದ ಅನೀಸ್ ಉರ್ ರೆಹಮಾನ್ ರವರು ಮಾತನಾಡಿ ನಮ್ಮ ವಿಜಯಪುರ ಸಂಸ್ಥೆಯ ಸದಸ್ಯರುಗಳು ಕಾರ್ಕಳದಲ್ಲಿ ನಡೆದ ಅಂತರಾಷ್ಟ್ರೀಯ ತರಬೇತಿ ಕೇಂದ್ರದಲ್ಲಿ ಭಾಗವಹಿಸಿ ಅದರಲ್ಲಿಯೂ ನಮ್ಮ ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕರಾದ ಡಾ. ಎಮ್ ಶಿವಕುಮಾರ್ ರವರು ತರಬೇತುದಾರರಾಗಿಯೂ ಅಲ್ಲಿ ಕಾರ್ಯನಿರ್ವಹಿಸಿದ್ದು ನಮ್ಮ ಹೆಮ್ಮೆ ಎಂದು ತಿಳಿಸಿದರು. ರೇಷ್ಮೆ ಗೂಡು ಮಾರುಕಟ್ಟೆಯ ನಿವೃತ್ತ ರೇಷ್ಮೆ ಅಧಿಕಾರಿ ವೆಂಕಟೇಶ್- ಲಕ್ಷ್ಮಿ, ಜೆಎಸಿ ಕೋ ಆರ್ಡಿನೇಟರ್ ಮುನಿಕೃಷ್ಣಪ್ಪ- ಜಯಲಕ್ಷ್ಮಮ್ಮ, ಉಪಾಧ್ಯಕ್ಷರಾದ ಸೀನಿಯರ್ ಮುನಿವೀರಣ್ಣ-ಭಾರತಿ ಮತ್ತು ಹಿರಿಯ ಪತ್ರಕರ್ತರಾದ ವಿ .ಎಂ. ಕಿಶೋರ್ ಕುಮಾರ್-ಶೋಭಾ ದಂಪತಿಗಳಿಗೆ ಅಭಿನಂದಿಸಲಾಯಿತು. ರಾಷ್ಟ್ರೀಯ ಸೀನಿಯರ್ ಚೇಂಬರ್ ನಿರ್ದೇಶಕರಾದ ಎನ್.ಜಯರಾಂ, ಮ್ಯಾನೇಜ್ಮೆಂಟ್ ಶ್ರೀನಿವಾಸ್, ಎಂ ಶಿವಕುಮಾರ್, ಕಾರ್ಯದರ್ಶಿ ಎ ಸಿ ಆನಂದ್, ಖಜಾಂಚಿ ಗಳಾದ ಚಿದಾನಂದ ಮೂರ್ತಿ, ಜೆಸಿಐ ವಲಯ 14ರ ಅಧಿಕಾರಿಗಳು ಪುರಸಭಾ ಸದಸ್ಯರು ಆದ ಬೈರೇಗೌಡ, ದೇವನಹಳ್ಳಿ ಟಿಎಪಿಸಿಎಂಎಸ್ ನ ನಾಮಾಂಕಿತ ಸದಸ್ಯ ಬಿಜ್ಜವಾರ ನಾಗರಾಜು, ಎಸ್ ಆರ್ ಎಸ್ ಬಸವರಾಜು, ವಲಯ ತರಬೇತುದಾರರಾದ ಎಸ್ ರಮೇಶ್, ರೇಯಿಸ್ ವುರ್ ರೆಹಮಾನ್, ಶಿಕ್ಷಕರಾದ ನಾಗೇಶ್, ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷರಾದ ಚಂದ್ರಶೇಖರ್ ಹಡಪದ್ ಉಭಯ ಸಂಸ್ಥೆಯ ಪದಾಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

## ಮಾವಿಗೆ ಬೆಂಬಲ ಬೆಲೆ ಘೋಷಿಸಲು ಮನವಿ

**ಬೆಂಗಳೂರು:** ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್.ಮುನಿಯಪ್ಪ ರವರು ಇಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಮಾವಿಗೆ ಬೆಂಬಲ ಬೆಲೆ ಘೋಷಣೆ ಮಾಡಲು ಸರ್ಕಾರಕ್ಕೆ ಒತ್ತಾಯಿಸಿದರು. ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಮಾವಿನ ಹಣ್ಣಿಗೆ ಏಷ್ಯಾ ಖಂಡದಲ್ಲೇ ಅತಿ ಹೆಚ್ಚು ಪ್ರಸಿದ್ದಿ ಯಾಗಿದ್ದು ರೈತರು ನಿರ್ದಿಷ್ಟ ಬೆಲೆ ಇಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದಾರೆ ಈಗಾಗಲೇ ನೆರೆಯ ಆಂದ್ರ ಪ್ರದೇಶ ಸರ್ಕಾರವು ನಮ್ಮ ತೋತಾಪುರಿ ಮಾವಿನ ಹಣ್ಣಿನ ಮಾರಾಟಕ್ಕೆ ನಿರ್ಬಂಧವಿದಿಸಿದ್ದು ಮಾವಿಗೆ ಬೆಲೆ ಇಲ್ಲದೆ ರೈತರು ಕಂಗಾಲಾಗಿದ್ದಾರೆ. ಈಗಾಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಆಂದ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ರವರಿಗೆ ಪತ್ರ ಬರೆದಿದ್ದಾರೆ ನಮ್ಮ ಸರ್ಕಾರವು ರೈತರ ಪರವಾಗಿದ್ದು ರೈತರು ಬೆಳೆದ ಬೆಳೆಗೆ ಸಹಕಾರಿಯಾಗಲು ಬೆಂಬಲ ಬೆಲೆಯನ್ನು ನಿಗದಿಪಡಿಸಲು ಮುಖ್ಯಮಂತ್ರಿಗಳಿಗೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬೈರತಿ ಸುರೇಶ್ ,ಚಿಕ್ಕಬಳ್ಳಾಪುರ ಉಸ್ತುವಾರಿ ಸಚಿವರಾದ ಎಂ.ಸಿ ಸುಧಾಕರ್ ಹಾಗೂ ಕಂದಾಯ ಸಚಿವರಾದ ಕೃಷ್ಣ ಬೈರೇಗೌಡರವರು ದ್ವನಿಗೂಡಿಸಿದರು.

## ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2025-26ನೇ ಸಾಲಿನಲ್ಲಿ ಸೆರೆಬ್ರಲ್ ಪಾಲ್ಸಿ, ಮಸ್ಕೂಲರ್ ಡಿಸ್ಟ್ರೋಪಿ, ಪಾರ್ಕಿನ್ಸ್, ಮಲ್ಟಿಪಲ್ ಸೈರೋಸಿಸ್, ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ ರೂ.1,000/-ಗಳ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿನ ಸೆರೆಬ್ರಲ್ ಪಾಲ್ಸಿ, ಮಸ್ಕೂಲರ್ ಡಿಸ್ಟ್ರೋಪಿ, ಪಾರ್ಕಿನ್ಸ್, ಮಲ್ಟಿಪಲ್ ಸೈರೋಸಿಸ್, ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇನತರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿಗೆ ಆಗಸ್ಟ್ 31 ರೊಳಗೆ ಗ್ರಾಮೀಣ/ನಗರ ಮತ್ತು ತಾಲ್ಲೂಕು ಕಾರ್ಯಕರ್ತರಿಂದ ಅರ್ಜಿ ಪಡೆದು ಈ ಸೌಲಭ್ಯವನ್ನು ಪಡೆಯಬಹುದು. ದಾಖಲೆಗಳು: ವಿಕಲಚೇತನರ ವಿಶಿಷ್ಠ ಗುರುತಿನ ಚೀಟಿ (ಯುಡಿಐಡಿ), ಆಧಾರ್ ಕಾರ್ಡ್, ಜಂಟಿ ಭಾವಚಿತ್ರ (ವಿಕಲಚೇತನರ ಮತ್ತು ಆರೈಕೆದಾರರ), ಆರೈಕೆದಾರರ ಬ್ಯಾಂಕ್ ಪಾಸ್ ಬುಕ್ ಪ್ರತಿ, ಆರೈಕೆದಾರರ ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ: 08156-277114 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ.ಎಸ್.ಅರ್.ಟಿ.ಸಿ ಬಸ್ ಡಿಪೋ ಘಟಕದಲ್ಲಿ ಯೋಗ ತರಬೇತಿ

**ಚಿಕ್ಕಬಳ್ಳಾಪುರ:** 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಯುಕ್ತ ಗುರುವಾರ ಚಿಕ್ಕಬಳ್ಳಾಪುರದ ಕೆ,ಎಸ್.ಆರ್.ಟಿ.ಸಿ ಡಿಪೋ ಘಟಕದಲ್ಲಿ ಸಿಬ್ಬಂದಿಯವರಿಗೆ ಪೂರ್ವಭಾವಿಯಾಗಿ ಯೋಗ ತರಬೇತಿಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಚಿಂತಾಮಣಿ ಸರ್ಕಾರಿ ಆಯುರ್ವೇದ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಅನಿಲ್ ಕುಮಾರ್ ಹಾಗೂ ಯೋಗ ತರಬೇತುದಾರರು ಮುನಿರಾಜು ರವರು ಕಾರ್ಯಕ್ರಮವನ್ನು ನಡೆಸಿಕೊಟ್ಟರು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಸುಂದರ್ ರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದರು.

## ಜಿಲ್ಲಾ ನ್ಯಾಯಲಯದಲ್ಲಿ ಯೋಗ

**ಚಿಕ್ಕಬಳ್ಳಾಪುರ,** 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಯುಕ್ತ ಗುರುವಾರ ಚಿಕ್ಕಬಳ್ಳಾಪುರ ಜಿಲ್ಲಾ ನ್ಯಾಯಲಯದಲ್ಲಿ ಸಿಬ್ಬಂದಿಯವರಿಗೆ ಪೂರ್ವಭಾವಿಯಾಗಿ ಯೋಗ ಮತ್ತು ಪ್ರಾಣಯಾಮ ಅಭ್ಯಾಸ ತರಬೇತಿಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಯೋಗ ತರಬೇತುದಾರರು ಮುನಿರಾಜು ರವರು ಕಾರ್ಯಕ್ರಮವನ್ನು ನಡೆಸಿಕೊಟ್ಟರು ಎಂದು ಜಿಲ್ಲಾ ಆಯುಷ್ ಡಾ. ಸುಂದರ್ ರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದರು.

## ಗ್ರಾಹಕರ ಸಂವಾದ ಸಭೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ವಿಭಾಗ ವ್ಯಾಪ್ತಿಯ ಬೆ.ವಿ.ಕಂ, ಉಪ ವಿಭಾಗ ಕಚೇರಿಗಳಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಹಾಗೂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ರವರ ಅಧ್ಯಕ್ಷತೆಯಲ್ಲಿ ಜೂನ್ 21 ರಂದು ಮಧ್ಯಾಹ್ನ 3 ಗಂಟೆಗೆ ಗ್ರಾಹಕರ ಸಂವಾದ ಸಭೆ ಏರ್ಪಡಿಸಲಾಗಿದ್ದು, ಆಯಾ ಉಪವಿಭಾಗ ವ್ಯಾಪ್ತಿಗೆ ಒಳಪಡುವ ಗ್ರಾಹಕರು ಸಭೆಗೆ ಹಾಜರಾಗಿ, ವಿದ್ಯುತ್ ಸರಬರಾಜಿಗೆ ಸಂಬಂಧಪಟ್ಟಂತೆ ಏನಾದರೂ ಕುಂದುಕೊರತೆಗಳು ಇದ್ದಲ್ಲಿ ಕಾನೂನಾತ್ಮಕವಾಗಿ ಪರಿಹರಿಸಿಕೊಳ್ಳಬಹುದೆಂದು ಚಿಕ್ಕಬಳ್ಳಾಪುರ ಬೆವಿಕಂ, ಕಾರ್ಯನಿರ್ವಾಹಕ ಇಂಜಿನಿಯರ್ ಪಿ.ಜಿ.ರಮೇಶ್ ಕುಮಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಹಕ ಸಂವಾದ ಸಭೆ

**ಬೆಂಗಳೂರು:** ಬೆಸ್ಕಾಂನ ಎಲ್ಲಾ ಕಾರ್ಯ ಮತ್ತು ಪಾಲನಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 5.30ರವರೆಗೆ ಗ್ರಾಹಕ ಸಂವಾದ ಸಭೆ ನಡೆಯಲಿದೆ. ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಬೆಸ್ಕಾಂನ ಪ್ರಧಾನ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರಿ ಬಂದಾಗ ದೇವರು ಧರ್ಮವನ್ನು ಮರೆಯದಿರಿ

**ಬಾಳೆಹೊನ್ನೂರು:** ಮನುಷ್ಯನಿಗೆ ಬರುವ ಸಿರಿ ಸಂಪತ್ತು ಶಾಶ್ವತವಲ್ಲ, ಆಧ್ಯಾತ್ಮ ಜ್ಞಾನವೊಂದೇ ನಿಜವಾದ ಸಂಪತ್ತು. ಸಿರಿ ಬಂದಾಗ ದೇವರು ಮತ್ತು ಧರ್ಮವನ್ನು ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಸುಸಲಾದಿ ಗ್ರಾಮದಲ್ಲಿ ನಿರ್ಮಿಸಿದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಉದ್ಘಾಟನೆ ಲಿಂಗ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ದೇವರು ಕೊಟ್ಟ ಕೊಡುಗೆ ಬೇರಾರು ಕೊಡಲು ಸಾಧ್ಯವಿಲ್ಲ. ನಿಂತ ನೆಲ, ಕುಡಿಯುವ ನೀರು, ಬೀಸುವ ಗಾಳಿ ದೇವರು ಕೊಟ್ಟ ಅಮೂಲ್ಯ ವರ. ಉದಾತ್ತ ಮಾನವ ಜೀವನದಲ್ಲಿ ಒಂದಿಷ್ಟಾದರೂ ಶಿವಜ್ಞಾನ ಸಂಪಾದಿಸಿಕೊಳ್ಳದಿದ್ದರೆ ಮತ್ತು ಗುರು ಕಾರುಣ್ಯ ಪಡೆಯದೇ ಹೋದರೆ ಜೀವನ ವ್ಯರ್ಥವಾಗುತ್ತದೆ. ದೇವರ ಮೇಲಿನ ನಂಬಿಗೆ ಮತ್ತು ವಿಶ್ವಾಸವನ್ನು ಎಂದಿಗೂ ಕಳೆದುಕೊಳ್ಳಬಾರದು. ಜೀವನದ ವಿಕಾಸಕ್ಕೆ ತಂದ ನೀತಿ ನಿಯತ್ತುಗಳ ಪರಿಪಾಲನೆಯೇ ನಿಜವಾದ ಧರ್ಮ. ಮಾನವ ಜೀವನದ ಶ್ರೇಯಸ್ಸಿಗಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯರು ದಶವಿಧ ಸೂತ್ರಗಳನ್ನು ಬೋಧಿಸಿದ್ದಾರೆ. ಶರಣರು ಸಪ್ತ ಸೂತ್ರಗಳನ್ನು ಹೇಳಿದ್ದಾರೆ. ದೇವರು ಮತ್ತು ಧರ್ಮವನ್ನು ತೋರಿಸುವಾತನೇ ನಿಜವಾದ ಗುರು. ಪರಶಿವನ ಸಾಕಾರ ಇನ್ನೊಂದು ರೂಪವೇ ಗುರು. ಅಜ್ಞಾನ ಕಳೆದು ಜ್ಞಾನ ಜ್ಯೋತಿ ಬೆಳಗಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಸುಂದರವಾಗಿ ಕಟ್ಟಿ ಇಂದು ಉದ್ಘಾಟನೆ ಲಿಂಗ ಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ಧರ್ಮ ದೀಪೋತ್ಸವ ಸಂಯೋಜಿಸಿರುವುದು ತಮಗೆ ಅತ್ಯಂತ ಸಂತೋಷವನ್ನು ಉಂಟು ಮಾಡಿದೆ ಎಂದರು.

ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಮಾತನಾಡಿ ಮನುಷ್ಯ ಯಂತ್ರದಂತೆ ದುಡಿದರೂ ಮನಸ್ಸಿಗೆ ಶಾಂತಿಯಿಲ್ಲ. ಬೆಳೆಯುವ ಮಕ್ಕಳಿಗೆ ಭೌತಿಕ ಶಿಕ್ಷಣದ ಜೊತೆಗೆ ಸಂಸ್ಕಾರ ಕೊಡುವ ಕೆಲಸ ಮಾಡಬೇಕಾಗಿದೆ. ಸುಸಲಾದಿ ಗ್ರಾಮದ ಬಹು ದಿನಗಳ ಸಂಕಲ್ಪ ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನದೊಂದಿಗೆ ಪೂರ್ಣಗೊಂಡಿದೆ. ಆಗಾಗ ಇಂಥ ಧರ್ಮ ಕಾರ್ಯಗಳು ನಡೆದುಕೊಂಡು ಬರಬೇಕೆಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಜಯ ಮತ್ತು ಚನ್ನಪ್ಪ ಅವರು ಮಾತನಾಡಿ ವೀರಶೈವ ಧರ್ಮ ಮತ್ತು ಗುರು ಪರಂಪರೆ ಎಂದಿಗೂ ಮರೆಯಬಾರದೆಂದರು. ತಡವಲಗಾ ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಜಗಜೇವಣಿ ಮುಪ್ಪಿನಾರ್ಯ ಶಿವಾಚಾರ್ಯರು, ಹಾಗೂ ಗುಡ್ಡಾಪುರದ ಗುರುಪಾದೇಶ್ವರ ಶಿವಾಚಾರ್ಯರು ಉಪಸ್ಥಿತರಿದ್ದರು. ಶಾಸಕ ಗೋಪಿಚಂದ ಪಡೋಳಕರ, ಡಾ.ರವೀಂದ್ರ ಅರಳಿ, ಎಮ್. ಆರ್.ಪಾಟೀಲ, ಚನ್ನಪ್ಪಾ ಹೊರ್ತಿಕರ, ಉಮದಿ ಬಸವರಾಜ ಹಿರೇಮಠ ಅವರನ್ನು ಮೊದಲ್ಗೊಂಡು ಹಲವಾರು ಗಣ್ಯರು ಸಮಾರಂಭದಲ್ಲಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.

ಪ್ರಾತ:ಕಾಲದಲ್ಲಿ ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಉದ್ಘಾಟಿಸಿ ಲಿಂಗ ಪ್ರತಿಷ್ಠಾಪನೆ ಮತ್ತು ಕಳಸಾರೋಹಣವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ನೆರವೇರಿಸಿದರು. ಸಮಾರಂಭದ ಹಿಂದಿನ ದಿನ ಸಂಜೆ ಸುಸಲಾದಿ ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಸಂಭ್ರಮದ ಅಡ್ಡಪಲ್ಲಕ್ಕಿ ಮಹೋತ್ಸವ ಭಕ್ತ ಸಮುದಾಯದ ಮಧ್ಯೆ ವಿಜೃಂಭಣೆಯಿಂದ ಜರುಗಿತು. ದೇವಸ್ಥಾನ ಉದ್ಘಾಟನೆ ನಿಮಿತ್ಯ 5 ದಿನಗಳ ಕಾಲ ಜೇರಟಗಿಯ ವೇ.ಮಡಿವಾಳೇಶ್ವರ ಶಾಸ್ತ್ರಿಗಳಿಂದ ಆಧ್ಯಾತ್ಮಿಕ ಪ್ರವಚನ ಜರುಗಿತು. ಆಗಮಿಸಿದ ಸಕಲ ಸದ್ಭಕ್ತರಿಗೂ ಅನ್ನ ದಾಸೋಹ ಜರುಗಿತು.

# 17ಕ್ಕೂ ಹೆಚ್ಚು ವಿವಿಧ ಕಂಪನಿಗಳಿಂದ 150 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ



**ನಗರದ ಬಿ.ಹೆಚ್.ರಸ್ತೆಯ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಹಾಗೂ ಡಾ.ರೆಡ್ಡಿಸ್ ಫೌಂಡೇಷನ್ ಇವರುಗಳ ಸಂಯುಕ್ತಾಶ್ರಯದಲ್ಲಿ ಜೂನ್ 20 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಉದ್ಯೋಗ ಮೇಳವನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್, ಹಾಗೂ ಅನನ್ಯ ಕಾಲೇಜಿನ ಉದ್ಯೋಗ ಮತ್ತು ತರಬೇತಿ ಅಧಿಕಾರಿಗಳಾದ ಶ್ರೀಮತಿ ಶಮಂತ ಪ್ರಿಯ, ಡಾ.ರೆಡ್ಡಿಸ್ ಫೌಂಡೇಷನ್‌ನ ಪದಾಧಿಕಾರಿಗಳು ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.**

**ತುಮಕೂರು:** ಪ್ರತಿಯೊಬ್ಬ ವಿದ್ಯಾರ್ಥಿಯೂ ಸರ್ಕಾರ ಸಿಗುವ ಸೌಲಭ್ಯ ಹಾಗೂ ಕೌಶಲ್ಯವನ್ನು ಅಭಿವೃದ್ಧಿಪಡಿಸಲು ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದ್ದು ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ದೆಸೆಯಿಂದಲೇ ಕೌಶಲ್ಯಾಭಿವೃದ್ಧಿಗೆ ಒತ್ತು ಕೊಡಬೇಕು ಎಂದು ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ಟ್ರಸ್ಟಿಯಾದ ಡಾ.ಹೆಚ್.ಹರೀಶ್‌ರವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಗರದ ಬಿ.ಹೆಚ್.ರಸ್ತೆಯ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಹಾಗೂ ಡಾ.ರೆಡ್ಡಿಸ್ ಫೌಂಡೇಷನ್ ಇವರುಗಳ ಸಂಯುಕ್ತಾಶ್ರಯದಲ್ಲಿ ಜೂನ್ 20 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಉದ್ಯೋಗಮೇಳವನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಡಾ.ಹೆಚ್.ಹರೀಶ್‌ರವರು ಚಾಲನೆ ನೀಡಿ ಮಾತನಾಡುತ್ತಾ ಉದ್ಯೋಗ ಪಡೆದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿ ''ಮುಂದಿನ ದಿನಗಳಲ್ಲಿ ಇನ್ನು ಹೆಚ್ಚು ಉದ್ಯೋಗ ಮೇಳವನ್ನು ನಮ್ಮ ಕಾಲೇಜಿನ ವಿದ್ಯಾರ್ಥಿಗಳಲ್ಲದೆ, ಸಾಮಾನ್ಯ ಜನರಿಗೂ ಇತರೆ ಕಾಲೇಜಿನ ವಿದ್ಯಾರ್ಥಿಗಳಿಗೂ ಸಹ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗುವುದು. ಮತ್ತು ಉದ್ಯೋಗ ಆರೈಸಿ ಬರುವ ಎಲ್ಲಾ ವಿದ್ಯಾರ್ಥಿಗಳಿಗೆ ತರಬೇತಿಯನ್ನು ನೀಡಲು ನಾವು ಸದಾ ಸಿದ್ದರಾಗಿರುವುದಾಗಿ'' ಹೇಳಿದರು. ಈ ಉದ್ಯೋಗ ಮೇಳದಲ್ಲಿ 17ಕ್ಕೂ ಹೆಚ್ಚು ಕಂಪನಿಗಳು ಮತ್ತು 150ಕ್ಕೂ ಹೆಚ್ಚು ಉದ್ಯೋಗ ಆಕಾಂಕ್ಷಿಗಳು ತುಮಕೂರು ಜಿಲ್ಲೆಯ ವಿವಿಧ ಕಾಲೇಜುಗಳಿಂದ ಭಾಗವಹಿಸಿದ್ದರು. ಕಂಪನಿಗಳಾದ ಟಯೋಟಾ, ಟಿವಿಎಸ್ ಎಲೆಕ್ಟ್ರಾನಿಕ್ಸ್, ಕೋಟೆಕ್ ಮಹೀಂದ್ರಾ, ಮಣಪುರಂ ಫೈನಾನ್ಸ್, ಹೆಚ್.ಡಿ.ಎಫ್.ಸಿ ಬ್ಯಾಂಕ್ ಇನ್ನಿತರೆ ಕಂಪನಿಗಳು ಉದ್ಯೋಗ ಆಕಾಂಕ್ಷಿಗಳಿಗೆ ಮೌಖಿಕ ಸಂದರ್ಶನ ಮೂಲಕ ಸುಮಾರು 32ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಉದ್ಯೋಗ ಅವಕಾಶವನ್ನು ಕಲ್ಪಿಸಲಾಯಿತು. ಇದೇ ಸಂದರ್ಭದಲ್ಲಿ ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ. ವಿಶ್ವಾಸ್‌ರವರು ಮಾತನಾಡುತ್ತಾ ಉದ್ಯೋಗ ಮೇಳದ ಯಶಸ್ಸಿಗೆ ಕಾರಣಕರ್ತರದ್ದರು ಮತ್ತು ಉದ್ಯೋಗ ಮೇಳದ ಉಸ್ತುವಾರಿಯನ್ನು ಉದ್ಯೋಗ ಮತ್ತು ತರಬೇತಿ ಅಧಿಕಾರಿಗಳಾದ ಶ್ರೀಮತಿ ಶ್ರಮಂತಪ್ರಿಯರವರು ಅಚ್ಚುಕಟ್ಟಾಗಿ ಉದ್ಯೋಗ ಮೇಳದ ಯೋಜನೆಯನ್ನು ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಸಿ.ಎ. ಎಸ್.ವಿಶ್ವನಾಥ್, ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಚೆನ್ನಬಸವಪ್ರಸಾದ್‌ರವರು ಉದ್ಯೋಗ ಪಡೆದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದರು. ವಿದ್ಯಾರ್ಥಿಗಳಿಗೆ ಇನ್ನೂ ಹೆಚ್ಚಿನ ತರಬೇತಿಯನ್ನು ಪಡೆದು ಕೌಶಲ್ಯ ಅಭಿವೃದ್ಧಿಗೊಂಡಲು ಕರೆ ನೀಡಿದರು. ಈ ಉದ್ಯೋಗ ಮೇಳವನ್ನು ಆಯೋಜಿಸಿದ ಸಂಸ್ಥೆಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಿದ ಕಂಪನಿಗಳು ಮತ್ತು ರೆಡ್ಡಿಸ್ ಫೌಂಡೇಶನ್ ಅಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿ ಇನ್ನೂ ಹೆಚ್ಚಿನ ಉದ್ಯೋಗ ಮೇಳವನ್ನು ನಮ್ಮ ಸಂಸ್ಥೆಯ ವತಿಯಿಂದ ಆಯೋಜಿಸಲು ಸದಾ ಸಿದ್ದರಾಗಿರುವುದಾಗಿ ತಿಳಿಸಿದರು.

# ಸಂಸದರ ವಿರುದ್ಧ ಅವಹೇಳನ ಸಲ್ಲ

**ಚಿಕ್ಕಬಳ್ಳಾಪುರ :** ಚಿಕ್ಕಬಳ್ಳಾಪುರ ವಿಧಾನಸಭಾ ಶಾಸಕ ಪ್ರದೀಪ್ ಈಶ್ವರ್ ಬೆಂಬಲಿಗರು ಕಾಂಗ್ರೆಸ್ ಯುವ ಕಾರ್ಯಕರ್ತರ ವರ್ತನೆ ಸರಿಯಲ್ಲ. ಒಬ್ಬ ಸಂಸದರ ವಿರುದ್ದ ಏನು ಮಾತನಾಡಬೇಕೆಂಬ ಕನಿಷ್ಟ ಪ್ರಜ್ಞೆಯೂ ಇಲ್ಲದಂತಾಗಿದೆ ಕ್ಷೇತ್ರದ ಅಭಿವೃದ್ಧಿಗೆ ಡಾ ಕೆ ಸುಧಾಕರ್ ಕೊಡುಗೆ ಏನು ಎಂಬುದನ್ನ ದಾಖಲೆ ಸಮೇತ ಕೊಡ್ತೇವೆ ಎಂದು ನಗರಸಭೆ ಅಧ್ಯಕ್ಷ ಗಜೇಂದ್ರ ತಿರುಗೇಟು ನೀಡಿದ್ದಾರೆ.ಮೂರು ದಿನಗಳ ಹಿಂದೆ ಕ್ಯಾಬಿನೆಟ್ ಸಭೆ ವಿಚಾರವಾಗಿ ಸಂಸದ ಡಾ ಕೆ ಸುಧಾಕರ್ ಕರೆದಿದ್ದ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ವಿಚಾರದ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡಿ ಸಾಮಾಜಿಕ ಜಾಲತಾಣಗಳಲ್ಲಿ ಪೋಷ್ಟ್ ಮಾಡಿರುವ ಶಾಸಕ ಪ್ರದೀಪ್ ಈಶ್ಬರ್ ಬೆಂಬಲಿಗರಿಗೆ ಇಂದು ಡಾ ಕೆ ಸುಧಾಕರ್ ಬೆಂಬಲಿಗರ ಬಣವು ಖಾರವಾಗಿಯೆ ಉತ್ತರ ನೀಡಿದ್ದಾರೆ ಸಂಸದರ ಗೃಹ ಕಚೇರಿಯಲ್ಲಿ ನಡೆಸಿದ ಸುದ್ದಿಗೋಷ್ಟಿ ನಡೆಸಿದರು.

ಈ ವೇಳೆ ಮಾತನಾಡಿದ ನಗರಸಭಾಧ್ಯಕ್ಷ ಗಜೇಂದ್ರ, ನಗರಸಭೆ ವ್ಯಾಪ್ತಿಯಲ್ಲಿ ನೀಡಬೇಕಾಗಿರುವ ಬಿ ಖಾತೆಗಳು ಸಿದ್ದವಾಗಿದ್ದರೂ ನಗರಸಭೆ ಅಧಿಕಾರಿಗಳಿಂದ ಯಾರಿಗೂ ಕೊಡಿಸದೆ ತಡೆ ಹಿಡಿದಿದ್ದಾರೆ ನಗರ ಜನಸಂಖ್ಯೆ ಹೆಚ್ಚಾಗಿ ಈಗಿರುವ ಎಸ್ ಟಿ ಪಿ ಪ್ಲಾಂಟ್ ಸಾಕಾಗುತ್ತಿಲ್ಲ ಮತ್ತೊಂದು ಎಸ್ ಟಿ ಪಿ ಪ್ಲಾಂಟ್ ನಿರ್ಮಾಣಕ್ಕೆ 30 ಕೋಟಿ ಬಂದು ಖಾತೆಯಲ್ಲಿದ್ರೂ, ಅದರ ನಿರ್ಮಾಣಕ್ಕೆ ಶಾಸಕರು ಅನುಮತಿಸುತಿಲ್ಲ ನಮ್ಮ ಅಧಿಕಾರವದಿಯಲ್ಲಿ ಅಭಿವದ್ದಿ ಕೆಲಸಗಳಿಗೆ ಅವಕಾಶ ನೀಡಿದರೆ ಡಾ ಕೆ ಸುಧಾಕರ್ ಗೆ ಒಳ್ಳೆ ಹೆಸರು ಬರುತ್ತದೆಂಬ ದುರುದ್ದೇಶದಿಂದ ತಡೆ ಹಿಡಿಯುತಿದ್ದಾರೆ ಎಂದರು. ಸುದ್ದಿಗೋಷ್ಟಿಯಲ್ಲಿ ನಗರಾಭಿವೃದ್ದಿ ಪ್ರಾದಿಕಾರದ ಮಾಜಿ ಅಧ್ಯಕ್ಷ ಕೃಷ್ಣಮೂರ್ತಿ,ಅಶೋಕ್ ಕುಮಾರ್ ,ಟಿಎಪಿಸಿಎಂಎಸ್ ನಿರ್ದೇಶಕ ಈರಚಿನ್ನಪ್ಪ, ಸಂತೋಷ್,ಅನು ಆನಂದ್,ಸುಮಂತ್,ಕೊಡ ಯುವ ಕಾಂಗ್ರೆಸ್ ಮುಖಂಡ ವರ್ತನೆ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು.ಈ ವೇಳೆ ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ ಗಂಗರೆಕಾಲುವೆ ಪ್ರಸಾದ್,ತಿಪ್ಪೇನಹಳ್ಳಿ ಗ್ರಾಪಂ ಅಧ್ಯಕ್ಷ ಶಶಿಕುಮಾರ್ ,ಸ್ವಾತಿ ಮಂಜುನಾಥ್ ಅರುಣ್,ರಮೇಶ್, ಇತರರು ಇದ್ದರು.



## ಇಂದು ಯೋಗ ದಿನಾಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಚಿಕ್ಕಬಳ್ಳಾಪುರ ಮತ್ತು ಜಿಲ್ಲೆಯ ಯೋಗ ಸಂಸ್ಥೆಗಳ ಸಹಯೋಗದೊಂದಿಗೆ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ 2025, '' ಸಮಗ್ರ ಜಾಗತಿಕ ಆರೋಗ್ಯಕ್ಕಾಗಿ ಯೋಗ'' ಎಂಬ ಘೋಷವಾಕ್ಯದ ''ಯೋಗ ಸಂಗಮ'' ಕಾರ್ಯಕ್ರಮವನ್ನು ಜೂನ್ 21 ರಂದು ಸರ್ ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಲಾಗಿದೆ. ಭಾಗವಹಿಸಲು ಇಚ್ಛಿಸುವವರು ಸಡಿಲವಾದ ಉಡುಪನ್ನು ಧರಿಸಿ, ಯೋಮ್ಯಾಟ್/ಜಮಕಾನವನ್ನು ತರುವುದು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಸುಂದರ್ ರಾಜ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಕುರುಬರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ 140 ಎಲ್ ಕೆ ಜಿ, ಯು ಕೆ ಜಿ ಮಕ್ಕಳಿಗೆ ಮಹಾಲಕ್ಷ್ಮಿ ಎಜುಕೇಷನ್ ಟ್ರಸ್ಟ್ ವತಿಯಿಂದ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ ಅವರು ಪುಸ್ತಕ ಬ್ಯಾಗ್ ಸ್ವೆಟರ್ ವಿತರಿಸಿದರು ಈ ಸಂದರ್ಭದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಮಹಾಲಕ್ಷ್ಮಿ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಜಯರಾಮಯ್ಯ ಕ್ಷೇತ್ರದ ಮಂಡಲ ಅಧ್ಯಕ್ಷ ರಾಘವೇಂದ್ರ ಶೆಟ್ಟಿ, ಡಾ ಮಂಜುನಾಥ್ ಗೌಡ, ಬಿ ಇ ಓ ತಾರಾನಾಥ್, ಡಿ ಡಿ ಪಿ ಐ ಆಂಜನಪ್ಪ, ನಿವೃತ್ತ ಅಧಿಕಾರಿ ಕಾಂತರಾಜ್ ,ಬಿಜೆಪಿ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ನಿಸರ್ಗ ಜಗದೀಶ್ ಸೇರಿದಂತೆ ಮುಂತಾದವರಿದ್ದರು.**

## ಮಲೇರಿಯಾ ವಿರೋಧಿ ಮಾಸಾಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಗುರುವಾರ ಚಿಕ್ಕಬಳ್ಳಾಪುರ ತಾಲ್ಲೂಕಿನ ಪೆರೇಸಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಕೂಡ ಜೂನ್ ತಿಂಗಳಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷದಂತೆ 2025ನೇ ಸಾಲಿನ ಜೂನ್ ತಿಂಗಳಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆಯನ್ನು ಮಾಡಲಾಗುತ್ತದೆ. ''ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ, ಮರು ಹೂಡಿಕೆ ಮಾಡಿ, ಮರು ಕಲ್ಪನೆ ಮಾಡಿ, ಮರು ಉತ್ತೇಜನ ನೀಡಿ'' ಎಂಬ ಈ ವರ್ಷದ ಘೋಷ ವಾಕ್ಯದೊಂದಿಗೆ ಈ ದಿನ ಆಚರಿಸಲಾಗುತ್ತಿದೆ. ಮಲೇರಿಯಾ ವಿರೋಧಿ ಮಾಸಾಚರಣೆಯ ಅಂಗವಾಗಿ ಅಡಿಕ್ವೇಸಿ ಕಾರ್ಯಾಗಾರವನ್ನು ಹಮ್ಮಿಕೊಂಡು ಸೊಳ್ಳೆಯಿಂದ ಹರಡುವ ಜ್ವರಗಳಾದ ಮಲೇರಿಯಾ, ಡೆಂಗ್ಯೂ ಚಿಕನ್ ಗೂನ್ಯಾ, ಮೆದುಳು ಜ್ವರ, ಆನೆಕಾಲು ರೋಗಗಳಂತಹ ಪ್ರಕರಣಗಳ ಕುರಿತು ಕಾರ್ಯಾಗಾರದಲ್ಲಿ ಅರಿವು ಮೂಡಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಪೆರೇಸಂದ್ರ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗಂಗರತ್ನಮ್ಮ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಪ್ರಕಾಶ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿಜಯೇಂದ್ರ, ಕುಮಾರ್, ಗ್ರಾಮ ಪಂಚಾಯಿತಿ ಸದಸ್ಯೆ ಸಮೀನತಾಜ್, ಪೆರೇಸಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿರುವ ಎಲ್ಲಾ ಖಾಸಗಿ ಆಸ್ಪತ್ರೆ, ಕ್ಲಿನಿಕ್, ಪಾಲಿ ಕ್ಲಿನಿಕ್, ಡಯಾಗೋಸ್ಟಿಕ್ ಲ್ಯಾಬೋರೇಟರಿಗಳ ವೈದ್ಯರು ಹಾಗೂ ಪ್ರಯೋಗಶಾಲಾ ತಂತ್ರಜ್ಞರು, ಆರ್.ಎಂ.ಪಿ, ಆಯುಷ್, ಹೋಮಿಯೋಪಥಿ, ಸಿದ್ದ ನ್ಯಾಚುರೋಪಥಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು, ಆರೋಗ್ಯ ಸಿಬ್ಬಂದಿ ಇದ್ದರು.

# ತುಂಗಭದ್ರಾ ಡ್ಯಾಮ್ ಗೆ ಶಾಶ್ವತ ಕ್ರೆಸ್ಟ್ ಗೇಟ್ ಅಳವಡಿಸಲು ಕನ್ನಡ ಸೇನೆ ಆಗ್ರಹ

**ಬೆಂಗಳೂರು:** ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳ ರೈತರ ಜೀವನಾಡಿಯಾಗಿರುವ ತುಂಗಭದ್ರಾ ಡ್ಯಾಮ್ ಗೆ ಶಾಶ್ವತ ಕ್ರಸ್ಟ್ ಗೇಟ್ಗಳನ್ನು ಅಳವಡಿಸಬೇಕು ಹಾಗೂ ತುಂಗಭದ್ರಾ ನದಿಯಲ್ಲಿ ತುಂಬಿರುವ ಹೂಳನ್ನು ಎತ್ತಲು ಕೂಡಲೇ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಕನ್ನಡ ಸೇನೆ ರಾಜ್ಯಾಧ್ಯಕ್ಷ ಕೆ ಕುಮಾರ್ ಆಗ್ರಹಿಸಿದ್ದಾರೆ .

ಕನ್ನಡ ನಾಡು ನುಡಿ, ನೆಲ ಜಲ ಕುರಿತು ಅರಿವು ಮೂಡಿಸುವ ಸಂಬಂಧ ಕನ್ನಡ ಸೇನೆ ಕರ್ನಾಟಕದ ವತಿಯಿಂದ ಉತ್ತರ ಕರ್ನಾಟಕ ಭಾಗದಲ್ಲಿ ಹಮ್ಮಿಕೊಳ್ಳಲಾಗಿರುವ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಬುಧವಾರ ಮಾಜಿ ಸಚಿವರು ಹಾಗೂ ಶಾಸಕರಾದ ಕೆ ಗೋಪಾಲಯ್ಯ ಅವರು ಬೆಂಗಳೂರು ನಗರದ ಯಶವಂತಪುರ ಸಮೀಪ ಇರುವ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ , ಕನ್ನಡ ಚಳುವಳಿ ನಾಯಕ ವಾಟಾಳ್ ನಾಗರಾಜ್ ಹಾಗೂ ಹಿರಿಯ ಸ್ವತಂತ್ರ ಹೋರಾಟಗಾರ ಎಚ್ಎಸ್ ದೊರೆಸ್ವಾಮಿ ಅವರುಗಳ ಪುತ್ಥಳಿ ಬಳಿ ಕನ್ನಡ ಬಾವುಟ ತೋರಿಸುವ ಮೂಲಕ ಚಾಲನೆ ನೀಡಿದರು. ಈ ವೇಳೆ ಕನ್ನಡ ಸೇನೆಯ ರಾಜ್ಯ ಅಧ್ಯಕ್ಷರಾದ ಕೆ ಆರ್ ಕುಮಾರ್ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಇತ್ತೀಚೆಗಷ್ಟೇ ನೀರಿನ ರಭಸದಿಂದ ಕೊಚ್ಚಿ ಹೋಗಿದ್ದ 19ನೇ ಗೇಟ್ ಅಳವಡಿಸುವ ವೇಳೆ ನುರಿತ ಇಂಜಿನಿಯರ್ ಕನ್ನಯ್ಯ ನಾಯ್ಡು ಅವರು ರಾಜ್ಯ ಸರ್ಕಾರಕ್ಕೆ ಎಲ್ಲಾ ಗೇಟ್ಗಳನ್ನು ಹೊಸದಾಗಿ ಅಳವಡಿಸುವಂತೆ ಸಲಹೆ ನೀಡಿದ್ದರು ಆದರೆ ಸರ್ಕಾರ ಆ ಬಗ್ಗೆ ಗಮನ ಹರಿಸದೇ ಇರುವುದು ವಿಪರ್ಯಾಸ ಎಂದರು. ಡ್ಯಾಮ್ ನಿರ್ಮಾಣಗೊಂಡು ಸುಮಾರು 70 ವರ್ಷಗಳೇ ಕಳೆದಿವೆ ಆ ಸಂದರ್ಭದಲ್ಲಿ ಅಳವಡಿಸಿದ ಗೇಟ್ ಗಳೆಲ್ಲವೂ ತುಕ್ಕು ಹಿಡಿದು ಶಿಥಿಲಗೊಂಡಿರುವುದರಿಂದ ಸರ್ಕಾರ ಈ ಕೂಡಲೇ ಈ ಬಗ್ಗೆ ಗಮನ ಹರಿಸಬೇಕು ಎಲ್ಲಾ 33 ಗೇಟ್ಗಳನ್ನು ಹೊಸದಾಗಿ ಅಳವಡಿಸಬೇಕು ಎಂದು ಕೆಆರ್ ಕುಮಾರ್ ಆಗ್ರಹಿಸಿದರು.

ಒಂದು ವೇಳೆ ಸರ್ಕಾರ ಈ ಕೂಡಲೇ ಎಲ್ಲಾ ಟ್ರಸ್ಟ್ ಗೇಟ್ಗಳನ್ನು ಹೊಸದಾಗಿ ಅಳವಡಿಸಿದೆ ಇದ್ದಲ್ಲಿ ಸರ್ಕಾರದ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು. ತುಂಗಭದ್ರಾ ಡ್ಯಾಮ್ ಕರ್ನಾಟಕ, ಆಂಧ್ರ ಹಾಗೂ ತೆಲಂಗಾಣ ರಾಜ್ಯಗಳ ರೈತರ ಜೀವನಾಡಿಯಾಗಿದೆ ರೈತರ ವಿಷಯದಲ್ಲಿ ಸರ್ಕಾರ ನಿರ್ಲಕ್ಷ ತೋರುವುದು ಸೂಕ್ತವಲ್ಲ ಎಂದು ಕೆಆರ್ ಕುಮಾರ್ ಹೇಳಿದರು.

ತುಂಗಭದ್ರಾ ಡ್ಯಾಮ್ ಸುಮಾರು 133 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿದ್ದು ಡ್ಯಾಮ್ ನಿರ್ಮಾಣಗೊಂಡಾಗಿನಿಂದಲೂ ಹೂಳು ಎತ್ತದೇ ಇರುವ ಕಾರಣ ಪ್ರಸ್ತುತ 103 ಟಿಎಂಸಿ ನೀರು ಮಾತ್ರ ಸಂಗ್ರಹವಾಗುತ್ತಿದೆ , ಸರ್ಕಾರ ಈ ಕೂಡಲೇ ಟೆಂಡರ್ ಕರೆದು ಹೂಳು ಎತ್ತುವ ಕೆಲಸ ಮಾಡಬೇಕು ಎಂದು ಅವರು ಮನವಿ ಮಾಡಿದರು.

ಅದೇ ರೀತಿ ಕೊಪ್ಪಳದಲ್ಲಿ ಸ್ಥಾಪನೆಗೊಳ್ಳುತ್ತಿರುವ ಬುಲ್ಡೋಟ ಕಾರ್ಖಾನೆಯನ್ನು ಸ್ಥಳಾಂತರಗೊಳಿಸಬೇಕು ಎಂದು ಒತ್ತಾಯಿಸಿದ ಅವರು ಕಾರ್ಖಾನೆ ನಿರ್ಮಾಣದಿಂದಾಗಿ ವಿಷಯುಕ್ತ ಅನಿಲ ಹೊರ ಸೂಸಿ ಪರಿಸರ ಹಾಗೂ ಇಲ್ಲಿನ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ ಎಂದರು.ಕಾರ್ಖಾನೆ ನಿರ್ಮಾಣ ವಿರೋಧಿಸಿ ಇಲ್ಲಿನ ರೈತರು ಹಾಗೂ ಜನಸಾಮಾನ್ಯರು ಉಗ್ರ ಹೋರಾಟಕ್ಕೆ ಇಳಿದ ಕಾರಣ ಸರ್ಕಾರ ಕಾರ್ಖಾನೆ ನಿರ್ಮಾಣ ನಿರ್ಮಾಣಕ್ಕೆ ಅವಕಾಶ ಕೊಡುವುದಿಲ್ಲ ಎಂದು ಹೇಳಿತ್ತು ಈ ವಿಷಯವಾಗಿ ಸ್ವತಹ ಮುಖ್ಯಮಂತ್ರಿಗಳೇ ಮೌಖಿಕ ಆದೇಶ ನೀಡಿ ಕಾಮಗಾರಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಿದ್ದರು ಆದರೂ ಕಾರ್ಖಾನೆ ಮತ್ತೆ ಕಾಮಗಾರಿ ಆರಂಭಿಸಿದೆ ಇದು ಹೀಗೆ ಮುಂದುವರೆದಲ್ಲಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಕೆ ಆರ್ ಕುಮಾರ್ ಅವರು ಎಚ್ಚರಿಕೆ ನೀಡಿದರು.

ಪಾಲಿಕೆ ಮಾಜಿ ಸದಸ್ಯರಾದ ಎಂ ಮಹದೇವ್, ಚಿತ್ರನಟ ಟೆನ್ನಿಸ್ ಕೃಷ್ಣ, ಕನ್ನಡ ಸೇನೆಯ ರಾಜ್ಯ ಉಪಾಧ್ಯಕ್ಷ ಮುನಿರಾಜೇಗೌಡ ಹಾಗೂ ಕನ್ನಡ ಸೇನೆಯ ಪದಾಧಿಕಾರಿಗಳು ಭಾಗವಹಿಸಿದ್ದರು.

## ಗಂಗಮ್ಮ ದೇವಿ ದೇವಾಲಯದ 15ನೇ ವಾರ್ಷಿಕೋತ್ಸವ

**ಚಿಕ್ಕಬಳ್ಳಾಪುರ:** ನಗರದ 7ನೇ ವಾರ್ಡಿ ಗಂಗನಮಿದ್ದೆಯಲ್ಲಿ ಶ್ರೀ ಯೋಗಮುನೀಶ್ವರ ಸ್ವಾಮಿ ದೇವಾಲಯ ಮತ್ತು ಗಂಗಮ್ಮ ದೇವಿ ದೇವಾಲಯದಲ್ಲಿ ಇಂದು ಶುಕ್ರವಾರ 15 ವಾರ್ಷಿಕೋತ್ಸವದ ಅಂಗವಾಗಿ ಎರಡು ದಿನಗಳ ಕಾಲ ಹೋಮ ಹವನ ವಿಶೇಷ ಪೂಜೆ ಅನ್ನಸಂತರ್ಪಣೆ ಹಾಗೂ ಇತರೆ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧ ಭಕ್ತಿಯಿಂದ ನಡೆಯಿತು,ದೇವಿಯ ಮಹಿಮೆಯಿಂದ ಸಹಸ್ರಾರು ಭಕ್ತರ ಜೀವನು ಒಳ್ಳೆಯದಾಗಿದೆ ಎಂದು ಭಕ್ತರ ನಂಬಿಕೆ,ಇಂದು ದೇವಾಲಯದ 15ನೇ ವಾರ್ಷಿಕೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ಆಯೋಜಿಸಿದ್ದ ಧಾರ್ಮಿಕ ಕೈಂಕರ್ಯದಲ್ಲಿ ಸಹಸ್ರಾರು ಭಕ್ತರು ಬಂದು ವಿಶೇಷ ಪೂಜೆ ಸಲ್ಲಿಸಿ ದೇವಿಯ ಕೃಪೆಗೆ ಪಾತ್ರರಾದರು.

ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಂದೀಪ್ ಬಿ ರೆಡ್ಡಿ ದೇವಾಲಯಕ್ಕೆ ಬಂದು ಪೂಜೆ ಸಲ್ಲಿಸಿ ದೇವಿಯ ಕೃಪೆಗೆ ಪಾತ್ರರಾದರು,ಎಲ್ಲರ ಜೀವನದಲ್ಲಿ ಸುಖ ಶಾಂತಿ ನೆಮ್ಮದಿ ನೀಡಲಿ ಎಂದು ದೇವರಲ್ಲಿ ಪ್ರಾರ್ಥಿಸಿದರು.

ಇನ್ನೂ ವಾರ್ಡಿನ ಯುವ ಮುಖಂಡ ಸಮಾಜ ಸೇವಕ ಎನ್ ನಾಗೇಶ್ ಹಾಗೂ ಸಂದೀಪ್

ಮಾತನಾಡಿ ಗಂಗಮ್ಮ ದೇವಿಯ ಮಹಿಮೆ ಅಪಾರ ಜನರು ತಮ್ಮ ಇಷ್ಟಾರ್ಥಗಳನ್ನ ಬೇಡಿಕೊಂಡರೆ ಖಂಡಿತವಾಗಿಯೂ ಆ ದೇವಿ ನೆರವೇರಿಸುತ್ತಾಳೆ ಕಳೆದ 15 ವರ್ಷಗಳಿಂದ ಧಾರ್ಮಿಕ ಕೈಂಕರ್ಯಗಳು ನಡೆಯುತ್ತಿದೆ ಆ ದೇವಿಯ ಕೃಪೆಯಿಂದ ಸಹಸ್ರಾರು ಭಕ್ತರಿಗೆ ಒಳ್ಳೆಯದಾಗಿದ್ದು ಪ್ರತಿ ಗುರುವಾರ ಹಾಗೂ ಶುಕ್ರವಾರ ಹೆಚ್ಚು ಸಂಖ್ಯೆಯಲ್ಲಿ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ಗಂಗಮ್ಮ ದೇವಿಯ ಕೃಪೆಗೆ ಪಾತ್ರರಾಗುತ್ತಾರೆ ಊರಿಗಲ್ಲದೆ ರಾಜ್ಯಕ್ಕೆ ಒಳ್ಳೆಯದಾಗಲಿ ದೇವಿ ಎಲ್ಲರಿಗೂ ಆರೋಗ್ಯ ಆಯಸ್ಸು ನೀಡಲಿ ಎಂದ ಅವರು,ಸಮಾಜ ಸೇವೆ ಮುಖಾಂತರ ಕ್ಷೇತ್ರದಲ್ಲಿ ಮನೆ ಮಾತಾಗಿರುವ ಸಂದೀಪ್ ಬಿ ರೆಡ್ಡಿ ಅವರು ಇಂದು ದೇವಾಲಯಕ್ಕೆ ಭೇಟಿ ನೀಡಿ ದೇವಿಯ ಆಶೀರ್ವಾದ ಪಡೆದಿದ್ದು ದೇವರು ಸಂದೀಪ್ ರೆಡ್ಡಿ ಅವರಿಗೆ ಇನ್ನಷ್ಟು ಸಮಾಜ ಸೇವೆ ಮಾಡಲು ಶಕ್ತಿ ನೀಡಿ ಉನ್ನತ ಮಟ್ಟಕ್ಕೆ ಬೆಳೆಯಲಿ ಎಂದು ನಾಗೇಶ್ ಹಾಗು ಸಂದೀಪ್ ಅವರು ದೇವರಲ್ಲಿ ಪ್ರಾರ್ಥಿಸಿದರು. ಈ ವೇಳೆ ದೇವಾಲಯದ ಅರ್ಚಕರಾದ ನರಸಿಂಹ ಮೂರ್ತಿ ಹಾಗೂ ವಾರ್ಡಿನ ಮುಖಂಡರು ಹಾಜರಿದ್ದರು.





# ನಿರುದ್ಯೋಗ ನಿವಾರಣೆಗೆ ಉದ್ಯೋಗ ಮೇಳಗಳು ಸಹಕಾರಿ

**ಚಾಮರಾಜನಗರ:** ಜಿಲ್ಲೆಯ ನಿರುದ್ಯೋಗ ನಿವಾರಣೆಗೆ ಉದ್ಯೋಗ ಮೇಳಗಳು ಸಹಕಾರಿಯಾಗಲಿವೆ ಎಂದು ಚಾಮರಾಜನಗರ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಅವರು ತಿಳಿಸಿದರು.

ನಗರದ ಹೊರವಲಯದಲ್ಲಿರುವ ಚಾಮರಾಜನಗರ ವಿಶ್ವವಿದ್ಯಾಲಯದ ಆವರಣದಲ್ಲಿಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆ ಹಾಗೂ ಚಾಮರಾಜನಗರ ವಿಶ್ವವಿದ್ಯಾನಿಲಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ''ಉದ್ಯೋಗ ಉತ್ಸವ'' ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ನಿರುದ್ಯೋಗ ಪ್ರತಿನಿತ್ಯ ಕಾಣುವ ಕಣ್ಣೆದುರಿನ ಸಮಸ್ಯೆಯಾಗಿದೆ. ಚಾಮರಾಜನಗರ ಅಭಿವೃದ್ಧಿ ಪಥದತ್ತ ಸಾಗುತ್ತಿರುವ ಜಿಲ್ಲೆಯಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯ ನಿರುದ್ಯೋಗಿಗಳು ಉದ್ಯೋಗ ಮೇಳದ ಸದ್ಬಳಕೆ ಮಾಡಿಕೊಳ್ಳಬೇಕು. ಯುವಜನರು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸರ್ಕಾರಿ ಕೆಲಸವೇ ಬೇಕೆಂದಿಲ್ಲ. ಯಾವುದೇ ಉದ್ಯೋಗದಲ್ಲಿ ತೊಡಗಿಸಿಕೊಳ್ಳಲು ಸಿದ್ದರಾಗಿರಬೇಕು ಎಂದರು.

ಪಿಯುಸಿ ಅಥವಾ ಪದವಿ ಮುಗಿಸಿದ ಬಳಿಕ ವಿದ್ಯಾರ್ಥಿಗಳಿಗೆ ಮುಂದೇನು ಎಂಬ ಪ್ರಶ್ನೆ ಕಾಡಲಿದೆ. ಇದೆಲ್ಲಕ್ಕೂ ಉದ್ಯೋಗ ಮೇಳಗಳು ಪರಿಹಾರ ಒದಗಿಸಲಿವೆ. ಉದ್ಯೋಗ ಮೇಳದಲ್ಲಿ ಭಾಗವಹಿಸಿ ಸೂಕ್ತ ವಿದ್ಯಾರ್ಹತೆಯುಳ್ಳ ಅರ್ಭರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲು ಬೆಂಗಳೂರು ಹಾಗೂ ಮೈಸೂರು ಸೇರಿದಂತೆ ಇತರೆಡೆಗಳಿಂದ ವಿವಿಧ ಕಂಪನಿಗಳು ಆಗಮಿಸಿವೆ. ನಿರುದ್ಯೋಗ ಆದಷ್ಟು ಕಡಿಮೆ ಮಾಡಲು ಮುಂದಿನ ದಿನಗಳಲ್ಲಿ ವರ್ಷಕ್ಕೆ ಎರಡು ಬಾರಿ ಉದ್ಯೋಗ ಮೇಳ ಆಯೋಜಿಸಲಾಗುವುದು ಎಂದು ಪ್ರೊ. ಎಂ.ಆರ್. ಗಂಗಾಧರ್ ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗಾಧಿಕಾರಿ ಮಹಮ್ಮದ್ ಅಕ್ಬರ್ ಅವರು ಮಾತನಾಡಿ ಜಿಲ್ಲೆಯ ನಿರುದ್ಯೋಗ ನಿವಾರಣೆಯೇ ಉದ್ಯೋಗ ಮೇಳ ಆಯೋಜನೆಯ ಮುಖ್ಯ ಉದ್ದೇಶವಾಗಿದೆ. ಬೆಳೆಯುತ್ತಿರುವ ಜನಸಂಖ್ಯೆಗನುಗುಣವಾಗಿ ಇಲ್ಲಿನ ನಿರುದ್ಯೋಗಿಗಳಿಗೆ ಉದ್ಯೋಗವಕಾಶ ಕಲ್ಪಿಸಬೇಕಾದ ಅನಿವಾರ್ಯತೆ ಕೂಡ ಎದುರಾಗಿದೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೆ ನಡೆಯುವ ಉದ್ಯೋಗ ಮೇಳಗಳು ಕಂಪನಿಗಳು ಹಾಗೂ ಅಭ್ಯರ್ಥಿಗಳ ಸಮಾಲೋಚನೆಯ ವೇದಿಕೆಯಾಗಿದೆ. ನಿರುದ್ಯೋಗಿಗಳಿಗೆ ಉದ್ಯೋಗ ಮೇಳಗಳು ಪರಿಪೂರ್ಣ ಅವಕಾಶ ಒದಗಿಸಲಿ ಎಂದು ಹಾರೈಸಿದರು.

ಭಾರತೀಯ ಸ್ಟೇಟ್ ಬ್ಯಾಂಕ್‌ನ ಮೈಸೂರು ವಿಭಾಗದ ವ್ಯವಸ್ಥಾಪಕರಾದ ಕೆ.ಎಂ. ನಾಗರಾಜು ಅವರು ಮಾತನಾಡಿ ಎಲ್ಲ ನಿರುದ್ಯೋಗಿಗಳಿಗೂ ಸಾಕಷ್ಟು ಅವಕಾಶಗಳಿವೆ. ವಿವಿಧ ಕಂಪನಿಗಳ ಉದ್ಯೋಗಗಳ ಅರಿವು ನಿರುದ್ಯೋಗಿಗಳಿಗೆ ಅಗತ್ಯವಾಗಿದೆ. ಆಕಾಂಕ್ಷಿಗಳಿಗೂ ಸಾಕಷ್ಟು ನಿರೀಕ್ಷೆಗಳಿರುತ್ತವೆ. ಉದ್ಯೋಗ ಆಕಾಂಕ್ಷಿಗಳು ಕೇವಲ ವೇತನದ ಬಗ್ಗೆ ಗಮನ ಹರಿಸುವುದಲ್ಲ. ಉದ್ಯೋಗದಲ್ಲಿ ತೊಡಗಿಸಿಕೊಳ್ಳುವ ಕೌಶಲ್ಯವನ್ನು ರೂಢಿಸಿಕೊಳ್ಳಬೇಕು ಎಂದರು.

ಚಾಮರಾಜನಗರ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಆರ್. ಲೋಕನಾಥ್, ಮೌಲ್ಯಮಾಪನ ರಿಜಿಸ್ಟ್ರಾರ್ ಪ್ರೊ. ಜೆ.ವಿ. ವೆಂಕಟರಮಣ, ಉದ್ಯೋಗ ಮೇಳದ ಸಂಯೋಜಕರಾದ ಡಾ. ಮಹದೇವಸ್ವಾಮಿ, ಇತರರು ಕಾರ್ಯಕ್ರಮದಲ್ಲಿ ಇದ್ದರು.

ಉದ್ಯೋಗ ಮೇಳದಲ್ಲಿ ಟಯೋಟಾ, ರಿಲಯನ್ಸ್, ಮಣಿಪಾಲ ಬ್ಯಾಂಕ್, ಐ.ಸಿ.ಐ.ಸಿ.ಐ ಬ್ಯಾಂಕ್, ಪ್ಲಾಂಟೆಕ್, ಟೆಕ್ನೋಟಾಸ್ಕ್, ಭಾರತೀಯ ಜೀವ ವಿಮಾ ಕಂಪನಿ, ನ್ಯೂ ಅಪರ್ಚುನಿಟಿ, ಎಸ್.ಬಿ.ಐ ಲೈಫ್ ಇನ್ಸೂರೆನ್ಸ್, ಜೆ.ಕೆ. ಟೈರ್, ಆಕ್ಸಿಸ್ ಬ್ಯಾಂಕ್, ಆರ್.ಬಿ. ಟೆಕ್, ಮುತ್ತೂಟ್ ಮೈಕ್ರೋ ಪಿನ್, ಮೆಟ್ ಪ್ಲಸ್, ಬಿಎಸ್‌ಎಸ್ ಮೈಕ್ರೋ ಪಿನ್ ಸೇರಿದಂತೆ 17 ಕಂಪನಿಗಳು ಭಾಗವಹಿಸಿದ್ದವು.

ಉದ್ಯೋಗ ಮೇಳಕ್ಕೆ ನೊಂದಣಿಯಾದ ಒಟ್ಟು 746 ಅಭ್ಯರ್ಥಿಗಳಲ್ಲಿ 83 ಮಂದಿ ವಿವಿಧ ಕಂಪನಿಗಳಿಗೆ ಆಯ್ಕೆಯಾಗಿದ್ದಾರೆ. ಅಂತಿಮ ವರ್ಷದ ವ್ಯಾಸಂಗ ಮುಗಿಸುತ್ತಿರುವ 147 ಮಂದಿ ಉದ್ಯೋಗ ನಿರೀಕ್ಷಣೆಯಲ್ಲಿ (ವೇಟಿಂಗ್ ಲಿಸ್ಟ್) ಇದ್ದಾರೆ.

# ಅಭ್ಯರ್ಥಿಗಳಿಂದ ಪ್ರೋತ್ಸಾಹಧನಕ್ಕೆ ಅರ್ಜಿ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಕೀಲರಿಗೆ ನೀಡಲಾಗುವ ಪ್ರೋತ್ಸಾಹಧನಕ್ಕೆ (ಸ್ಟೈಫಂಡ್ ಟೂ ಅಡ್ವಕೇಟ್) 2025–26ನೇ ಸಾಲಿಗೆ ಕಾನೂನು ಪದವೀಧರ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ 2025–26ನೇ ಸಾಲಿಗೆ ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಿ ತರಬೇತಿ ಭತ್ಯೆ ಮಂಜೂರಾತಿಗಾಗಿ ಜಿಲ್ಲೆಯಲ್ಲಿ ಗರಿಷ್ಠ 10ರ ಭೌತಿಕ ಗುರಿಯನ್ನು ಮೀರದಂತೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಆಸಕ್ತ ಅರ್ಹ ಹಿಂದುಳಿದ ವರ್ಗಗಳ ಕಾನೂನು ಪದವೀಧರರು ನಿಗದಿತ ನಮೂನೆಯಲ್ಲಿ ನಿಬಂಧನೆಗೊಳಪಟ್ಟು ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಮತ್ತು 3(ಬಿ) ಜನಾಂಗಕ್ಕೆ ಸೇರಿದವರಾಗಿರಬೇಕು. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 18–07–2025ಕ್ಕೆ ಪ್ರವರ್ಗ–1ಕ್ಕೆ ಸೇರಿರುವ ಅಭ್ಯರ್ಥಿಗಳು 40 ವರ್ಷ ಹಾಗೂ ಪ್ರವರ್ಗ–2(ಎ), 3(ಎ) ಮತ್ತು 3(ಬಿ) ಗೆ ಸೇರಿದ ಅಭ್ಯರ್ಥಿಗಳು 38 ವರ್ಷಗಳ ವಯೋಮಿತಿಯಲ್ಲಿರಬೇಕು. ಅಭ್ಯರ್ಥಿಗಳು ಕಾನೂನು ಪದವೀಧರರಾಗಿದ್ದು, ತಮ್ಮ ಹೆಸರನ್ನು ಬಾರ್ ಕೌನ್ಸಿಲ್‌ನಲ್ಲಿ ನೊಂದಾಯಿಸಿರಬೇಕು. ಕಾನೂನು ತರಬೇತಿಗೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 18–07–2025ಕ್ಕೆ ಹಿಂದೆ 2 ವರ್ಷಗಳೊಳಗಾಗಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಹಿಂದುಳಿದ ವರ್ಗಗಳ ಪ್ರವರ್ಗ–1ರ ಅಭ್ಯರ್ಥಿಗಳ ಮತ್ತು ಕುಟುಂಬದ ವಾರ್ಷಿಕ ವರಮಾನ 3.50 ಲಕ್ಷ ರೂ. ಗಳು ಹಾಗೂ ಉಳಿದ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮತ್ತು ಕುಟುಂಬದ ವಾರ್ಷಿಕ ವರಮಾನ 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗೆ ಮಾಹೆಯಾನ 4 ಸಾವಿರ ರೂ.ನಂತೆ ನಾಲ್ಕು ವರ್ಷಗಳವರೆಗೆ ತರಬೇತಿ ಭತ್ಯೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿ ಮಧ್ಯಂತರದಲ್ಲಿ ತರಬೇತಿ ಬಿಟ್ಟಲ್ಲಿ ಸರ್ಕಾರದಿಂದ ಮಂಜೂರಾದ ಹಣವನ್ನು ವಾಪಸ್ಸು ಕಟ್ಟಬೇಕು. ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ಕಾನೂನು ಪದವಿ ಅಂಕಪಟ್ಟಿಗಳು, ಪದವಿ ಪತ್ರ (ಪ್ರೋವಿಷಿನಲ್ ಡಿಗ್ರೀ ಸರ್ಟಿಫಿಕೇಟ್, ಪಾಸ್ಸಿಂಗ್ ಸರ್ಟಿಫಿಕೇಟ್) ಬಾರ್ ಕೌನ್ಸಿಲ್ ನೊಂದಣಿ ಪತ್ರ, ಪ್ರಾಕ್ಟೀಸ್ ಸರ್ಟಿಫಿಕೇಟ್, ವಾಸಸ್ಥಳ ದೃಢೀಕರಣ ಪತ್ರ, ಆಧಾರ್ ಕಾರ್ಡಿನ ದೃಢೀಕೃತ ಪ್ರತಿಗಳನ್ನು ಮತ್ತು 2 ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಸಲ್ಲಿಸಬೇಕು. ತರಬೇತಿ ಅವಧಿ ನಾಲ್ಕು ವರ್ಷಗಳಾಗಿದ್ದು ತರಬೇತಿಯನ್ನು ಸರ್ಕಾರಿ ಅಭಿಯೋಜಕರು, ಸರ್ಕಾರಿ ವಕೀಲರು ಅಥವಾ 15 ವರ್ಷಕ್ಕೆ ಕಡಿಮೆ ಇಲ್ಲದಂತೆ ವಕೀಲ ವೃತ್ತಿ ನಡೆಸುತ್ತಿರುವ ವಕೀಲರ ಬಳಿ ಪಡೆಯಬೇಕಾಗಿರುತ್ತದೆ. ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಚಾಮರಾಜನಗರ ಜಿಲ್ಲೆಯಲ್ಲಿ ವಾಸವಿರುವ ಅಭ್ಯರ್ಥಿಗಳನ್ನ್ವೇ ಪರಿಗಣಿಸಲಾಗುವುದು. ಆಯ್ಕೆ ಮಾಡುವ ಮತ್ತು ತಿರಸ್ಕೃತಗೊಳಿಸುವ ಅಧಿಕಾರವು ಆಯ್ಕೆ ಸಮಿತಿಗೆ ಸಂಬಂಧಿಸಿದ್ದಾಗಿದ್ದು, ಆಯ್ಕೆ ಸಮಿತಿಯಲ್ಲಿ ತೆಗೆದುಕೊಳ್ಳುವ ಕಾನೂನುಬದ್ಧ ನಿರ್ಣಯವೇ ಅಂತಿಮವಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ನಿಗದಿತ ನಮೂನೆಯ ಅರ್ಜಿಗಳನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ಸಂಬಂಧಪಟ್ಟ ಚಾಮರಾಜನಗರ, ಗುಂಡ್ಲುಪೇಟೆ, ಯಳಂದೂರು, ಕೊಳ್ಳೇಗಾಲ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯ ಜೊತೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

# ಬೃಹತ್ ರಕ್ತದಾನ ಶಿಬಿರ

**ಮೈಸೂರು:** ಜೆಕೆ ಟೈರ್ ಇಂಡಸ್ಟ್ರೀಸ್ ಲಿಮಿಟೆಡ್, ತನ್ನ ಮಾಜಿ ಅಧ್ಯಕ್ಷರಾಗಿದ್ದ ದಿವಂಗತ ಹರಿಶಂಕರ್ ಸಿಂಘಾನಿಯಾರವರ 92 ನೇ ಜನ್ಮ ದಿನಾಚರಣೆಯ ಸ್ಮರಣಾರ್ಥವಾಗಿ ಶುಕ್ರವಾರ ಲಯನ್ ಬ್ಲಡ್ ಸೆಂಟರ್ – ಜೀವಧಾರ, ಭಾರತೀಯ ಕೈಗಾರಿಕಾ ಒಕ್ಕೂಟ (ಸಿಐಐ) ಮತ್ತು ಕೆ.ಆರ್. ಆಸ್ಪತ್ರೆ ಬ್ಲಡ್ ಬ್ಯಾಂಕ್ ಸಹಯೋಗದೊಂದಿಗೆ ಬೃಹತ್ ರಕ್ತದಾನ ಶಿಬಿರವನ್ನು ಶುಕ್ರವಾರ ಆಯೋಜಿಸಿತ್ತು.



ಈ ಕಾರ್ಯಕ್ರಮವನ್ನು ಮೂರು ಉತ್ಪಾದನಾ ಘಟಕಗಳು ಮತ್ತು ಕಂಪನಿಯ ಅತಿಥಿಗೃಹ ಒಳಗೊಂಡಂತೆ ಮೈಸೂರಿನ ಜೆಕೆ ಟೈರ್ ಸಂಸ್ಥೆಯ ನಾಲ್ಕು ಸ್ಥಳಗಳಲ್ಲಿ ಏಕಕಾಲದಲ್ಲಿ ನಡೆಸಲಾಯಿತು, ಜೆಕೆ ಟೈರ್‌ನ ಗುಣಮಟ್ಟದ ನಿರ್ದೇಶಕರಾದ ಶ್ರೀಯುತ ಸ್ಥಾಫೈನ್ ಗ್ಯಾಬ್ರಿಯಲ್ ಡೆನಿಸ್ ಸಗೋಟ್ ರವರು ದಿನವಿಡೀ ನಡೆದ ಶಿಬಿರವನ್ನು ಉದ್ಘಾಟಿಸಿದರು.

ಇತರರಿಗೆ ಮಾದರಿಯಾಗಿ ಜೆಕೆ ಟೈರ್ ಮೈಸೂರು ಇದರ ಉಪಾಧ್ಯಕ್ಷರು (ವರ್ಕ್ಸ್) ಆಗಿರುವ ಶ್ರೀಯುತ ವಿ. ಈಶ್ವರ ರಾವ್ ರವರು ಉದ್ಘಾಟನೆಯ ನಂತರ ಮೊದಲು ರಕ್ತದಾನ ಮಾಡಿದವರಲ್ಲಿ ಒರ್ವರಾಗಿರುತ್ತಾರೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಉಪಕ್ರಮವು ನಾವು ವರ್ಷಗಳಿಂದ ಬದ್ಧರಾಗಿರುವ ಒಂದು ಉದಾತ್ತ ಕಾರ್ಯವಾಗಿದೆ. ಕಳೆದ ವರ್ಷ ನಾವು 1,303 ಯೂನಿಟ್ ರಕ್ತದಾನ ಮಾಡಿದ್ದೇವೆ. ಈ ವರ್ಷ ನಾವು ಇಡೀ ಕರ್ನಾಟಕ ರಾಜ್ಯಕ್ಕೆ ಹೊಸ ಮೈಲುಗಲ್ಲು ಸ್ಥಾಪಿಸುವ ನಿಟ್ಟಿನಲ್ಲಿ ಈ ವರ್ಷ 1425 ಯೂನಿಟ್ ರಕ್ತದಾನ ಮಾಡಿದ್ದೇವೆ ಎಂದು ಹೇಳಿದರು. ನಿಯಮಿತವಾಗಿ ರಕ್ತದಾನದ ಮಹತ್ವವನ್ನು ಅವರು ಒತ್ತಿ ಹೇಳಿದರು ಮತ್ತು ಅಪರೂಪದ ವೈದ್ಯಕೀಯ ಪರಿಸ್ಥಿತಿಯಿಂದಾಗಿ ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತ ವರ್ಗಾವಣೆಯ ಅಗತ್ಯವಿರುವ ಬದಲಿ ಉದ್ಯೋಗಿಯೊಬ್ಬರ ಮಗಳ ಹೃದಯಸ್ಪರ್ಶಿ ಉದಾಹರಣೆಯನ್ನು ಹಂಚಿಕೊಂಡರು. ತುರ್ತು ಸಂದರ್ಭದಲ್ಲೆಲ್ಲಾ ಜೀವಧಾರವು ತಕ್ಷಣ ಸ್ಪಂದಿಸಿರುತ್ತದೆ ಹಾಗೂ ನಮ್ಮ ಉದ್ಯೋಗಿಗಳು ಯಾವಾಗಲು ಸಹಾಯವನ್ನು ಪಡೆಯುತ್ತಾರೆ, ಅದು ಯಾವುದೇ ಗುಂಪಿನ ರಕ್ತವಾದರೂ ಸರಿ, ಜವಾಬ್ದಾರಿಯುತ ನಾಗರಿಕರಾಗಿ, ಇತರರಿಗಾಗಿ ಮಾತ್ರವಲ್ಲದೆ ನಮ್ಮ ಸ್ವಂತ ಆರೋಗ್ಯವನ್ನು ಕಾಪಾಡಿಕೊಳ್ಳುವ ಒಂದು ಮಾರ್ಗವಾಗಿಯೂ ರಕ್ತದಾನ ಮಾಡುವುದು ನಮ್ಮ ಕರ್ತವ್ಯ, ರಕ್ತದಾನವು ಆರೋಗ್ಯಕ್ಕೆ ಆರೋಗ್ಯಕ್ಕೆ ಹಾನಿ ಮಾಡುತ್ತದೆ ಎಂಬ ತಪ್ಪು ಕಲ್ಪನೆಗಳು ಸಂಪೂರ್ಣವಾಗಿ ಆಧಾರರಹಿತವಾಗಿವೆ. ಸಂಘದ ಪದಾಧಿಕಾರಿಗಳ ಬೆಂಬಲವನ್ನು ಅವರು ಈ ಸಂದರ್ಭದಲ್ಲಿ ಶ್ಲಾಘಿಸಿದರು.

ಜೀವಧಾರ ಲಯನ್ಸ್ ಬ್ಲಡ್ ಸೆಂಟರ್‌ನ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಯುತ ಎಸ್.ಇ. ಗಿರೀಶ್ ರವರು ಸ್ವಯಂಪ್ರೇರಿತ ರಕ್ತದಾನಕ್ಕೆ ಜೆಕೆ ಟೈರ್‌ನ ಅಪ್ರತಿಮ ಬದ್ಧತೆಯನ್ನು ಪ್ರಶಂಸಿದರು. ಕರ್ನಾಟಕದಲ್ಲಿ ಜೆಕೆ ಟೈರ್ ಉದ್ಯೋಗಿಗಳೇ ಅಗ್ರಗಣ್ಯ ರಕ್ತದಾನಿಗಳು, ವರ್ಷಗಳಿಂದ ಅವರುಗಳ ನಿರಂತರ ಭಾಗವಹಿಸುವಿಕೆಯು ಅವಶ್ಯಕತೆಯಿರುವವರಿಗೆ ನೈಜ ವ್ಯತ್ಯಾಸವನ್ನುಂಟುಮಾಡಿರುತ್ತದೆ. ಮೈಸೂರಿನಲ್ಲಿ ಜೆಕೆ ಟೈರ್ ಒಂದು ಮಾದರಿ ಸಂಸ್ಥೆಯಾಗಿದೆ, ಇದು ಇತರ ಅನೇಕರಿಗೆ ಇದೇ ರೀತಿಯ ಶಿಬಿರಗಳನ್ನು ಆಯೋಜಿಸಲು ಪ್ರೇರಣೆ ನೀಡಿದೆ. ಭಾರತವು ರಕ್ತ ಪೂರೈಕೆಯಲ್ಲಿ 15–20% ರಷ್ಟು ಕೊರತೆಯನ್ನು ಎದುರಿಸುತ್ತಿದೆ ಇಂದೋರ್ ಮಿಗುತೆ ರಕ್ತ ಹೊಂದಿರುವ ಏಕೈಕ ನಗರವಾಗಿದ್ದರೆ, ಮೈಸೂರು ಈ ರೀತಿಯ ಪ್ರಯತ್ನಗಳಿಂದಾಗಿ ಎರಡನೇ ಸ್ಥಾನ ಪಡೆಯುವ ಸಾಮರ್ಥ್ಯವನ್ನು ಹೊಂದಿದೆ. ಇಂತಹ ಶ್ರಮಕ್ಕೆ ಧನ್ಯವಾದಗಳು

ಈ ಶಿಬಿರವು ಜೆಕೆ ಟೈರ್ ಉದ್ಯೋಗಿಗಳಿಗೆ ಮಾತ್ರವಲ್ಲದೆ ಸಾರ್ವಜನಿಕರಿಗೂ ಮುಕ್ತವಾಗಿದ್ದು ವ್ಯಾಪಕ ಭಾಗವಹಿಸುವಿಕೆ ಮತ್ತು ಬೆಂಬಲವನ್ನು ಗಳಿಸಿರುತ್ತದೆ. ಈ ಉಪಕ್ರಮವು ಜೆಕೆ ಟೈರ್‌ನ ಸಾಮಾಜಿಕ ಜವಾಬ್ದಾರಿ ಮತ್ತು ಸಮುದಾಯದ ಯೋಗಕ್ಷೇಮದ ಮೇಲಿನ ಬದ್ಧತೆಯನ್ನು ಮತ್ತಷ್ಟು ಬಲಪಡಿಸಿರುತ್ತದೆ.

ಜೆಕೆ ಟೈರ್‌ನ ಹಿರಿಯ ಪ್ರಧಾನ ವ್ಯವಸ್ಥಾಪಕರು (ಹೆಚ್.ಆರ್., ಐ.ಆರ್. ಮತ್ತು ಇ ಹೆಚ್. ಎಸ್.) ಆಗಿರುವ ಶ್ರೀಯುತ ಜಗದೀಶ್ ಆರ್., ಮೈಸೂರಿನ ಸಿ.ಐ.ಐ.ನ ಮಾಜಿ ಅಧ್ಯಕ್ಷರಾಗಿದ್ದ ಶ್ರೀಯುತ ಸ್ಯಾಮ್ ಚೆರಿಯನ್: ಶ್ರೀಯುತ ಚನ್ನಕೇಶವ ಬಿ., ಪ್ರಧಾನ ಕಾರ್ಯದರ್ಶಿ, ವಿಟ್ಲ.ಇ.ಯು. ಕೆ.ಆರ್. ಆಸ್ಪತ್ರೆಯ ಬ್ಲಡ್ ಬ್ಯಾಂಕ್ ಅಧಿಕಾರಿಯಾಗಿರುವ ಡಾ. ಕುಸುಮಾ ಇವರುಗಳು ಕೂಡಾ ಉಪಸ್ಥಿತರಿದ್ದರು.





**ಬೆಂಗಳೂರು: 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ದಿನದಿಂದು ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್.ಮುನಿಯಪ್ಪ ರವರು ತಮ್ಮ ನಿವಾಸದಲ್ಲಿ ಯೋಗಾಸನಗಳನ್ನು ಮಾಡುವುದರ ಮೂಲಕ ಗಮನ ಸೆಳೆದರು. ಸಚಿವರು ಪ್ರತಿ ನಿತ್ಯ ಯೋಗಾಸನಗಳು ,ದ್ಯಾನ ಹಾಗೂ ಪ್ರಾಣಯಾಮವನ್ನು ಮಾಡುವುದರ ಮೂಲಕ ತಮ್ಮ ದೈನಂದಿನ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ.**

# ವಡ್ಡಗೆರೆ ಬಳಿ ಆಟೋಪಲ್ಟಿ: ಕೂಲಿಕಾರ್ಮಿಕರಿಗೆ ಗಾಯ



**ಚಾಮರಾಜನಗರ:** ಕೂಲಿಕೆಲಸಕ್ಕೆಂದು ಗುಂಡ್ಲುಪೇಟೆ ತಾಲ್ಲೂಕಿನ ವಡ್ಡಗೆರೆ ಸಮೀಪ ಅಂಕಹಳ್ಳಿ ಗೆ ಕರೆದೊಯ್ಯುತ್ತಿದ್ದ ಗೂಡ್ಸ್. ಆಟೋ ಪಲ್ಟಿಯಾಗಿ ಚಾಮರಾಜನಗರ ತಾಲ್ಲೂಕಿನ ಯಾನಗಳ್ಳಿ ಗ್ರಾಮದ ಮಹಿಳಾ ಕೂಲಿಕಾರ್ಮಿಕರು ಗಾಯಗೊಂಡ ಹಿನ್ನೆಲೆ ಯಡಬೆಟ್ಟ ಸಿಮ್ಸ್ ಆಸ್ಪತ್ರೆಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಗುರುವಾರ ಮಧ್ಯಾಹ್ನ ಸಿಮ್ಸ್ ಗೆ ಭೇಟಿನೀಡಿ, ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು. ಗಾಯಗೊಂಡ ಎಲ್ಲ 18 ಕೂಲಿಕಾರ್ಮಿಕ ಮಹಿಳೆಯರಿಗೂ ಶಾಸಕರು ವೈಯಕ್ತಿಕ ಪರಿಹಾರ ವಿತರಿಸಿದರು. ಇದೇವೇಳೆ ಅವರು ಆಟೋ ಮಗುಚಿ ಗಾಯಗೊಂಡಿರುವ ಯಾನಗಹಳ್ಳಿ ಗ್ರಾಮದ ಕೂಲಿಕಾರ್ಮಿಕ ಮಹಿಳೆಯರಿಗೂ ವೈದ್ಯರು ಸೂಕ್ತ ಚಿಕಿತ್ಸೆ ಒದಗಿಸಬೇಕು, ಗಾಯಾಳುಗಳು ಯಾವುದೇ ಕಾರಣಕ್ಕೂ ಧೃತಿಗೆಡಬಾರದು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ, ಎ.ಪಿ.ಎಂ.ಸಿ ನಿರ್ದೇಕ ಆಲೂರು ಪ್ರದೀಪ್, ನಗರಸಭೆ ನಾಮನಿರ್ದೇಶಿತ ಸದಸ್ಯ ಸ್ವಾಮಿ, ಮುಖಂಡರಾದ ಕೋಡಿಮೋಳೆ ಪ್ರಕಾಶ್,ರಂಗಸ್ವಾಮಿ, ಗಣೇಶ್ ರಾಮಸಮುದ್ರಸ್ವಾಮಿ, , ಸಿಮ್ಸ್ ಡೀನ್ ಮತ್ತು ನಿರ್ದೇಶಕ ಡಾ.ಎಚ್ .ಜಿ.ಮಂಜುನಾಥ್, ಶಶಿಧರ್, ಹಾಜರಿದ್ದರು.

## ಶುಶ್ರೂಷ ಪರೀಕ್ಷೆಯಲ್ಲಿ ಜೆ.ಎಸ್.ಎಸ್. ನರ್ಸಿಂಗ್ ಶಾಲೆಗೆ 2 ರ್‍ಯಾಂಕ್

**ಚಾಮರಾಜನಗರ:** ಕರ್ನಾಟಕ ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿಯಿಂದ (ಏಖಿಆಓಇಃ) 2021–22 ಶೈಕ್ಷಣಿಕ ವರ್ಷದ ಡಿಸೆಂಬರ್–2024ರ ವಾರ್ಷಿಕ ಪರೀಕ್ಷೆಯಲ್ಲಿ ಜೆಎಸ್‌ಎಸ್ ನರ್ಸಿಂಗ್ ಶಾಲೆ, ಚಾಮರಾಜನಗರ ಮೈಸೂರು ವಿಭಾಗದಲ್ಲಿ ಎರಡೂ ರ್‍ಯಾಂಕ್ ಗಳನ್ನು ಪಡೆಯುವ ಮೂಲಕ ಗಮನಾರ್ಹ ಸಾಧನೆ ಮಾಡಿದೆ. ಕರ್ನಾಟಕ ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿಯು ಕರ್ನಾಟಕ ರಾಜ್ಯದ 04 ವಿಭಾಗಗಳಲ್ಲಿ ಮೊದಲ 05 ವಿದ್ಯಾರ್ಥಿಗಳಂತೆ ರ್‍ಯಾಂಕ್ ಪಟ್ಟಿಯನ್ನು ಸಿದ್ಧಪಡಿಸಿದ್ದು, ಈ ಪಟ್ಟಿಯಲ್ಲಿ ನಮ್ಮ ಶಾಲೆಯ ವಿದ್ಯಾರ್ಥಿಗಳಾದ ಕು. ಮಂಜುಳ ಜೆ.ಬಿ 02ನೇ (83.19%) ರ್‍ಯಾಂಕ್ ಮತ್ತು ಬಿಬಿ ಫಾತೀಮ ಕೆ 04ನೇ (81.13%) ರ್‍ಯಾಂಕನ್ನು (ಮೈಸೂರು ವಿಭಾಗದಲ್ಲಿ) ಪಡೆದು ಶಾಲೆಗೆ ಹೆಮ್ಮೆ ಮತ್ತು ಕೀರ್ತಿಯನ್ನು ತಂದಿರುತ್ತಾರೆ. ಕರ್ನಾಟಕ ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿಯಿಂದ ಜೂನ್ 13 ರಂದು ಬಿ.ಎಂ.ಸಿ.ಆರ್.ಐ ಬೆಂಗಳೂರಿನಲ್ಲಿ ಈ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಣಾ ಸಮಾರಂಭವನ್ನು ಆಯೋಜಿಸಿದ್ದು ಈ ಸಮಾರಂಭಕ್ಕೆ ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ಶ್ರೀಯುತ ಮೊಹಮ್ಮದ್ ಮೊಹಸಿನ್, ಐ.ಎ.ಎಸ್ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು ಇವರು ರ್‍ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ವಿದ್ಯಾರ್ಥಿಗಳ ಅಸಾಧಾರಣ ಪ್ರತಿಭೆ ಮತ್ತು ಶ್ರೇಷ್ಠತೆ ಶಾಲೆಗೆ ಹೆಮ್ಮೆ ತಂದಿರುತ್ತದೆ, ಎಂದು ಪ್ರಾಂಶುಪಾಲರಾದ ಶ್ರೀ ವಿನಯ್ ಕುಮಾರ್ ಜಿ ರವರು ವಿದ್ಯಾರ್ಥಿಗಳನ್ನು ಶ್ಲಾಘಿಸಿದ್ದಾರೆ. ಈ ವಿದ್ಯಾರ್ಥಿಗಳಿಗೆ ಜೆಎಸ್‌ಎಸ್ ಸಂಸ್ಥೆಯ ನಿರ್ದೇಶಕರು, ಪ್ರಾಂಶುಪಾಲರು, ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿ ಹರ್ಷ ವ್ಯಕ್ತ ಪಡಿಸಿರುತ್ತಾರೆ.

## 21, 24, 25ರಂದು ಅಂಚೆ ವಹಿವಾಟುಗಳು ಸ್ಥಗಿತ

**ಚಾಮರಾಜನಗರ:** ಭಾರತೀಯ ಅಂಚೆ ಇಲಾಖೆ ಆದೇಶದಂತೆ ಜೂನ್ 23ರಂದು ನಂಜನಗೂಡು ಪ್ರಧಾನ ಅಂಚೆ ಕಚೇರಿ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹಾಗೂ ಜೂನ್ 26ರಂದು ಕೊಳ್ಳೇಗಾಲ ಅಂಚೆ ಕಚೇರಿ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹೊಸ ತಂತ್ರಾಂಶ (ಎಪಿಟಿ 2.0) ಅಳವಡಿಕೆ ಜಾರಿಯಾಗುತ್ತದೆ. ಈ ಹಿನ್ನೆಲೆಯಲ್ಲಿ ಹೊಸ ತಂತ್ರಾಂಶ ಜಾರಿಯಾಗುತ್ತಿರುವುದರಿಂದ ಅದರ ಪೂರ್ವ ಸಿದ್ದತೆಗಾಗಿ ಜೂನ್ 21 ರಂದು ನಂಜನಗೂಡು ಪ್ರಧಾನ ಅಂಚೆ ಕಚೇರಿ ಹಾಗೂ ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹಾಗೂ ಜೂನ್ 24 ಮತ್ತು 25ರಂದು ಕೊಳ್ಳೇಗಾಲ ಪ್ರಧಾನ ಅಂಚೆ ಕಚೇರಿ ಹಾಗೂ ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಎಲ್ಲಾ ರೀತಿಯ ಅಂಚೆ ವಹಿವಾಟುಗಳು ಸ್ಥಗಿತಗೊಳ್ಳಲಿದೆ. ಸಾರ್ವಜನಿಕರು ಸಹಕರಿಸಬೇಕು ಎಂದು ನಂಜನಗೂಡು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ, ಹರದನಹಳ್ಳಿ ಮತ್ತು ಬೇಗೂರು ಉಪವಿಭಾಗ ವ್ಯಾಪ್ತಿಯಲ್ಲಿ ಮೊದಲನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಜೂನ್ 21 ಮತ್ತು 22 ರಂದು ಹಮ್ಮಿಕೊಂಡಿರುವುದರಿಂದ ಆಯಾ ದಿನದಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಜೂನ್ 21ರಂದು ಹರದನಹಳ್ಳಿ ಹಾಗೂ ಬೇಗೂರು ಉಪವಿಭಾಗ ವ್ಯಾಪ್ತಿಯ ಸಿದ್ದಯ್ಯನಪುರ, ಹೊಂಗಲವಾಡಿ, ಕೋಳಿಪಾಳ್ಯ, ಬಂಧಿಗೌಡನಹಳ್ಳಿ, ಅಟ್ಟುಗೂಳಿಪುರ, ಕೊತ್ತಲವಾಡಿ, ಅರಕಲವಾಡಿ, ಯರಗನಹಳ್ಳಿ, ಸುವರ್ಣನಗರ, ಫ್ಯಾಕ್ಟರಿ, ಬಿಸಿಲವಾಡಿ, ಪುಣಜನೂರು, ಡೊಳ್ಳಿಪುರ, ಚನ್ನಪನಪುರ, ಅಮಚವಾಡಿ, ಮಾದಲವಾಡಿ, ಕಿಲಿಗೆರೆ, ಯನಗುಂಬ, ಯರಗನಹಳ್ಳಿ, ಅಚ್ಚಟ್ಟಿಪುರ, ಯಾನಗಳ್ಳಿ, ಹಿರಿಕಾಟಿ, ನಿಟ್ರೆ, ಬೇಗೂರು, ವಾಟರ್ ಸಪ್ಲೈ, ಹೆಗ್ಗಡಹಳ್ಳಿ, ಮಂಚಳ್ಳಿ ಎನ್.ಜೆ.ವೈ, ಶೆಟ್ಟಹಳ್ಳಿ, ದೇಸಿಪುರ, ಇಂಡಸ್ಟ್ರಿಯಲ್, ಹೊರೆಯಾಲ ಮತ್ತು ಹಾಲಳ್ಳಿ, ಕಮರಹಳ್ಳಿ, ಬೊಗ್ಗನಪುರ, ಮರಳಾಪುರ, ರಂಗನಾಥಪುರ, ತೊರವಳ್ಳಿ, ನಿಟ್ರೆ, ಹಿರಿಕಾಟಿ, ಚಿಕ್ಕಾಟಿ, ಅರೆಪುರ, ತೊಂಡವಾಡಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಜೂನ್ 22ರಂದು ಚಾಮರಾಜನಗರ ಉಪವಿಭಾಗ ವ್ಯಾಪ್ತಿಯ ಗಾಳಿಪುರ, ಮೆಡಿಕಲ್ ಕಾಲೇಜು, ಮಲ್ಲಯ್ಯನಪುರ, ಮೂಡಲಪುರ, ಮೂಡಲಪುರ ಸಣ್ಣ ಕೈಗಾರಿಕಾ ಇಲಾಖೆ, ಉತ್ತುವಳ್ಳಿ, ಯಡಪುರ, ಬದನಗುಪ್ಪೆ, ಪಣ್ಯದಹುಂಡಿ, ಬೆಂಡರವಾಡಿ, ಕೆಲ್ಲಂಬಳ್ಳಿ ಎನ್‌ಜೆವೈ, ಇಂಡಸ್ಟ್ರಿಯಲ್ ಏರಿಯಾ, ಕೆಇಡಿಪಿ 10 ಮತ್ತು 11, ಮುತ್ತಿಗೆ, ಹೆಗ್ಗೋಠಾರ ಮತ್ತು ಕೆಐಎಡಿಬಿ ಇಂಡಸ್ಟ್ರೀಯಲ್ ಏರಿಯಾ ಮರಿಯಾಲ, ಬೇಡರಪುರ, ಕೆಲ್ಲಂಬಳ್ಳಿ, ಬಸವನಪುರ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೆಂಗು ಫಸಲು ಬಹಿರಂಗ ಹರಾಜು

**ಬೆಂಗಳೂರು:** ಬೆಂಗಳೂರು ಲಾಲ್‌ಬಾಗ್ ನ ತೋಟಗಾರಿಕೆ ತರಬೇತಿ ಕೇಂದ್ರದ ಆವರಣದಲ್ಲಿರುವ ತೆಂಗು ಫಸಲನ್ನು ಜೂನ್ 25 ರಂದು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಟೆಂಡರ್ ಸಲ್ಲಿಸಲು ಜೂನ್ 24 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಲಾಲ್‌ಬಾಗ್ ನ ತೋಟಗಾರಿಕೆ ತರಬೇತಿ ಕೇಂದ್ರದ ಸಹಾಯಕ ತೋಟಗಾರಿಕೆ ನಿರ್ದೇಶಕರನ್ನು ಸಂಪರ್ಕಿಸಬಹುದಾಗಿದೆ.

## ರಾಜೀವ್ ಗಾಂಧಿ ವಿವಿ ಶುಲ್ಕಮರುಪಾವತಿ ಸೌಲಭ್ಯಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಾಮರಾಜನಗರ:** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ 2024–25ನೇ ಸಾಲಿಗೆ ಇಲಾಖೆಯಿಂದ ನೀಡಲಾಗುತ್ತಿರುವ ಶುಲ್ಕಮರುಪಾವತಿ (ರಾಜೀವ್ ಗಾಂಧಿ ವಿಶ್ವವಿದ್ಯಾನಿಲಯದ ಕೋರ್ಸ್‌ಗಳಿಗೆ ಮಾತ್ರ) ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಜೂನ್ 30ರವರೆಗೆ ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ವೆಬ್‌ಸೈಟ್ https://ssp.postmatrics.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in,ಇಲಾಖಾ ಸಹಾಯವಾಣಿ ಸಂಖ್ಯೆ: 8050770005, ಇ–ಮೇಲ್ bcwdhelpline@gmail.comಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್ postmatrichelp@karnataka.gov.in, ದೂರವಾಣಿ ಸಂಖ್ಯೆ 1902 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನನ, ಮರಣ ದಾಖಲೆ ಡಿಜಿಟಲೀಕರಣಗೊಳಿಸಿ

**ಚಾಮರಾಜನಗರ:** ಜಿಲ್ಲೆಯಲ್ಲಿ ಜನನ–ಮರಣ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸುವುದರ ಜೊತೆಗೆ ಡಿಜಿಟಲೀಕರಣಗೊಳಿಸಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ನಾಗರಿಕ ನೊಂದಣಿ ಪದ್ಧತಿಯಡಿ ಜಿಲ್ಲಾಮಟ್ಟದ ಜನನ ಮರಣಗಳ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಶಾಲಾ ಪ್ರವೇಶಕ್ಕಾಗಿ ಹಾಗೂ ಸರ್ಕಾರದ ಯಾವುದೇ ಸೌಲಭ್ಯಗಳನ್ನು ಪಡೆಯಲು ಸಾರ್ವಜನಿಕರಿಗೆ ಜನನ ಪ್ರಮಾಣ ಪ್ರಮಾಣ ಪತ್ರಗಳು ಅತ್ಯಾವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸಾಕಷ್ಟು ವರ್ಷಗಳಿಂದ ಲಭ್ಯವಿರುವ ಜನನ ಮರಣ ಪತ್ರಗಳನ್ನು ಸೂಕ್ತವಾಗಿ ನಿರ್ವಹಿಸಬೇಕು. ಅಲ್ಲದೆ ದಾಖಲೆಗಳನ್ನು ಮುಂದಿನ ಆರು ತಿಂಗಳೊಳಗೆ ಡಿಜಿಟಲೀಕರಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸಾಮಾನ್ಯವಾಗಿ ಜನನ ಪ್ರಮಾಣಪತ್ರಗಳನ್ನು 21 ದಿನದೊಳಗೆ ನೀಡಬೇಕಾಗಿದೆ. ಜನನ ಮರಣ ಪ್ರಮಾಣ ಪತ್ರಗಳನ್ನು ಡಿಜಿಟಲೀಕರಣ ಮಾಡುವುದರಿಂದ ಜನರು ಕಚೇರಿಗೆ ಅಲೆದಾಡುವುದು ತಪ್ಪಲಿದೆ. ನಮ್ಮ ಜಿಲ್ಲೆಗೆ ಸಂಬಂಧಿಸಿದ ಜನನ ಮರಣ ಪತ್ರಗಳು ಬೇರೆ ಜಿಲ್ಲೆಗಳಲ್ಲಿದ್ದರೂ ಅದನ್ನು ತರಿಸಿಕೊಳ್ಳುವ ಕೆಲಸವಾಗಬೇಕು. ಸಂಬಂಧಿಸಿದ ತಾಲೂಕು ಕಚೇರಿಗಳಲ್ಲಿ ತಾಲೂಕುವಾರು ಹಾಗೂ ವರ್ಷಾವಾರು ದಾಖಲೆಗಳನ್ನು ಸಂಗ್ರಹಿಸಿಡುವ ಕಾರ್ಯ ಆದ್ಯತೆ ಮೇರೆಗೆ ಆಗಬೇಕು ಎಂದರು.

ಪರಿಶಿಷ್ಟ ಪಂಗಡಗಳ ಆದಿವಾಸಿ ಜನರು ವಾಸಿಸುವ ಜಿಲ್ಲೆಯ ಹಾಡಿ–ಪೋಡುಗಳಲ್ಲಿನ ಮಕ್ಕಳಿಗೆ ಜನನ ಪ್ರಮಾಣಪತ್ರಗಳನ್ನು ನಿಗದಿತ ಕಾಲಮಿತಿಯಲ್ಲಿ ನೀಡಬೇಕು. ಜನನ ಪ್ರಮಾಣ ಪತ್ರಗಳು ದೊರಕದೇ ಶಾಲೆಗೆ ಸೇರಲು ಸಾಧ್ಯವಾಗುತ್ತಿಲ್ಲವೆಂಬ ದೂರುಗಳು ಬರಬಾರದು. ಜನನ ಮರಣ ಪ್ರಮಾಣ ಪತ್ರಗಳ ನೀಡುವಿಕೆ ಕುರಿತ ಮಾಹಿತಿಯನ್ನು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಪ್ರದರ್ಶಿಸಬೇಕು. ಮರಣ ಪ್ರಮಾಣಪತ್ರಗಳಲ್ಲಿ ಎಲ್ಲಾ ವಿಷಯಗಳನ್ನು ಕ್ರಮಬದ್ಧವಾಗಿ ದಾಖಲಿಸುವಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ನಿಗಾ ವಹಿಸುವಂತೆ ನಿರ್ದೇಶನ ನೀಡಿದರು.

ಜನನ ಮರಣ ಪ್ರಮಾಣಪತ್ರಗಳ ವಿತರಣೆಯಲ್ಲಿ ವಿಳಂಬಕ್ಕೆ ಅವಕಾಶವಾಗದಂತೆ ಗ್ರಾಮ ಪಂಚಾಯಿತಿಗಳು, ಸ್ಥಳೀಯ ಸರ್ಕಾರಿ ಆಸ್ಪತ್ರೆಗಳು ಎಚ್ಚರ ವಹಿಸಬೇಕು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸೂಕ್ತ ತರಬೇತಿ ನೀಡಬೇಕು. ಜನನ ಮರಣ ಪ್ರಮಾಣಪತ್ರ ನೀಡಿಕೆಯಲ್ಲಿ ಆರೋಗ್ಯ ಇಲಾಖೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳು ಸಾಂಖ್ಯಿಕ ಇಲಾಖೆಯೊಂದಿಗೆ ಸಮನ್ವಯ ಸಾಧಿಸಬೇಕು. ದಾಖಲೆಗಳ ನಿರ್ವಹಣೆ ಸಂಬಂಧ ತಾಲೂಕುಮಟ್ಟದ ಸಭೆಗಳನ್ನು ನಿಯಮಿತವಾಗಿ ನಡೆಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್, ಜಿಲ್ಲಾ ಸಾಂಖ್ಯಿಕ ಸಂಗ್ರಹಣಾಧಿಕಾರಿ ಪವನ್‌ಕುಮಾರ್, ಜಿಲ್ಲಾಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ. ಮಹೇಶ್, ಜಿಲ್ಲಾ ಸರ್ಜನ್ ಡಾ. ಮಹೇಶ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಎಂ.ವಿ. ಸುಧಾ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಬೀದ್, ನಗರಸಭೆಯ ಹಿರಿಯ ಆರೋಗ್ಯ ನಿರೀಕ್ಷರಾದ ಸುಷ್ಮಾ, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

## ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ 2025–26ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ಜೂನ್ 25ರವರೆಗೆ ವಿಸ್ತರಿಸಲಾಗಿದೆ.

ಪ್ರವರ್ಗ–1, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ 2.50 ಲಕ್ಷ ರೂ. ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ 1 ಲಕ್ಷ ರೂ. ಮಿತಿಯೊಳಗಿರಬೇಕು.

ವಿದ್ಯಾರ್ಥಿಗಳು ವೆಬ್ ಸೈಟ್ https://shp.karnataka.gov.in/bcwd ªÀÄÆ ಮೂಲಕ ಜೂನ್ 25 ರೊಳಗೆ ಅರ್ಜಿ ಸಲ್ಲಿಸಬೇಕು. ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು ಜೂನ್ 30 ಅಂತಿಮ ದಿನವಾಗಿದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.kamataka.gov.in/ ವೀಕ್ಷಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bowdhelpline@gmail.com ಇ–ಮೇಲ್ ಮೂಲಕ ಅಥವಾ ಜಿಲ್ಲಾ, ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿ ದೂ.ಸಂ 08226–222180, ಚಾಮರಾಜನಗರ ತಾಲೂಕು ದೂ.ಸಂ 08226–222069, ಗುಂಡ್ಲುಪೇಟೆ ತಾಲೂಕು 08229–297091, ಕೊಳ್ಳೇಗಾಲ ತಾಲೂಕು 08224–253141, ಯಳಂದೂರು ತಾಲೂಕು 08226–240221 ಹಾಗೂ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಜೆ ಟಿಪ್ಸ್

## ಮಾರುಕಟ್ಟೆಗೆ ಹೋಂಡಾ ಸಿಟಿ ಸ್ಪೋರ್ಟ್ ಲಾಂಚ್!



ಹೋಂಡಾ ಪ್ರೀಮಿಯಂ ಸೆಡಾನ್ ಹೋಂಡಾ ಸಿಟಿಯ ಸ್ಪೋರ್ಟ್ ಮಾದರಿಯನ್ನು ಮಾರುಕಟ್ಟೆಗೆ ಪರಿಚಯಿಸಲಾಗಿದೆ. ಹೊಸ ಹೋಂಡಾ ಸಿಟಿ ಸ್ಪೋರ್ಟ್ ಆವೃತ್ತಿಯ ಬೆಲೆ ರೂ. 14.89 ಲಕ್ಷದಿಂದ (ಎಕ್ಸ್-ಶೋರೂಂ) ಪ್ರಾರಂಭವಾಗುತ್ತದೆ. ವಿಶೇಷ ಆಕರ್ಷಣೆಗಾಗಿ ಅದರ ಎಕ್ಸ್‌ಟೀರಿಯರ್ ಮತ್ತು ಇಂಟೀರಿಯರ್ ಅನೇಕ ಬ್ಲ್ಯಾಕ್-ಔಟ್ ಭಾಗಗಳನ್ನು ನೀಡಲಾಗಿದೆ. ಹೊಸ ಸಿಟಿ ಸ್ಪೋರ್ಟ್ ಆವೃತ್ತಿಯು ಸೀಮಿತ ಸಂಖ್ಯೆಯಲ್ಲಿ ಲಭ್ಯವಿರುತ್ತದೆ ಮತ್ತು ಈ ವಿಭಾಗದಲ್ಲಿ ಇದು ವೋಕ್ಸ್‌ವ್ಯಾಗನ್ ವರ್ಟಸ್, ಸ್ಕೋಡಾ ಸ್ಲಾವಿಯಾ ಮತ್ತು ಹುಂಡೈ ವೆರ್ನಾ ಜೊತೆ ಸ್ಪರ್ಧಿಸಲಿದೆ.

ಕಾರಿನ ಸ್ಪೋರ್ಟ್ ಆವೃತ್ತಿಯಲ್ಲಿ ಕೇವಲ ಕಾಸ್ಮೆಟಿಕ್ ಬದಲಾವಣೆಗಳು ಮಾತ್ರ ಕಂಡು ಬರುತ್ತವೆ. ವೈಶಿಷ್ಟ್ಯಗಳು ಮತ್ತು ಎಂಜಿನ್ ಮೊದಲಿನಂತೆಯೇ ಇರುತ್ತವೆ. ಕಂಪನಿಯು ಟೀಸರ್‌ನಲ್ಲಿ ' Read to live a sportier life' ಎಂಬ ಸಂದೇಶವನ್ನು ನೀಡಿದೆ. ಅಂದರೆ ನೀವು ಸ್ಪೋರ್ಟಿ ಜೀವನವನ್ನು ನಡೆಸಲು ಬಯಸುತ್ತೀರಾ ಹೊಸ ರೂಪಾಂತರವು ಸೆಡಾನ್‌ಗೆ ಸ್ಪೋರ್ಟಿ ಲುಕ್ ನೀಡುವ ಅಂಶಗಳನ್ನು ಹೊಂದಿರುತ್ತದೆ ಎಂಬ ಅರ್ಥದಲ್ಲಿ ಕಂಪನಿ ಹೇಳಿದೆ.

ಕಂಪನಿಯು ಹೋಂಡಾ ಸಿಟಿ ಸ್ಪೋರ್ಟ್ ಆವೃತ್ತಿಯ ಎಂಜಿನ್ ಅಥವಾ ಯಾವುದೇ ಯಾಂತ್ರಿಕ ಭಾಗದಲ್ಲಿ ಬದಲಾವಣೆಗಳನ್ನು ಮಾಡಿಲ್ಲ. ಇದು ಹಳೆಯ ಮತ್ತು ವಿಶ್ವಾಸಾರ್ಹ 1.5 ಲೀಟರ್ -i-VTEC ಪೆಟ್ರೋಲ್ ಎಂಜಿನ್ ಪಡೆಯಲಿದೆ. ಇದು 119 bhp ಪವರ್ ಮತ್ತು 145 Nm ಟಾರ್ಕ್ ನೀಡುತ್ತದೆ. ಈ ಎಂಜಿನ್ 6-ಸ್ಪೀಡ್ ಮ್ಯಾನುವಲ್ ಗೇರ್‌ಬಾಕ್ಸ್ ಅಥವಾ 7-ಸ್ಟೆಪ್ CVT ಆಟೋಮೆಟಿಕ್ ಟ್ರಾನ್ಸ್‌ಮಿಷನ್ ನೊಂದಿಗೆ ಬರುತ್ತದೆ. ಎಂಜಿನ್‌ನಲ್ಲಿ ಯಾವುದೇ ಬದಲಾವಣೆಗಳಿಲ್ಲದೇ ಇರುವುದರಿಂದ ಇದರ ಮೈಲೇಜ್ ಪ್ರಮಾಣಿತ ಹೋಂಡಾ ಸಿಟಿಯಂತೆಯೇ ಇರುತ್ತದೆ. ಮ್ಯಾನುವಲ್ ರೂಪಾಂತರವು 17.8 ಕಿಮೀ/ಲೀ ಮೈಲೇಜ್ ನೀಡುತ್ತದೆ. ಮತ್ತು ಆಟೋಮೆಟಿಕ್ ರೂಪಾಂತರವು 18.4 ಕಿಮೀ/ಲೀ ಮೈಲೇಜ್ ನೀಡುತ್ತದೆ ಎಂದು ಕಂಪನಿ ಹೇಳಿಕೊಂಡಿದೆ.

## ಕ್ಯಾಪ್ಸಿಕಂ ಎಗ್ ಚಿಲ್ಲಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮೊಟ್ಟೆ-4 (ಬೇಯಿಸಿ ಸಿಪ್ಪೆ ತೆಗೆದುಕೊಂಡಿದ್ದು), ಎಣ್ಣೆ-ಕರಿಯಲು ಅಗತ್ಯವಿರುವಷ್ಟು, ಬೆಳ್ಳುಳ್ಳಿ-1 ಚಮಚ (ಸಣ್ಣಗೆ ಕತ್ತರಿಸಿಕೊಂಡಿದ್ದು), ಶುಂಠಿ-1 ಚಮಚ (ಸಣ್ಣಗೆ ಕತ್ತರಿಸಿಕೊಂಡಿದ್ದು), ಈರುಳ್ಳಿ-1, (ಸಣ್ಣಗೆ ಕತ್ತರಿಸಿಕೊಂಡಿದ್ದು), ಕ್ಯಾಪ್ಸಿಕಂ-1 (ಸಣ್ಣಗೆ ಕತ್ತರಿಸಿಕೊಂಡಿದ್ದು), ಉಪ್ಪು-ರುಚಿಗೆ ತಕ್ಕಷ್ಟು, ಸಕ್ಕರೆ-ಸ್ವಲ್ಪ, ಖಾರದ ಪುಡಿ-2 ಚಮಚ, ಕಾಳುಮೆಣಸಿನ ಪುಡಿ-1 ಚಮಚ, ಮೈದಾ-1/2 ಬಟ್ಟಲು, ಕಾರ್ನ್ ಫ್ಲೋರ್-1/2 ಬಟ್ಟಲು, ಬೇಕಿಂಗ್ ಪೌಡರ್-1 ಟೀ ಚಮಚ, ಟೊಮೆಟೊ-ಕೆಚಪ್-3 ಚಮಚ, ಸೋಯಾ ಸಾಸ್-1 ಚಮಚ, ವಿನೇಗರ್-1 ½ ಚಮಚ, ಗ್ರೀನ್ ಚಿಲ್ಲಿ ಸಾಸ್-2 ಚಮಚ

### ಮಾಡುವ ವಿಧಾನ

ಮೊದಲಿಗೆ ಒಂದು ಬೌಲ್ ಗೆ ಟೊಮೆಟೋ ಕೆಚಪ್, ಸೋಯಾ ಸಾಸ್, ವಿನೇಗರ್, ಗ್ರೀನ್ ಚಿಲ್ಲಿ ಸಾಸ್ ಅನ್ನು ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿ ಒಂದು ಕಡೆ ಇಟ್ಟುಕೊಳ್ಳಿ. ಮತ್ತೊಂದು ಬೌಲ್ ಗೆ ಮೈದಾ, ಕಾರ್ನ್ ಫ್ಲೋರ್, ಬೇಕಿಂಗ್ ಪೌಡರ್, ರುಚಿಗೆ ತಕ್ಕಷ್ಟು ಉಪ್ಪು, ಹಾಕಿ ಸ್ವಲ್ಪ ಸ್ವಲ್ಪವೇ ನೀರು ಸೇರಿಸಿ ದಪ್ಪ ಪೇಸ್ಟ್ ಮಾಡಿಕೊಳ್ಳಿ. ನಂತರ ಮೊಟ್ಟೆಯನ್ನು ಎರಡು ಭಾಗವಾಗಿ ಕತ್ತರಿಸಿಕೊಂಡು ಈ ಮಿಶ್ರಣದಲ್ಲಿ ಅದ್ದಿಕೊಳ್ಳಿ. ಗ್ಯಾಸ್ ಮೇಲೆ ಎಣ್ಣೆ ಬಾಣಲೆಯಲ್ಲಿಟ್ಟು ಅದು ಬಿಸಿಯಾಗುತ್ತಲೇ ಮೊಟ್ಟೆ ಹಾಕಿ ಹೊಂಬಣ್ಣ ಬರುವವರೆಗೆ ಕರಿಯಿರಿ.

ನಂತರ ಗ್ಯಾಸ್ ಮೇಲೆ ಒಂದು ಪ್ಯಾನ್ ಇಟ್ಟು ಅದು ಬಿಸಿಯಾಗುತ್ತಲೇ 1 ಟೀ ಚಮಚ ಎಣ್ಣೆ ಹಾಕಿಚ ನಂತರ ಅದಕ್ಕೆ ಬೆಳ್ಳುಳ್ಳಿ, ಶುಂಠಿ ಹಾಕಿ 1 ನಿಮಿಷಗಳ ಕಾಲ ಫ್ರೈ ಮಾಡಿ. ನಂತರ ಈರುಳ್ಳಿ ಹಾಕಿ ಕೆಂಪಾಗುವವರೆಗೆ ಫ್ರೈ ಮಾಡಿ. ಇದಾದ ಬಳಿಕ ಕ್ಯಾಪ್ಸಿಕಂ ಸೇರಿಸಿ 2 ನಿಮಿಷಗಳ ಕಾಲ ಕೈಯಾಡಿಸಿ. ಇದಕ್ಕೆ ರೆಡಿ ಮಾಡಿಟ್ಟುಕೊಂಡ ಸಾಸ್, ಖಾರದ ಪುಡಿ, ಕಾಳುಮೆಣಸಿನ ಪುಡಿ, ರುಚಿಗೆ ತಕ್ಕಷ್ಟು ಉಪ್ಪು, ಸಕ್ಕರೆ ಸೇರಿಸಿ ಇದು ದಪ್ಪಗಾಗುವವರೆಗೆ ಮಿಶ್ರಣ ಮಾಡಿ. ನಂತರ ಇದಕ್ಕೆ ಫ್ರೈ ಮಾಡಿಕೊಂಡ ಮೊಟ್ಟೆ ಸೇರಿಸಿ ಮಿಕ್ಸ್ ಮಾಡಿದರೆ ರುಚಿಕರವಾದ ಎಗ್ ಚಿಲ್ಲಿ ಸವಿಯಲು ಸಿದ್ಧ.

## ಭಯಾನಕ ಅನುಭವ ಆಗಿದೆ: ನಟಿ ಕಾಜೋಲ್



ರಾಮೋಜಿ ಫಿಲ್ಮ್ ಸಿಟಿ ಜಗತ್ತಿನ ಅತಿ ದೊಡ್ಡ ಫಿಲ್ಮ್ ಸಿಟಿ. ನೂರಾರೂ ಸಿನಿಮಾಗಳು ಶೂಟಿಂಗ್ ಆಗಿವೆ. ಆದರೆ ಈ ಜಾಗದಲ್ಲಿ ಭಯಾನಕ ಅನುಭವ ಆಗಿದೆ ಎಂದು ನಟಿ ಕಾಜೋಲ್ ಹೇಳಿದ್ದಾರೆ. ಕಾಜೋಲ್ ನೀಡಿರುವ ಹೇಳಿಕೆಯ ಸಂಪೂರ್ಣ ಮಾಹಿತಿ ಇಲ್ಲಿದೆ. ನಟಿ ಕಾಜೋಲ್ ಇತ್ತೀಚೆಗೆ ರಾಮೋಜಿ ಫಿಲ್ಮ್ ಸಿಟಿಯಲ್ಲಿ ಚಿತ್ರೀಕರಣ ಮಾಡುವಾಗ ತಮಗಾದ ಭಯಾನಕ ಅನುಭವದ ಬಗ್ಗೆ ಮಾತನಾಡಿದ್ದಾರೆ. ಪರಿಸ್ಥಿತಿ ತುಂಬಾ ಕಷ್ಟಕರವಾಗಿತ್ತು. ಸೆಟ್‌ನಿಂದ ಹೊರಹೋಗಬೇಕೆಂದು ಅನಿಸಿತು. ಅಲ್ಲಿಂದ ಹೊರಹೋಗಬೇಕಾಯಿತು ಎಂದು ನಟಿ ಕಾಜೋಲ್ ಹೇಳಿದರು.

ಚಿತ್ರೀಕರಣದ ಸಮಯದಲ್ಲಿ ಅವರು ಅನುಭವಿಸಿದ ಭಯಾನಕ ಘಟನೆಯ ಬಗ್ಗೆ ನಟಿ ಕಾಜೋಲ್ ಮಾತನಾಡಿದ್ದಾರೆ. ಆದರೆ ಯಾವ ಚಿತ್ರ ಎಂದು ಹೆಸರನ್ನು ಅವರು ಉಲ್ಲೇಖಿಸಲಿಲ್ಲ. ಈ ಘಟನೆಯನ್ನು ಅತ್ಯಂತ ಸವಾಲಿನ ಮತ್ತು ಭಯಾನಕ ಶೂಟಿಂಗ್ ಅನುಭವಗಳಲ್ಲಿ ಒಂದು ಎಂದು ಕಾಜೋಲ್ ಹೇಳಿದ್ದಾರೆ.

ಬಾಲಿವುಡ್ ನಟಿ ಕಾಜೋಲ್ 'ಮಾ' ಸಿನಿಮಾದ ಪ್ರಚಾರದಲ್ಲಿ ನಿರತರಾಗಿದ್ದಾರೆ. ಈ ಸಿನಿಮಾ ಜೂನ್ 27ರಂದು ಬಿಡುಗಡೆ ಆಗಲಿದೆ. ಸಂದರ್ಶನವೊಂದರಲ್ಲಿ ತಮಗಾದ ಹಾರ್ ಅನುಭವದ ಬಗ್ಗೆ ನಟಿ ಕಾಜೋಲ್ ಮಾತನಾಡಿದ್ದಾರೆ. ರಾಮೋಜಿ ಫಿಲ್ಮ್ ಸಿಟಿಯಲ್ಲಿ ದೆವ್ವದ ಅನುಭವ ಆಗಿದೆ ಎಂದು ಕಾಜೋಲ್ ಹೇಳಿದ್ದಾರೆ.

'ಭಯ ಆಗುವಂತಹ ಅನೇಕ ಸ್ಥಳಗಳು ಇವೆ. ಹೈದರಾಬಾದ್‌ನಲ್ಲಿರುವ ರಾಮೋಜಿ ಫಿಲ್ಮ್ ಸಿಟಿ ಇಂತಹ ಸ್ಥಳಕ್ಕೆ ಪ್ರಮುಖ ಉದಾಹರಣೆ. ಜಗತ್ತಿನಲ್ಲಿ ಹೆಚ್ಚು ಭಯಬೀಳಿಸುವ ಸ್ಥಳಗಳಲ್ಲಿ ರಾಮೋಜಿ ಫಿಲ್ಮ್ ಸಿಟಿ ಕೂಡ ಒಂದು. ದೇವರು ನನ್ನನ್ನು ಕಾಪಾಡಿದ್ದಾನೆ ಎನಿಸುತ್ತದೆ. ನಾನು ಏನನ್ನೂ ನೋಡಿಲ್ಲ' ಎಂದು ಕಾಜೋಲ್ ಹೇಳಿದ್ದಾರೆ. ಕಾಜೋಲ್ ಕಳೆದ ಕೆಲವು ವರ್ಷಗಳಲ್ಲಿ ರಾಮೋಜಿ ಫಿಲ್ಮ್ ಸಿಟಿಯಲ್ಲಿ ಹಲವಾರು ಚಿತ್ರಗಳ ಚಿತ್ರೀಕರಣ ಮಾಡಿದ್ದಾರೆ. ಈ ಸ್ಟುಡಿಯೋ ಹೈದರಾಬಾದ್‌ನಲ್ಲಿದ್ದು, ಭಾರತದ ಪ್ರಮುಖ ಚಲನಚಿತ್ರ ನಿರ್ಮಾಣ ಕೇಂದ್ರಗಳಲ್ಲಿ ಒಂದಾಗಿದೆ. ಅನೇಕ ಬಾಲಿವುಡ್, ಟಾಲಿವುಡ್ ಮತ್ತು ಪ್ರಾದೇಶಿಕ ಚಲನಚಿತ್ರಗಳನ್ನು ಇಲ್ಲಿ ಚಿತ್ರೀಕರಿಸಲಾಗುತ್ತದೆ. ಗಮನಾರ್ಹವಾಗಿ ಕಾಜೋಲ್ ಪತಿ ನಟ ಅಜಯ್ ದೇವಗನ್ ಕೂಡ ತಮ್ಮ ಚಲನಚಿತ್ರಗಳಿಗಾಗಿ ರಾಮೋಜಿ ಫಿಲ್ಮ್ ಸಿಟಿಗೆ ಆಗಾಗ್ಗೆ ಭೇಟಿ ನೀಡುತ್ತಾರೆ.

## ಕಿಬ್ಬೊಟ್ಟೆಯ ಕ್ಷಯರೋಗ ಹೊಂದಿದ್ದ ಬಿಜಾಪುರದ ಮಹಿಳೆಗೆ ಫೋರ್ಟಿಸ್ ಆಸ್ಪತ್ರೆಯಲ್ಲಿ ರೊಬೋಟ್ ನೆರವಿನ ಯಶಸ್ವಿ ಚಿಕಿತ್ಸೆ

ಅತಿ ಅಪರೂಪದ ಮೈಕೋಬ್ಯಾಕ್ಟೀರಿಯಾದಿಂದ ಉಂಟಾಗುವ ಕಿಬ್ಬೊಟ್ಟೆಯ ಕ್ಷಯರೋಗಕ್ಕೆ ಒಳಗಾಗಿದ್ದ ಬಿಜಾಪುರ ಮೂಲದ 25 ವರ್ಷದ ಮಹಿಳೆಗೆ ಬನ್ನೇರುಘಟ್ಟ ರಸ್ತೆಯ ಫೋರ್ಟಿಸ್ ಆಸ್ಪತ್ರೆಯಲ್ಲಿ ಸುಧಾರಿತ ರೊಬೋಟ್ ನೆರವಿನಲ್ಲಿ ಯಶಸ್ವಿಯಾಗಿ ಚಿಕಿತ್ಸೆ ನೀಡಲಾಗಿದೆ.

ಬೆಂಗಳೂರು ಬನ್ನೇರುಘಟ್ಟ ರಸ್ತೆಯಫೋರ್ಟಿಸ್ ಆಸ್ಪತ್ರೆಯಲ್ಲಿ ಒಬಿಜಿವೈಎನ್, ರೋಬೋಟಿಕ್ ಸರ್ಜನ್, ಫಲವತ್ತತೆ ಮತ್ತು ಲ್ಯಾಪರೊಸ್ಕೋಪಿಕ್ ಸರ್ಜನ್ ಡಾ. ಉಷಾ ಬಿ.ಆರ್ ಅವರ ಆರೈಕೆಯಲ್ಲಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ.

ಬಿಜಾಪುರದಲ್ಲಿ ನೆಲೆಸಿರುವ ಅಲ್ಬೆಲಿ ಎಂಬ 25 ವರ್ಷದ ಮಹಿಳೆಯು ದೀರ್ಘಕಾಲದ ಹೊಟ್ಟೆ ನೋವು ಮತ್ತು ಆರು ತಿಂಗಳುಗಳಿಂದ ನಿರಂತರ ಶ್ರೋಣಿಯ ಉಂಡೆಯಿಂದ ಬಳಲುತ್ತಿದ್ದರು. ಐದು ವರ್ಷಗಳ ಹಿಂದೆ ವಿವಾಗವಾಗಿದ್ದ ಅವರ ಆರೋಗ್ಯ ಚೆನ್ನಾಗಿಯೇ ಇತ್ತು, ನಂತರದಲ್ಲಿ ಹಲವು ರೀತಿಯ ಸಮಸ್ಯೆ, ಹೊಟ್ಟೆ ನೋವಿಗೆ ಒಳಗಾಗಿದ್ದರು. ಈ ಹಿಂದೆ ನಗರದ ಸ್ಥಳೀಯ ಆಸ್ಪತ್ರೆಯಲ್ಲಿ ತೆರೆದ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು, ಇದು ಕರುಳಿನ ಗಾಯದಿಂದ ಜಟಿಲವಾಗಿತ್ತು ಹಾಗೂ ನಿರ್ಣಾಯಕ ರೋಗನಿರ್ಣಯವನ್ನು ಉಂಟುಮಾಡುವಲ್ಲಿ ವಿಫಲವಾಗಿದೆ. ಕಿಬ್ಬೊಟ್ಟೆಯ ಕ್ಷಯರೋಗದ ಪ್ರಕರಣ ಎಂದು ಶಂಕಿಸಲಾಗಿರುವ ಆಕೆಗೆ ಪ್ರಮಾಣಿತ ಟಿಬಿ ಔಷಧಿಗಳನ್ನು ಸಹ ನೀಡಲಾಗಿತ್ತು, ಆದರೆ ಆಕೆಯ ಸ್ಥಿತಿ ಸುಧಾರಿಸಲಿಲ್ಲ.

ಖಚಿತವಾದ ರೋಗನಿರ್ಣಯ ಮತ್ತು ಪರಿಣಾಮಕಾರಿ ಚಿಕಿತ್ಸೆಯ ಹುಡುಕಾಟದಲ್ಲಿ, ಆಕೆ, ಬೆಂಗಳೂರಿನ ಫೋರ್ಟಿಸ್ ಆಸ್ಪತ್ರೆಗೆ ತೆರಳಿದರು. ಅಲ್ಲಿ ವಿವರವಾದ ಕ್ಲಿನಿಕಲ್ ರೋಗನಿರ್ಣಯವು ತೀವ್ರವಾದ ಶ್ರೋಣಿಯ ಸಮಸ್ಯೆ ಬಹಿರಂಗಪಡಿಸಿತು ಮತ್ತು ಸ್ಥಳೀಯ ಆಸ್ಪತ್ರೆಯಲ್ಲಿ ನಡೆಸಿದ ಹಿಂದಿನ ವೈದ್ಯಕೀಯ ಮೌಲ್ಯಮಾಪನಗಳಲ್ಲಿ ತಪ್ಪಿಸಿಕೊಂಡಿದ್ದ ಅಂಡಾಶಯ ಮತ್ತು ಫಾಲೋಪಿಯನ್ ಟ್ಯೂಬ್‌ಗಳನ್ನು ಒಳಗೊಂಡ ಸೋಂಕು ಎಂದು ತಿಳಿದುಬಂತು. ಪ್ರಕರಣದ ಸಂಕೀರ್ಣತೆಯನ್ನು ಪರಿಗಣಿಸಿ, ಡಾ. ಉಷಾ ರೊಬೊಟಿಕ್ ನೆರವಿನ ಶಸ್ತ್ರಚಿಕಿತ್ಸೆಗೆ ಶಿಫಾರಸು ಮಾಡಿದರು. ಈ ಸುಧಾರಿತ, ಕನಿಷ್ಠ ಆಕ್ರಮಣಕಾರಿ ವಿಧಾನವು ಅಂಟಿಕೊಳ್ಳುವಿಕೆ ಮತ್ತು ಸೋಂಕಿತ ಅಂಗಾಂಶಗಳನ್ನು ನಿಖರವಾಗಿ ತೆಗೆದುಹಾಕಲು, ಅಪಾಯಗಳನ್ನು ಕಡಿಮೆ ಮಾಡಲು ಮತ್ತು ಸುಗಮ ಚೇತರಿಕೆಗೆ ಅನುಕೂಲವಾಗಿಸುತ್ತದೆ. ಡಾ. ಉಷಾ ಬಿ.ಆರ್, ಸಲಹೆಗಾರರು ಔಃಉಜಓ, ರೋಬೋಟಿಕ್ ಸರ್ಜನ್, ಫಲವತ್ತತೆ ಮತ್ತು ಲ್ಯಾಪರೊಸ್ಕೋಪಿಕ್ ಸರ್ಜನ್, ಫೋರ್ಟಿಸ್ ಆಸ್ಪತ್ರೆ, ಬನ್ನೇರುಘಟ್ಟ ರಸ್ತೆ, ಬೆಂಗಳೂರು, ''ಇದು ಅಸಾಧಾರಣವಾದ ಸಂಕೀರ್ಣ ಪ್ರಕರಣವಾಗಿದೆ, ಮುಖ್ಯವಾಗಿ ಹಿಂದಿನ ಶಸ್ತ್ರಚಿಕಿತ್ಸೆಯಿಂದಾಗಿ, ಕರುಳಿನ ಗಾಯಕ್ಕೆ ಕಾರಣವಾದ ಹಿಂದಿನ ಶಸ್ತ್ರಚಿಕಿತ್ಸೆಯಿಂದಾಗಿ ಮತ್ತು ವ್ಯಾಪಕ ಆಂತರಿಕ ಗುರುತು, ಕರುಳು, ಕೊಬ್ಬಿನ ಪದರಗಳು ಮತ್ತು ಸಂತಾನೋತ್ಪತ್ತಿ ರಚನೆಗಳು ಸೇರಿದಂತೆ ಶ್ರೋಣಿಯ ಅಂಗಗಳು ಒಂದಕ್ಕೊಂದು ತೀವ್ರವಾಗಿ ಅಂಟಿಕೊಂಡಿವೆ, ಇದು ಶಸ್ತ್ರಚಿಕಿತ್ಸೆಯ ಸಂಚರಣೆ ಅತ್ಯಂತ ಕಷ್ಟಕರವಾಗಿದೆ. ರೊಬೊಟಿಕ್ ನೆರವಿನ ತಂತ್ರಜ್ಞಾನವನ್ನು ಬಳಸಿಕೊಂಡು, ನಾವು ಈ ರಚನೆಗಳನ್ನು ನಿಖರವಾಗಿ ಬೇರ್ಪಡಿಸಲು, ಶ್ರೋಣಿಯ ದ್ರವ್ಯರಾಶಿಯನ್ನು ತೆಗೆದುಹಾಕಲು, ಫಾಲೋಪಿಯನ್ ಟ್ಯೂಬ್‌ಗಳಿಂದ ಸಂಗ್ರಹವಾದ ರಕ್ತವನ್ನು ಸ್ಪಷ್ಟಪಡಿಸಲು ಮತ್ತು ಹಿಂದಿನ ಸೋಂಕಿನಿಂದಾಗಿ ರೂಪುಗೊಂಡ ಅಸಹಜ ಪ್ರದೇಶವನ್ನು ತೆಗೆದುಹಾಕಲು ಸಾಧ್ಯವಾಯಿತು.

## ಅಮ್ಯೂಸ್ ಮೆಂಟ್ ಪಾರ್ಕ್‌ಗೆ ಶಿವಸಮುದ್ರ ಸೂಕ್ತ ಸ್ಥಳ!



ರಾಜ್ಯ ಸರ್ಕಾರ, ಮಂಡ್ಯ ಜಿಲ್ಲೆಯ ವಿಶ್ವ ಪ್ರಸಿದ್ಧ ಕೃಷ್ಣರಾಜಸಾಗರ ಜಲಾಶಯ(ಕೆ. ಆರ್. ಎಸ್.) ಹತ್ತಿರ ಡಿಸ್ನಿಲ್ಯಾಂಡ್ ಮಾದರಿಯಲ್ಲಿ 'ಅಮ್ಯೂಸ್ ಮೆಂಟ್ ' ಪಾರ್ಕ್ ನಿರ್ಮಿಸಲು ಮುಂದಾಗಿದೆ. ಆದರೆ, ಮಂಡ್ಯ ರೈತ ಸಂಘ ಸರ್ಕಾರದ ನಿರ್ಧಾರವನ್ನು ವಿರೋಧ ಮಾಡುತ್ತಿದೆ. ರೈತರ 'ಕಣ್ಣಂಬಾಡಿ ಕಟ್ಟೆ' ಬಗ್ಗೆಯ ಕಾಳಜಿ ಸೂಕ್ತವಾಗಿದೆ. ಸರ್ಕಾರ ಆ ಪಾರ್ಕ್ ನ್ನು ಮಳವಳ್ಳಿ ತಾಲ್ಲೂಕಿನ ಶಿವಸಮುದ್ರ ಬಳಿ ಏಕೆ ನಿರ್ಮಿಸ ಬಾರದು

ಶಿವಸಮುದ್ರ ಎಂದೊಡನೆ ನನ್ನ ಬಾಲ್ಯದಲ್ಲಿ 'ಬಲ್ಫ್' ಎಂದೇ ಕರೆಯುತ್ತಿದ್ದ ಅದನ್ನು ನೋಡಿದ ನೆನಪು ಈಗಲೂ ಹೆಚ್ಚ ಹಸಿರಿನಂತೆ ಮನಸ್ಸಿನಲ್ಲಿ ಇದೆ. ಅಲ್ಲಿನ ಉದ್ಯಾನವನದಲ್ಲಿ ಸಹಪಾಠಿಗಳ ಜೊತೆ ತಿಂಡಿ ತಿಂದಿದ್ದು, ಸುಮಾರು 450 ಅಡಿ ಆಳದಲ್ಲಿ 1902ರಲ್ಲಿ ಅಂದಿನ ಮೈಸೂರಿನ ದಿವಾನರಾಗಿದ್ದ ಕೆ. ಶೇಷಾದ್ರಿ ಅಯ್ಯರ್ ನಿರ್ಮಿಸಿದ್ದ ಜಲವಿದ್ಯುತ್ ಸ್ಥಾವರ, ಅಲ್ಲಿನ ಜಲಪಾತ ನೋಡಿ ಖುಷಿ ಪಟ್ಟದ್ದಿ.

ಹೌದು, ಅಂದು ಮಂಡ್ಯ ಜಿಲ್ಲೆಯ ಗಡಿಭಾಗದಲ್ಲಿನ ಶಿವಸಮುದ್ರದಲ್ಲಿರುವ ಗಗನಚುಕ್ಕಿ ಜಲಪಾತ ತಾಣದ ಕಡೆ ಹೊಗಿ ಅಲ್ಲಿನ ಪ್ರಕೃತಿ ಸೌಂದರ್ಯದ ಜೊತೆಗೆ ಸುಮಾರು 300 ಅಡಿ ಆಳಕ್ಕೆ ಹಾಲ್ನೊರೆಯಂತೆ ಧುಮುಕುತ್ತಿದ್ದ ಜಲಧಾರೆ ನೋಡಿ ಕಣ್ಣು ತುಂಬಿ ಕೊಳ್ಳುತ್ತಿದ್ದರು, ಸುಮಾರು 450 ಅಡಿ ಆಳದಲ್ಲಿರುವ

ಕೆ. ಶೇಷಾದ್ರಿಅಯ್ಯರ್ ಜಲವಿದ್ಯುತ್ ಉತ್ಪಾದನಾ ಕೇಂದ್ರಕ್ಕೆ ಟ್ರ್ಯಾಲಿ ಮೂಲಕ ಕೆಳಗಿಳಿದು ನೋಡಿ ಪುಳುಕಿತರಾಗುತ್ತಿದ್ದರು, ಅಲ್ಲಿನ ಉದ್ಯಾನವನದಲ್ಲಿ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು, ದೇಶ-ವಿದೇಶಿಯ ಪ್ರವಾಸಿಗರು ಅಲ್ಲಿ ಕುಳಿತು ಆನಂದ ಪಡುತ್ತಿದ್ದರು.

ಕ್ರಮೇಣ ತಮಿಳು ನಾಡಿನ ಎಲ್. ಟಿ. ಟಿ. ಇ. ಭಯೋತ್ಪಾದಕರ ಭಯದಿಂದಾಗಿ ಜಲವಿದ್ಯುತ್ ಕೇಂದ್ರಕ್ಕೆ ಪ್ರವಾಸಿಗರ ಪ್ರವೇಶ ನಿಷೇಧಿಸಲಾಯಿತು. ಪರಿಣಾಮ ಪ್ರವಾಸಿಗರು ಅತ್ತ ಮುಖ ಮಾಡದೆ ಹೊದುದ್ದು, ಅಲ್ಲಿನ ಉದ್ಯಾನವನಗಳ ನಿರ್ಲಕ್ಷ್ಯ, ಅಲ್ಲಿನ ಅಭಿವೃದ್ಧಿ ಕಡಗಣನೆಯಿಂದ ಒಂದು ಕಾಲದಲ್ಲಿ ಪ್ರವಾಸಿಗರಿಂದ ತುಂಬಿ ತುಳುಕುತ್ತಿದ್ದ ಶಿವಸಮುದ್ರ ಪ್ರವಾಸಿ ಕೇಂದ್ರ ಇಂದು ಯಾರಿಗೂ ಬೇಡವಾಗಿದೆ. ಅಂದು ಪ್ರವಾಸಿಗರ ಸ್ವರ್ಗದಂತೆ ಕಾಣುತ್ತಿದ್ದ ಬಲ್ಫ್ ಇಂದು ಕಳೆಗುಂದಿದೆ.

ಇಲ್ಲಿನ ಗಡಿ ಭಾಗದಲ್ಲೇ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಶಿವನಸಮುದ್ರ ದ್ವೀಪವಿದೆ. ಶ್ರೀರಂಗಪಟ್ಟಣ ಬಿಟ್ಟರೆ ಕಾವೇರಿ ನದಿಯಿಂದ ಉಂಟಾಗಿರುವ ಎರಡನೇ ದೊಡ್ಡ ದ್ವೀಪ. ಐತಿಹಾಸಿಕ ಹಿನ್ನೆಲೆಯ ಈ ದ್ವೀಪದಲ್ಲಿ ಹೊಯ್ಸಳರ ಕಾಲದ ಶ್ರೀರಂಗನಾಥಸ್ವಾಮಿ, ಸೋಮೇಶ್ವರ, ವೀರಭದ್ರಸ್ವಾಮಿ ಶಕ್ತಿ ದೇವತೆಯ ದೇಗುಲಗಳು, ಹಜರತ್ ಸೈಯದ್ ದರ್ಗ ಮೊದಲಾದವುಗಳು ಇವೆ. ಜೊತೆಗೆ ಭರಚುಕ್ಕಿ ಜಲಪಾತ ಪ್ರವಾಸಿಗರನ್ನು ತನ್ನ ಕಡೆ ಸಳೆಯುತ್ತದೆ. ಇದು ಸಹಾ ಧಾರ್ಮಿಕ ಹಾಗೂ ಪ್ರವಾಸ ಕೇಂದ್ರವಾಗಿದೆ.

ಇಷ್ಟೆಲ್ಲಾ ಕಥೆ ಹೇಳುವುದಕ್ಕೆ ಕಾರಣ, ಸರ್ಕಾರ ಕೆ. ಆರ್. ಎಸ್. ಬಳಿ ಅಮ್ಯೂಸ್ ಮೆಂಟ್ ಪಾರ್ಕ್ ನಿರ್ಮಿಸಲು ಮುಂದಾಗಿರುವುದನ್ನು ಬಿಟ್ಟು, ಬ್ಲಫ್ ಎಂದೇ ಪ್ರಸಿದ್ದಿ ಪಡೆದಿದ್ದ ಮಳವಳ್ಳಿ ತಾಲ್ಲೂಕಿನ ಶಿವಸಮುದ್ರ ಬಳಿ ಆ ಪಾರ್ಕ್ ನ್ನು ನಿರ್ಮಿಸಿದರೆ ಹಳೆಯ ವೈಭವ ಮರುಕಳಿಸಿ ಅದು ಮತ್ತೆ ವಿಶ್ವವಿಖ್ಯಾತ ಪ್ರವಾಸಿ ಕೇಂದ್ರವಾಗಿ ಅಲ್ಲೊಂದು ಹೊಸ ಲೋಕ ರೂಪುಕೊಳ್ಳುತ್ತದೆ.

ಅಮ್ಯೂಸ್ ಪಾರ್ಕ್ ನಲ್ಲಿ ಎತ್ತರದ ಕಾವೇರಿ ಪ್ರತಿಮೆ ಸ್ಥಾಪಿಸುವ ಉದ್ದೇಶವಿದೆ. ಜಾಯಿಂಟ್ ವೀಲ್ ಮೊದಲದವನ್ನು ನಿರ್ಮಿಸಬೇಕಾದರೆ ಆಳವಾದ ಅಡಿಪಾಯ ಬೇಕಾಗುತ್ತದೆ. ಅದನ್ನು ಮಾಡುವಾಗ ಶತಮಾನದ ಅಂಚಿನಲ್ಲಿರುವ ಕಣ್ಣಂಬಾಡಿ ಕಟ್ಟೆಗೆ ಅಪಾಯ ತಪ್ಪಿದ್ದಲ್ಲ. ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಮಿರ್ಜಾ ಇಸ್ಮಾಯಿಲ್ ಅವರಕಾಲದಲ್ಲಿ ನಿರ್ಮಿತವಾದ ಪಾರಂಪರಿಕ ಬೃಂದಾವನಕ್ಕೆ ಪೆಟ್ಟು ಬೀಳುತ್ತದೆ. ಬರಿ ಮಂಡ್ಯ ಜಿಲ್ಲೆಯ ಜನತೆಗೆ ಮಾತ್ರವಲ್ಲ ಮೈಸೂರು, ಮಂಡ್ಯ, ರಾಮನಗರ, ಬೆಂಗಳೂರು ಮುಂತಾದ ನಗರದ ನಾಗರಿಕರಿಗೆ ಕುಡಿಯುವ ನೀರು ಸಿಗಲು ಕಾರಣವಾದ ಕನ್ನಡಿಗರ ಜೀವನಾಡಿ 'ಕಣ್ಣಂಬಾಡಿ ಕಟ್ಟೆ ' ಯ ರಕ್ಷಣೆಯ ದೃಷ್ಟಿಯಿಂದ ಇಲ್ಲಿ ಪಾರ್ಕ್ ನಿರ್ಮಿಸುವುದು ಸೂಕ್ತವಲ್ಲ.

ಮಳವಳ್ಳಿ ತಾಲ್ಲೂಕಿನ ಬ್ಲಫ್ ಹತ್ತಿರ, ಗಗನಚುಕ್ಕಿ ಜಲಪಾತ ಹತ್ತಿರ ವಿಶಾಲವಾದ ಜಾಗವಿದೆ. ಕೊಳ್ಳೇಗಾಲ ತಾಲ್ಲೂಕಿನ ಶಿವನಸಮುದ್ರ ದ್ವೀಪ ಈ ಪರಿಸರದಲ್ಲಿ 'ಅಮ್ಯೂಸ್ ಮೆಂಟ್ ' ಪಾರ್ಕ್ ನಿರ್ಮಿಸಿದರೆ. ಅಲ್ಲಿ ಒಂದು ಹೊಸ ಜಗತ್ತನ್ನೆ ಸೃಷ್ಟಿ ಮಾಡಬಹುದು. ಇದರಿಂದ ಅಲ್ಲಿನ ಪ್ರವಾಸೋದ್ಯಮ ದಿಂದ ಅಲ್ಲಿನ ರೈತರಿಗೆ, ಯುವಕರಿಗೆ ಉದ್ಯೋಗ ದೊರೆಯುತ್ತದೆ. ರಾಜ್ಯ ಸರ್ಕಾರ ಈ ಬಗ್ಗೆ ಚಿಂತನೆ ಮಾಡುವುದು ಸೂಕ್ತ.

**ಸಿ. ಸಿದ್ದರಾಜು ಆಲಕೆರೆ, ಮಂಡ್ಯ**

## ಚರ್ಮದ ಆರೈಕೆಗೆ ಅಲೋವೆರಾ ಜೆಲ್

### ಬ್ಯೂಟಿ ಟಿಪ್ಸ್



ಅಜ್ಜಿಯರ ಕಾಲದಿಂದಲೂ ಅಲೋವೆರಾ ಜೆಲ್ ಅನ್ನು ಚರ್ಮಕ್ಕೆ ವರದಾನವೆಂದು ಪರಿಗಣಿಸಲಾಗಿದೆ. ಅಲೋವೆರಾ ಜೆಲ್ ನಿಮ್ಮ ಚರ್ಮದ ಆರೋಗ್ಯವನ್ನು ಹೆಚ್ಚಿನ ಪ್ರಮಾಣದಲ್ಲಿ ಸುಧಾರಿಸುತ್ತದೆ. ಚರ್ಮದ ಆರೈಕೆಯ ದಿನಚರಿಯಲ್ಲಿ ಅಲೋವೆರಾ ಜೆಲ್ ಸೇರಿಸುವ ವಿಧಾನದ ಬಗ್ಗೆ ತಿಳಿಯಿರಿ... ಮೊದಲನೆಯದಾಗಿ ಒಂದು ಬಟ್ಟಲಿನಲ್ಲಿ 4 ಚಮಚಅಲೋವೆರಾ ಜೆಲ್‌ಹೊರತೆಗೆಯಿರಿ. ಈಗ ಅದೇ ಬಟ್ಟಲಿನಲ್ಲಿ ಒಂದು ಚಮಚ ಮೊಸರನ್ನು ತೆಗೆದುಕೊಂಡು ಈ ಎರಡು ನೈಸರ್ಗಿಕ ವಸ್ತುಗಳನ್ನು ಚೆನ್ನಾಗಿ ಮಿಶ್ರಣ ಮಾಡಿ ನಯವಾದ ಪೇಸ್ಟ್ ತಯಾರಿಸಿ. ಈ ವೇಳೆ ಅಲೋವೆರಾ ಜೆಲ್ ಮತ್ತು ಮೊಸರು ಎರಡೂ ತಾಜಾವಾಗಿರಬೇಕು. ಈ ರಾಸಾಯನಿಕ ರಹಿತ ಫೇಸ್‌ಪ್ಯಾಕ್ ಅನ್ನು ನಿಮ್ಮ ಸಂಪೂರ್ಣ ಮುಖ ಮತ್ತು ಕುತ್ತಿಗೆ ಪ್ರದೇಶಕ್ಕೆ ಸಂಪೂರ್ಣವಾಗಿ ಹಚ್ಚಬೇಕು. ಉತ್ತಮ ಫಲಿತಾಂಶಗಳನ್ನು ಪಡೆಯಲು ಈ ಫೇಸ್‌ಪ್ಯಾಕ್ ಅನ್ನು ಸುಮಾರು 15 ನಿಮಿಷಗಳ ಕಾಲ ಹಾಗೆಯೇ ಇರಿಸಿ. ನಂತರ ನಿಮ್ಮ ಮುಖವನ್ನು ತೊಳೆಯಿರಿ.

ನಿಮ್ಮ ಚರ್ಮವು ತುಂಬಾ ಒಣಗಿದ್ದರೆ, ಈ ಫೇಸ್ ಪ್ಯಾಕ್ ಅನ್ನು ಬಳಸುವುದರಿಂದ ನಿಮ್ಮ ಚರ್ಮವನ್ನು ಮೃದುವಾಗುತ್ತದೆ. ಈ ಫೇಸ್‌ಪ್ಯಾಕ್‌ನಲ್ಲಿರುವ ಮಾಯಿಶ್ಚರೈಸರ್ ಗುಣಗಳು ನಿಮ್ಮ ಚರ್ಮದ ಶುಷ್ಕತೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಅಲೋವೆರಾ ಜೆಲ್ ಮತ್ತು ಮೊಸರಿನಲ್ಲಿರುವ ಪದಾರ್ಥಗಳು ನಿಮ್ಮಚರ್ಮದ ಬಣ್ಣವನ್ನು ಸುಧಾರಿಸುವಲ್ಲಿ ಪರಿಣಾಮಕಾರಿ. ಆದರೆ ಈ ರಾಸಾಯನಿಕ ಮುಕ್ತ ಫೇಸ್‌ಪ್ಯಾಕ್ ಅನ್ನು ನಿಮ್ಮ ಸಂಪೂರ್ಣ ಮುಖದ ಮೇಲೆ ಹಚ್ಚುವ ಮೊದಲು ಪ್ಯಾಚ್ ಪರೀಕ್ಷೆಯನ್ನು ಮಾಡಲು ನೀವು ಮರೆಯಬಾರದು.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅನಾರೋಗ್ಯ ಸಮಸ್ಯೆಗಳು, ಮಕ್ಕಳಿಂದ ತೊಂದರೆ, ಹಿರಿಯ ವ್ಯಕ್ತಿಗಳ ಶಾಪಕ್ಕೆ ಗುರಿಯಾಗುವಿರಿ.

**ವೃಷಭ:** ಋಣ ರೋಗ ಬಾಧೆಗಳಿಂದ ಮುಕ್ತಿ, ಕುಟುಂಬದಲ್ಲಿ ವಾಗ್ವಾದಗಳು, ಪಾಲುದಾರಿಕೆಯಲ್ಲಿ ಆರ್ಥಿಕ ಸಂಕಷ್ಟಗಳು.

**ಮಿಥುನ:** ಸಂಕಷ್ಟಕ್ಕೆ ಸಿಲುಕುವಿರಿ, ಶುಭಕಾರ್ಯಗಳು ಮುಂದೂಡಿಕೆ, ಅನಾರೋಗ್ಯ ಸಮಸ್ಯೆಗಳು.

**ಕಟಕ:** ಮಾನಸಿಕ ಕಿರಿಕಿರಿ ಮತ್ತು ತೊಂದರೆ, ಆರ್ಥಿಕ ಸಂಕಷ್ಟಗಳಿಂದ ಮುಕ್ತಿ, ಸರ್ಕಾರಿ ಕೆಲಸ ಕಾರ್ಯಗಳಲ್ಲಿ ಅನುಕೂಲ.

**ಸಿಂಹ:** ಮಕ್ಕಳಿಂದ ಕಿರಿಕಿರಿ, ಅನಾರೋಗ್ಯ ಸಮಸ್ಯೆ, ಕೆಲಸ ಕಾರ್ಯಗಳಲ್ಲಿ ವಿಘ್ನ.

**ಕನ್ಯಾ:** ಉದ್ಯೋಗ ಲಾಭ, ಸಾಲಗಾರರಿಂದ ಮುಕ್ತಿ, ಶತ್ರು ದಮನ, ತಂತ್ರ ಬಾಧೆ.

**ತುಲಾ:** ನಿದ್ರಾಭಂಗ, ಉದ್ಯೋಗ ಒತ್ತಡಗಳು, ಕಾಲು ನೋವು ಮಂದತ್ವ, ಬುದ್ಧಿ ಚಂಚಲತೆ, ವೈರಾಗ್ಯದ ಭಾವ.

**ವೃಶ್ಚಿಕ:** ಆಕಸ್ಮಿಕ ಅವಘಡಗಳಿಂದ ಖರ್ಚು, ಸ್ಥಿರಾಸ್ತಿ ಭೂಮಿ ವಾಹನ ಖರೀದಿಯಲ್ಲಿ ಮೋಸ, ಕೆಲಸಕಾರ್ಯಗಳಲ್ಲಿ ಸೋಮಾರಿತನ,ಆಲಸ್ಯ ನಿರಾಸೆ.

**ಧನಸ್ಸು:** ಕುಟುಂಬದಲ್ಲಿ ಕಿರಿಕಿರಿ ಮತ್ತು ಕಲಹ, ಪ್ರಯಾಣಕ್ಕೆ ಅಡೆತಡೆ, ಅವಮಾನಗಳಿಗೆ ಗುರಿಯಾಗುವ ಸಂದರ್ಭ.

**ಮಕರ:** ವ್ಯವಹಾರ ಸ್ಥಳದಲ್ಲಿ ಕಿರಿಕಿರಿ, ಆರ್ಥಿಕ ಸಹಾಯ, ದಾಯಾದಿ ಕಲಹ, ಕೋರ್ಟ್ ಕೇಸುಗಳಲ್ಲಿ ಜಯ.

**ಕುಂಭ:** ಪಿತ್ರಾರ್ಜಿತ ಆಸ್ತಿಯಿಂದ ಲಾಭ, ಉದ್ಯೋಗ ಬದಲಾವಣೆಗೆ ಅಡೆತಡೆ, ದಾಂಪತ್ಯದಲ್ಲಿ ವಿರಸ.

**ಮೀನ:** ಆಕಸ್ಮಿಕ ಅವಘಡಗಳಿಂದ ಕಿರಿಕಿರಿ, ಕಬ್ಬಿಣದ ವಸ್ತುಗಳಿಂದ ಪೆಟ್ಟು, ಕೆಲಸ ಕಾರ್ಯಗಳಿಗೆ ಅಡೆತಡೆ, ಮಾನಸಿಕ ನೆಮ್ಮದಿ ಭಂಗ.

## ವಿಶ್ವ ಯೋಗ ದಿನದ

ಆರೋಗ್ಯ ಮತ್ತು ಸರ್ವತೋಮುಖ ಬೆಳವಣಿಗೆಗೆ ಯೋಗ ಉತ್ತಮ ಸಾಧನ. ಯೋಗ ಕೇವಲ ವ್ಯಾಯಾಮವಲ್ಲ, ಇದು ವಿಶ್ವ ಮತ್ತು ಪ್ರಕೃತಿಯೊಂದಿಗೆ ನಮ್ಮತನವನ್ನು ಒಂದಾಗಿಸುವ ವಿದ್ಯೆಯಾಗಿದೆ. ಯೋಗವು ಬದುಕನ್ನು ಬದಲಿಸುವ ಮತ್ತು ಆತ್ಮಸಾಕ್ಷಿಯ ಸೃಷ್ಟಿ. ಯೋಗದ ಗುರಿಯು ಕೇವಲ ದೇಹವನ್ನು ಸರಿಪಡಿಸುವುದು ಮಾತ್ರವಲ್ಲ. ಮನಸ್ಸು, ದೇಹ ಮತ್ತು ಆತ್ಮ ಸೇರಿದ ಎಲ್ಲ ಮೂರು ಅಂಶಗಳನ್ನು ಶುದ್ದೀಕರಿಸಲು ನೆರವಾಗುತ್ತದೆ. ಇದು ನಾವು ಮತ್ತು ಪ್ರಕೃತಿ ಮಾತೆಯ ಜೊತೆ ಸಂಪರ್ಕವನ್ನು ಕಲ್ಪಿಸುತ್ತದೆ. ಇದು ನಮ್ಮನ್ನು ನಮ್ಮ ನೈಜತೆಯ ಹತ್ತಿರಕ್ಕೆ ಕೊಂಡೊಯ್ಯುತ್ತದೆ. ಯೋಗವು ವ್ಯಾಯಮ ಮಾತ್ರವಲ್ಲದೇ ನಿಮ್ಮೊಂದಿಗೆ, ವಿಶ್ವ ಹಾಗೂ ಪ್ರಕೃತಿಯ ಜೊತೆಗೆ ಏಕತೆಯ ಅರ್ಥವನ್ನು ಕಂಡುಹಿಡಿಯಲು ನೆರವಾಗುತ್ತದೆ. ನಮ್ಮ ಜೀವನಶೈಲಿ ಹಾಗೂ ಪ್ರಜ್ಞೆ ರಚಿಸುವ ಮೂಲಕ ಹವಮಾನ ಬದಲಾವಣೆ ನಿಭಾಯಿಸಲು ಮತ್ತು ಯೋಗಕ್ಷೇಮವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಯೋಗವು ಮನಸ್ಸು ಮತ್ತು ದೇಹ, ಚಿಂತನೆ ಮತ್ತು ಕ್ರಿಯೆ, ಸಂಯಮ ಮತ್ತು ಸಾರ್ಥಕತೆಯನ್ನು ಒಗ್ಗೂಡಿಸುತ್ತದೆ. ಹಾಗೇಯೆ ಪ್ರಕೃತಿ ಮತ್ತು ಮನುಷ್ಯನ ನಡೆವೆ ಸಾಮರಸ್ಯವನ್ನುಂಟು ಮಾಡುತ್ತದೆ. ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತಮವಾಗಿರಿಸಲು ಸಹಾಯ ಮಾಡುತ್ತದೆ. ಯೋಗವು 6000 ವರ್ಷಕ್ಕೂ ಹಳೆಯದಾದ ಭೌತಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಅಭ್ಯಾಸವಾಗಿದೆ. ಪ್ರತಿವರ್ಷ ಯೊಗದ ದಿನಾಚರಣೆಯು ಯೋಗ, ಧ್ಯಾನ, ಸಭೆಗಳು ಚರ್ಚೆಗಳು, ಸಾಂಸ್ಕೃತಿಕ ಪ್ರದರ್ಶನಗಳು ಇತ್ಯಾದಿಗಳನ್ನು ಅಭ್ಯಸಿಸುವುದರ ಮೂಲಕ ವಿಶ್ವದ ಬಹುತೇಕ ರಾಷ್ಟ್ರಗಳಲ್ಲಿ ಯೋಗ ದಿನವನ್ನು ಆಚರಿಸಲಾಗುತ್ತದೆ. ಯೋಗ ದಿನಾಚರಣೆ ಆಚರಣೆ ಬಗ್ಗೆ 2014 ಸೆಪ್ಟೆಂಬರ್‌ನಲ್ಲಿ ನಡೆದ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮೊದಲ ಬಾರಿಗೆ ಪ್ರಧಾನಿ ಮೋದಿಯವರು ಪ್ರಸ್ತಾಪವನ್ನು ಮಂಡಿಸಿದ್ದರು. ನರೇಂದ್ರ ಮೋದಿ ಅವರು ಭಾರತದ ಪ್ರಧಾನಿಯಾಗಿ ಮೊದಲ ಬಾರಿ ಅಧಿಕಾರ ವಹಿಸಿಕೊಂಡ ವರ್ಷವೇ 2014ರ ಸೆಪ್ಟೆಂಬರ್‌ನಲ್ಲಿ ನಡೆದ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಯೋಗದ ಮಹತ್ವವನ್ನು ಸಾರಿದರು. ಯೋಗವು ವಿಶ್ವ ಶಾಂತಿಗೂ ಪೂರಕ ಎನ್ನುವುದನ್ನು ವಿಶ್ವ ಸಂಸ್ಥೆಯ ಸದಸ್ಯರ ರಾಷ್ಟ್ರಗಳಿಗೆ ಮನವರಿಕೆ ಮಾಡಿಕೊಟ್ಟರು. ಆ ವೇಳೆ ವಿಶ್ವ ಸಂಸ್ಥೆಯ ಮುಂದೆ ಯೋಗ ದಿನ ಆಚರಣೆಯ ಪ್ರಸ್ತಾವನೆಯನ್ನು ಮುಂದಿಟ್ಟರು. ಇದನ್ನು ವಿಶ್ವ ಸಂಸ್ಥೆ ಮಾನ್ಯ ಮಾಡಿತು. ನಂತರ ತನ್ನ ಎಲ್ಲ ಸದಸ್ಯ ರಾಷ್ಟ್ರಗಳ ಅಭಿಪ್ರಾಯ ಸಂಗ್ರಹಿಸಿ, 2015ರಲ್ಲಿ ಜೂನ್ 21ನ್ನು ವಿಶ್ವ ಯೋಗ ದಿನ ಎಂದು ಘೋಷಿಸಿತು. ಅದರೊಂದಿಗೆ, ಭಾರತಕ್ಕಷ್ಟೇ ಸೀಮಿತವಾಗಿದ್ದ, ಕೆಲವು ಆಸಕ್ತ ವಿದೇಶಿಗರಷ್ಟೇ ಮಾಡುತ್ತಿದ್ದ ಯೋಗವನ್ನು ಪ್ರಪಂಚದಾದ್ಯಂತ ಸಾಮೂಹಿಕವಾಗಿ ಅಭ್ಯಸಿಸುವಂತೆ ಮಾಡುವಲ್ಲಿ ಮೋದಿ ಯಶಸ್ವಿಯಾದರು. ಪ್ರಧಾನಿ ಮೋದಿ ಅವರ ಭಾಷಣದ ಬಳಿಕ 2014ರ ಡಿಸೆಂಬರ್ 11ರಂದು ವಿಶ್ವ ಸಂಸ್ಥೆಯಲ್ಲಿ ಮಸೂದೆಯೊಂದನ್ನು ಮಂಡಿಸಲಾಯಿತು. ಭಾರತದ ವಿಶ್ವ ಸಂಸ್ಥೆಯ ಪ್ರತಿನಿಧಿ ಅಶೋಕ್ ಮುಖರ್ಜಿ ಅವರು ಕರಡನ್ನು ಸಿದ್ಧಪಡಿಸಿ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಂಡಿಸಿದರು. ಈ ಕರಡಿಗೆ ಯಾವುದೇ ವಿರೋಧವಿಲ್ಲದೆ 177 ದೇಶಗಳು ಒಪ್ಪಿದವು. ಒಂದೂ ಮತ ಚಲಾವಣೆಯಾಗದೆ ಯೋಗ ದಿನ ಆಚರಣೆಯ ಕರಡು ಪ್ರತಿ ಅಂಗೀಕಾರವಾಯಿತು. ಬಳಿಕ ಮಸೂದೆಯನ್ನು ಅಂಗೀಕರಿಸಲಾಯಿತು. ಇದು ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ತಕರಾರು ಇಲ್ಲದೆ, ಹೆಚ್ಚಿನ ಬೆಂಬಲ ಪಡೆದು ಅಂಗೀಕಾರಗೊಂಡ ಮಸೂದೆ ಎಂಬ ಖ್ಯಾತಿಯನ್ನು ಹೊಂದಿದೆ.

ಸಂಜೆ ಮುಗಿಲು
ಶನಿವಾರ
21.6.2025



# ಅಸ್ವಾಭಾವಿಕ ನಡವಳಿಕೆ, ಸರಿಯಾದ ವಿವರಣೆ ನೀಡಿಲ್ಲ; ನ್ಯಾಯಮೂರ್ತಿ ಯಶವಂತ ವರ್ಮಾ ಪದಚ್ಯುತಿಗೆ ಸುಪ್ರೀಂ ಕೋರ್ಟ್ ಸಮಿತಿ ಶಿಫಾರಸು!

**ನವದೆಹಲಿ:** ನ್ಯಾಯಮೂರ್ತಿ ಯಶವಂತ ವರ್ಮಾ ಪದಚ್ಯುತಿಗೆ ಸುಪ್ರೀಂಕೋರ್ಟ್ ನ ಮೂವರು ಸದಸ್ಯರನ್ನೊಳಗೊಂಡ ಸಮಿತಿ ಶಿಫಾರಸ್ಸು ಮಾಡಿದೆ. ಅವರ ನಿವಾಸದಲ್ಲಿ ಸುಟ್ಟ ಮತ್ತು ಸುಡದ ಕಂತೆ ಕಂತೆ ಹಣ ಪತ್ತೆಯಾದ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಸಮಿತಿ ಈ ಕ್ರಮಕ್ಕೆ ಶಿಫಾರಸು ಮಾಡಿದೆ ಎಂದು ಮೂಲಗಳು ತಿಳಿಸಿವೆ.

55 ಕ್ಕೂ ಹೆಚ್ಚು ಸಾಕ್ಷಿಗಳನ್ನು ವಿಚಾರಣೆಗೊಳಪಡಿಸಿದ ಸಮಿತಿ, ಇಂದು ಬೆಳಗ್ಗೆ ಸಲ್ಲಿಸಿರುವ ತನ್ನ 64 ಪುಟಗಳ ವರದಿಯಲ್ಲಿ ನ್ಯಾಯಮೂರ್ತಿ ವರ್ಮಾ ದುರ್ವರ್ತನೆಗಾಗಿ ದೋಷಾರೋಪಣೆ ಮಾಡಿದೆ.

ನ್ಯಾಯಮೂರ್ತಿ ವರ್ಮಾ ಅವರ ಅಧಿಕೃತ ನಿವಾಸ 30 ತುಘಲಕ್ ಕ್ರೆಸೆಂಟ್‌ನ ಆವರಣದಲ್ಲಿರುವ ನಿವಾಸದಲ್ಲಿನ ಸ್ಟೋರ್‌ರೂಮ್‌ನಲ್ಲಿ ಪತ್ತೆಯಾದ ಹಣವನ್ನು ಸಮಿತಿಯು ಹೊಂದಿದೆ ಎಂದು ವರದಿ ಹೇಳಿದೆ.

ನ್ಯಾಯಮೂರ್ತಿ ವರ್ಮಾ ಅವರು ತಮ್ಮ ನಿವಾಸದಲ್ಲಿ ಪತ್ತೆಯಾದ ಹಣದ ಬಗ್ಗೆ ಏನೂ ಗೊತ್ತಿಲ್ಲ ಎಂಬುದಕ್ಕೆ ಸಮರ್ಥನೀಯ ವಿವರಣೆ ನೀಡಲು ವಿಫಲರಾಗಿದ್ದಾರೆ ಸಮಿತಿ ಹೇಳಿದೆ. ಇದು ನಂಬಲು ಸಾಧ್ಯವಿಲ್ಲ. ಯಾವುದೇ ಪಿತೂರಿ



ನಡೆದಿದ್ದರೆ, ಅವರು ಏಕೆ ದೂರು ದಾಖಲಿಸಲಿಲ್ಲ ಅಥವಾ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಅಥವಾ ಭಾರತದ ಮುಖ್ಯ ನ್ಯಾಯಮೂರ್ತಿಗಳಿಗೆ ಯಾಕೆ ತಿಳಿಸಲಿಲ್ಲ? ಎಂದು ಪ್ರಶ್ನಿಸಿದೆ.

ನ್ಯಾಯಮೂರ್ತಿ ವರ್ಮಾ ಅವರ ನಿವಾಸದಲ್ಲಿ ಕಂತೆ ಕಂತೆ ಹಣ ಪತ್ತೆಯಾಗಿದೆ ಎಂದು ತಿಳಿಸಿರುವ ಸಮಿತಿ, ಅವರು ಯಾಕೆ ಘಟನೆಯ ಬಗ್ಗೆ ಪೊಲೀಸರು, ನ್ಯಾಯಾಂಗ ಅಥವಾ ಯಾವುದೇ ಪ್ರಾಧಿಕಾರಕ್ಕೆ ವರದಿ ಮಾಡಿಲ್ಲ ಎಂದು ನ್ಯಾಯಾಧೀಶರ ವಿರುದ್ಧ ಕಟುವಾದ ಟೀಕೆ ಮಾಡಿದೆ. ಹೆಚ್ಚಿನ ಸಂಖ್ಯೆಯ ಪ್ರತ್ಯಕ್ಷದರ್ಶಿಗಳ ಖಾತೆಗಳು ಮತ್ತು ಸಾಕ್ಷ್ಯಗಳನ್ನು ಪರಿಶೀಲಿಸಿದ ನಂತರ ಸಮಿತಿಯು ರೂ. 500 ರೂ ನೋಟುಗಳನ್ನು ದೃಢಪಡಿಸಿದೆ. ಇದು ಅಲಹಾಬಾದ್ ಹೈಕೋರ್ಟ್ ನ್ಯಾಯಾಧೀಶರ ನಡವಳಿಕೆಯನ್ನು 'ಅಸ್ವಾಭಾವಿಕ' ಎಂದು ವಿವರಿಸಿದೆ. ಸಮಿತಿಯ ಸಂಶೋಧನೆಗಳ ಹೊರತಾಗಿಯೂ ನ್ಯಾಯಮೂರ್ತಿ ವರ್ಮಾ ರಾಜೀನಾಮೆ ನೀಡಲು ನಿರಾಕರಿಸಿದ ನಂತರ ಈ ನಿರ್ಧಾರ ಕೈಗೊಳ್ಳಲಾಯಿತು. ಮಾಜಿ ಸಿಜೆಐ ಖನ್ನಾ ಅವರು ರಾಷ್ಟ್ರಪತಿ ಮತ್ತು ಪ್ರಧಾನಿಗೆ ಪತ್ರ ಬರೆದಿದ್ದರು, ಮೇ 3 ರಂದು ತ್ರಿಸದಸ್ಯ ತನಿಖಾ ಸಮಿತಿಯ ವರದಿ ಮತ್ತು ಮೇ 6 ರಂದು ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ಪ್ರತಿಕ್ರಿಯೆಯನ್ನು ಲಗತ್ತಿಸಿದ್ದರು.

ಮಾರ್ಚ್ 14 ರಂದು ನ್ಯಾಯಮೂರ್ತಿ ವರ್ಮಾ ಅವರ ನಿವಾಸದಿಂದ ಪತ್ತೆಯಾದ ಹಣ ಕುರಿತು ತನಿಖೆ ನಡೆಸುತ್ತಿದ್ದ ಸುಪ್ರೀಂ ಕೋರ್ಟ್ ನೇಮಿಸಿದ ಸಮಿತಿಯು ಮೇ 4 ರಂದು ಆಗಿನ ಸಿಜೆಐಗೆ ತನ್ನ ವರದಿ ಸಲ್ಲಿಸಿತ್ತು. ದೋಷಾರೋಪಣೆಯ ನಂತರ, ನ್ಯಾಯಮೂರ್ತಿ ಖನ್ನಾ ಅವರು ನ್ಯಾಯಮೂರ್ತಿ ವರ್ಮಾ ಅವರಿಗೆ ರಾಜೀನಾಮೆ ನೀಡುವಂತೆ ಕೇಳಿದ್ದರು.

ದೆಹಲಿ ಪೊಲೀಸ್ ಕಮಿಷನರ್ ಸಂಜಯ್ ಅರೋರಾ ಮತ್ತು ದೆಹಲಿ ಅಗ್ನಿಶಾಮಕ ಸೇವೆಗಳ ಮುಖ್ಯಸ್ಥರು ಸೇರಿದಂತೆ 45 ಕ್ಕೂ ಹೆಚ್ಚು ವ್ಯಕ್ತಿಗಳಿಂದ ಹಲವಾರು ಸಾಕ್ಷ್ಯಗಳು ಮತ್ತು ಹೇಳಿಕೆಗಳನ್ನು ದಾಖಲಿಸಿದ ನಂತರ ಸಮಿತಿಯು ಈ ನಿರ್ಧಾರಕ್ಕೆ ಬಂದಿತ್ತು. ಈ ಆರೋಪವನ್ನು ನ್ಯಾಯಮೂರ್ತಿ ಯಶವಂತ್ ವರ್ಮಾ ಅವರು ದೆಹಲಿ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಮತ್ತು ಸುಪ್ರೀಂ ಕೋರ್ಟ್ ನೇಮಿಸಿದ ತನಿಖಾ ಸಮಿತಿಗೆ ನೀಡಿದ ಪ್ರತಿಕ್ರಿಯೆಗಳಲ್ಲಿ ನಿರಾಕರಿಸಿದ್ದರು. ಸುಪ್ರೀಂ ಕೋರ್ಟ್ ನೇಮಿಸಿದ ಮೂವರು ನ್ಯಾಯಾಧೀಶರ ತನಿಖಾ ಸಮಿತಿಯು ಮೇ 4 ರಂದು ಸಿಜೆಐಗೆ ವರದಿಯನ್ನು ಸಲ್ಲಿಸಿತ್ತು. ನಗದು ಪತ್ತೆಯಾದ 40 ದಿನಗಳ ನಂತರ ಸುಪ್ರೀಂಕೋರ್ಟ್ ನಿಂದ ಸಮಿತಿ ನೇಮಿಸಲಾಗಿತ್ತು.

ಸುಪ್ರೀಂ ಕೋರ್ಟ್ ಮಾರ್ಚ್ 25 ರಂದು ಪಂಜಾಬ್ ಮತ್ತು ಹರಿಯಾಣದ ಹೈಕೋರ್ಟ್‌ನ ನ್ಯಾಯಮೂರ್ತಿ ಶೀಲ್ ನಾಗು, ಹಿಮಾಚಲ ಪ್ರದೇಶದ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಜಿ ಎಸ್ ಸಂಧವಾಲಿಯಾ ಮತ್ತು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಅನು ಶಿವರಾಮನ್ ಅವರನ್ನೊಳಗೊಂಡ ಮೂವರು ಸದಸ್ಯರ ತನಿಖಾ ಸಮಿತಿಯನ್ನು ರಚಿಸಿತ್ತು.

## ಗುಂಡಿನ ಚಕಮಕಿಯಲಿ ಕುಕಿ ಸಮುದಾಯದ ಮಹಿಳೆ ಸಾವು ಮಣಿಪುರ ಮತ್ತೆ ಉದ್ವಿಗ್ನ

**ಇಂಫಾಲ್:** ಮಣಿಪುರದ ಚೂರಚಂದ್‌ಪುರದಲ್ಲಿ ಭದ್ರತಾ ಪಡೆ ಮತ್ತು ಶಸ್ತ್ರಸಜ್ಜಿತ ಗುಂಪಿನ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಕುಕಿ ಸಮುದಾಯದ ಮಹಿಳೆ ಸಾವನ್ನಪ್ಪಿದ್ದಾರೆ. ಈ ಘಟನೆಯಿಂದ ಕುಕಿ ಮತ್ತು ಮೈತೆಯಿ ಸಮುದಾಯಗಳ ನಡುವೆ ಮತ್ತೆ ಘರ್ಷಣೆ ಉಂಟಾಗಿದ್ದು, ಉದ್ವಿಗ್ನತೆಗೆ ಕಾರಣವಾಗಿದೆ. ಗುರುವಾರ ಮಧ್ಯಾಹ್ನ ಬಿಷ್ಣುಪುರದ ಕಣಿವೆ ಜಿಲ್ಲೆಯ ಹೊಲದಲ್ಲಿ ಕೆಲಸ ಮಾಡುತ್ತಿದ್ದಾಗ ಮೈತೆಯಿ ರೈತನೊಬ್ಬನ ಮೇಲೆ ಬೆಟ್ಟದಲ್ಲಿ ಅವಿತಿದ್ದ ದಾಳಿಕೋರರು ಗುಂಡು ಹಾರಿಸಿದ್ದರು. ಗುಂಡೇಟಿನಿಂದ ರೈತ ಗಾಯಗೊಂಡ ನಂತರ ಭದ್ರತಾ ಪಡೆ ಶೋಧ ಕಾರ್ಯಾಚರಣೆ ಆರಂಭಿಸಿತ್ತು. ಕಾರ್ಯಾಚರಣೆಯ ಸಮಯದಲ್ಲಿ ಭದ್ರತಾ ಪಡೆಗಳ ಮೇಲೆ ಅಪರಿಚಿತ ಶಸ್ತ್ರಸಜ್ಜಿತ ಗುಂಪು ಗುಂಡಿನ ದಾಳಿ ನಡೆಸಿತ್ತು. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆಯೂ ಗುಂಡಿನ ದಾಳಿ ನಡೆಸಿತ್ತು. ಈ ವೇಳೆ ಮಹಿಳೆಗೆ ಗುಂಡು ತಾಗಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮೃತ ಮಹಿಳೆಯನ್ನು ಲಾಂಗ್‌ಚಿಂಗ್‌ಮನ್ಸಿ ಎನ್ನುವ ಗ್ರಾಮದ ಮುಖ್ಯಸ್ಥನ ಪತ್ನಿ ಎಂದು ಗುರುತಿಸಲಾಗಿದೆ. ಸ್ಥಳದಲ್ಲಿ ಕಾರ್ಯಾಚರಣೆ ಮುಂದುವರಿದಿದೆ. ಆರೋಪಿಗಳನ್ನು ಸೆರೆ ಹಿಡಿಯಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ಸಾರ್ವಜನಿಕರು ಶಾಂತಿ ಕಾಪಾಡಬೇಕು, ಸುಳ್ಳು ಸುದ್ದಿಗಳ ಪ್ರಸಾರವನ್ನು ತಡೆಯಬೇಕು ಎಂದು ಪೊಲೀಸರು ಒತ್ತಾಯಿಸಿದ್ದಾರೆ.

## ಜ.15ರವರೆಗೆ 3 ವಿದೇಶಿ ಮಾರ್ಗಗಳಲ್ಲಿ ಏರ್‌ಇಂಡಿಯಾ ವಿಮಾನ ಸೇವೆ ಸ್ಥಗಿತ

**ನವದೆಹಲಿ:** ಇತ್ತೀಚೆಗೆ ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾವಿಮಾನ ಅಪಘಾತದ ಬಳಿಕ ಜುಲೈ 15ರವರೆಗೆ ಮೂರು ಅಂತಾರಾಷ್ಟ್ರೀಯ ಮಾರ್ಗಗಳಲ್ಲಿ ವಿಮಾನ ಸೇವೆ ಸ್ಥಗಿತಗೊಳಿಸಿರುವುದಾಗಿ ಏರ್ ಇಂಡಿಯಾ ತಿಳಿಸಿದೆ. ಟಾಟಾ ಗ್ರೂಪ್ ಒಡೆತನದ ಏರ್ ಇಂಡಿಯಾ ಜೂನ್ 21ರಿಂದ ಜುಲೈ 15ರವರೆಗೆ 3 ಅಂತಾರಾಷ್ಟ್ರೀಯ ಮಾರ್ಗಗಳಲ್ಲಿ ತಮ್ಮ



ವಿಮಾನಗಳು ಹಾರಾಟ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಇದಲ್ಲದೆ, ಇತರ 16 ಮಾರ್ಗಗಳಲ್ಲಿ ಸೇವೆಗಳನ್ನು ಕಡಿತಗೊಳಿಸಲಾಗುತ್ತಿದೆ.

ಜೂನ್ 12 ರಂದು ಅಹಮದಾಬಾದ್ ನಲ್ಲಿ ನಡೆದ ವಿಮಾನ ಅಪಘಾತದ ನಂತರ ವಿಮಾನ ಕಾರ್ಯಾಚರಣೆಯಲ್ಲಿನ ಅಡಚಣೆಗಳಿಂದಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ದೆಹಲಿ-ನೈರೋಬಿ, ಅಮೃತಸರ-ಲಂಡನ್ (ಗ್ಯಾಟ್ವಿಕ್) ಮತ್ತು ಗೋವಾ (ಮೋಪಾ)-ಲಂಡನ್ (ಗ್ಯಾಟ್ವಿಕ್) ನಡುವಿನ ವಿಮಾನಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿದೆ. ಅದೇ ಸಮಯದಲ್ಲಿ, ಉತ್ತರ ಅಮೆರಿಕಾ, ಯುರೋಪ್, ಆಸ್ಟ್ರೇಲಿಯಾ ಮತ್ತು ಇತರ ಮಾರ್ಗಗಳಲ್ಲಿ 16 ಅಂತರರಾಷ್ಟ್ರೀಯ ವಿಮಾನಗಳ ಸಂಖ್ಯೆಯನ್ನು ಕಡಿಮೆ ಮಾಡಲಾಗಿದೆ. ಏರ್ ಇಂಡಿಯಾ ಪ್ರಕಾರ, ಈ ನಿರ್ಧಾರವನ್ನು ಎರಡು ಪ್ರಮುಖ ಕಾರಣಗಳಿಗಾಗಿ ತೆಗೆದುಕೊಳ್ಳಲಾಗಿದೆ. ಮೊದಲನೆಯದಾಗಿ, ಎಲ್ಲಾ ವಿಮಾನಗಳ ಮೊದಲು ಕಟ್ಟುನಿಟ್ಟಿನ ಭದ್ರತಾ ತಪಾಸಣೆಗೆ ಸಮಯ ನೀಡುವುದು, ಮತ್ತು ಎರಡನೆಯದಾಗಿ, ಮಧ್ಯಪ್ರಾಚ್ಯದಲ್ಲಿ ವಾಯುಪ್ರದೇಶ ಮುಚ್ಚುವಿಕೆಯಿಂದಾಗಿ ಹಾರಾಟದ ಅವಧಿ ಹೆಚ್ಚಾಗಿದೆ.

ಏರ್ ಇಂಡಿಯಾ ಮತ್ತೊಮ್ಮೆ ತೊಂದರೆಗೊಳಗಾದ ಪ್ರಯಾಣಿಕರಲ್ಲಿ ಕ್ಷಮೆಯಾಚಿಸಿದೆ ಮತ್ತು ಪರ್ಯಾಯ ವಿಮಾನಗಳು, ಉಚಿತ ಮರು-ವೇಳಾಪಟ್ಟಿ ಮತ್ತು ಪೂರ್ಣ ಮರುಪಾವತಿಯಂತಹ ಆಯ್ಕೆಗಳನ್ನು ಒದಗಿಸುತ್ತಿದೆ ಎಂದು ಹೇಳಿದೆ. ವಿಮಾನಯಾನ ತಂಡವು ಪ್ರಯಾಣಿಕರನ್ನು ನೇರವಾಗಿ ಸಂಪರ್ಕಿಸುತ್ತಿದೆ ಇದರಿಂದ ಅವರು ಕಡಿಮೆ ಅನನುಕೂಲತೆಯನ್ನು ಎದುರಿಸುತ್ತಾರೆ ಮತ್ತು ಅವರ ಪ್ರಯಾಣವನ್ನು ಮರು ಯೋಜಿಸಬಹುದಾಗಿದೆ.

ಗಮನಿಸಬೇಕಾದ ಅಂಶವೆಂದರೆ, ಇದಕ್ಕೂ ಒಂದು ದಿನ ಮೊದಲು, ಏರ್ ಇಂಡಿಯಾ ತನ್ನ ವೈಡ್-ಬಾಡಿ ವಿಮಾನಗಳ ಹಾರಾಟದಲ್ಲಿ ಶೇಕಡಾ 15 ರಷ್ಟು ಕಡಿತವನ್ನು ಘೋಷಿಸಿತ್ತು. ವಿಮಾನಯಾನ ಸಂಸ್ಥೆಯು ತನ್ನ ಕಾರ್ಯಾಚರಣೆಯನ್ನು ಮತ್ತೆ ಹಳಿಗೆ ತರಲು ಪ್ರಯತ್ನಿಸುತ್ತಿರುವ ಸಮಯದಲ್ಲಿ ಈ ನಿರ್ಧಾರ ಬಂದಿದೆ. ದೆಹಲಿ-ನೈರೋಬಿ ಮಾರ್ಗವು ವಾರಕ್ಕೆ ನಾಲ್ಕು ವಿಮಾನಗಳನ್ನು ಹೊಂದಿದ್ದರೆ, ಅಮೃತಸರ-ಲಂಡನ್ (ಗ್ಯಾಟ್ವಿಕ್) ಮತ್ತು ಗೋವಾ (ಮೋಪಾ)-ಲಂಡನ್ (ಗ್ಯಾಟ್ವಿಕ್) ಮಾರ್ಗಗಳು ವಾರಕ್ಕೆ ಮೂರು ವಿಮಾನಗಳನ್ನು ಹೊಂದಿವೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ. ಇದಲ್ಲದೆ, ಉತ್ತರ ಅಮೆರಿಕ, ಯುರೋಪ್, ಆಸ್ಟ್ರೇಲಿಯಾ ಮತ್ತು ದೂರದ ಪೂರ್ವದ ನಗರಗಳನ್ನು ಸಂಪರ್ಕಿಸುವ 18 ಅಂತರರಾಷ್ಟ್ರೀಯ ಮಾರ್ಗಗಳಲ್ಲಿ ವಿಮಾನಗಳನ್ನು ಕಡಿಮೆ ಮಾಡಲಾಗುವುದು. ಉತ್ತರ ಅಮೆರಿಕದಲ್ಲಿ ದೆಹಲಿ-ಟೊರೊಂಟೊ, ದೆಹಲಿ-ವ್ಯಾಂಕೋವರ್, ದೆಹಲಿ-ಸ್ಯಾನ್ ಫ್ರಾನ್ಸಿಸ್ಕೊ, ದೆಹಲಿ-ಚಿಕಾಗೋ ಮತ್ತು ದೆಹಲಿ-ವಾಷಿಂಗ್ಟನ್ ಮಾರ್ಗಗಳ ನಡುವೆ ವಿಮಾನ ಸಂಚಾರ ಕಡಿಮೆಯಾಗಲಿದೆ.

## ಲೋಕಸಭಾ ಚುನಾವಣೆ: ಒಟ್ಟು ಚುನಾವಣಾ ವೆಚ್ಚದ ಶೇ. 45ರಷ್ಟನ್ನು ವ್ಯಯಿಸಿದ ಬಿಜೆಪಿ!

**ಹೊಸದಿಲ್ಲಿ:** ಕಳೆದ ವರ್ಷ ನಡೆದ ಲೋಕಸಭಾ ಚುನಾವಣೆ ಹಾಗೂ ಏಕಕಾಲದಲ್ಲಿ ನಡೆದ ನಾಲ್ಕು ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ 32 ರಾಷ್ಟ್ರೀಯ ಹಾಗೂ ಪ್ರಾದೇಶಿಕ ಪಕ್ಷಗಳ ಪೈಕಿ ಬಿಜೆಪಿಯು ಗರಿಷ್ಠ ದೇಣಿಗೆಗಳನ್ನು ಸ್ವೀಕರಿಸಿತ್ತು ಹಾಗೂ ಅತ್ಯಧಿಕ ಹಣವನ್ನು ವ್ಯಯಿಸಿತ್ತು ಎಂದು ಅಸೋಸಿಯೇಷನ್ ಫಾರ್ ಡೆಮಾಕ್ರೆಟಿಕ್ ರಿಫಾರ್ಮ್ಸ್ (ಎಡಿಆರ್)ವು ಶುಕ್ರವಾರ ಪ್ರಕಟಿಸಿದ ವರದಿ ತಿಳಿಸಿದೆ.





ರಾಜಕೀಯ ಪಕ್ಷಗಳು ಸ್ವೀಕರಿಸಿದ ಒಟ್ಟು 7445.56 ಕೋಟಿ ರೂ. ದೇಣಿಗೆಗಳ ಪೈಕಿ ಬಿಜೆಪಿಗೆ 6,268 ಕೋಟಿ ರೂ.ಪಡೆದಿದ್ದು, ಇದು ಎಲ್ಲಾ ರಾಜಕೀಯ ಪಕ್ಷಗಳು ಗಳಿಸಿರುವ ಒಟ್ಟು ದೇಣಿಗೆಯ ಶೇ.84.18ರಷ್ಟಾಗಿದೆ. ಪ್ರಮುಖ ಪ್ರತಿಸ್ಪರ್ಧಿಯಾದ ಕಾಂಗ್ರೆಸ್ ಪಕ್ಷವು 592.48 ಕೋಟಿ ರೂ. ದೇಣಿಗೆಯನ್ನು ಪಡೆದಿದ್ದು, ದ್ವಿತೀಯ ಸ್ಥಾನದಲ್ಲಿದೆ. ಇದು ಎಲ್ಲಾ ರಾಜಕೀಯ ಪಕ್ಷಗಳ ಒಟ್ಟು ದೇಣಿಗೆಯ ಶೇ.7.96ರಷ್ಟಾಗಿದೆ. ಐದು ರಾಷ್ಟ್ರೀಯ ಪಕ್ಷಗಳು 6930.24 ಕೋಟಿ ರೂ. (93.08 ಶೇ.) ದೇಣಿಗೆಗಳನ್ನು ಪಡೆದರೆ, ಪ್ರಾದೇಶಿಕ ಪಕ್ಷಗಳು 515.32 ಕೋಟಿ ರೂ. (6.92 ಶೇ.) ಗಳಿಸಿವೆ.

ವೈಎಸ್‌ಆರ್-ಕಾಂಗ್ರೆಸ್ 171.753 ಕೋಟಿ ರೂ. (2.31 ಶೇ.), ತೆಲುಗುದೇಶಂ 107.93 ಕೋಟಿ ರೂ. (1.45 ಶೇ.) ದೇಣಿಗೆಗಳನ್ನು ಪಡೆದಿದ್ದು, ಕ್ರಮವಾಗಿ ಆನಂತರದ ಸ್ಥಾನಗಳಲ್ಲಿವೆ. ಸಿಪಿಐ (ಎಂ)ಗೆ 62.74 ಕೋಟಿ ರೂ. (0.84 ಶೇ.) ದೇಣಿಗೆ ದೊರೆತಿದೆ.

ನಾವಣಾ ವೆಚ್ಚದಲ್ಲಿಯೂ ಬಿಜೆಪಿಯು ಅಗ್ರಸ್ಥಾನದಲ್ಲಿದೆ. ಚುನಾವಣೆಗಳಿಗಾಗಿ ಬಿಜೆಪಿಯು 1,493.91 ಕೋಟಿ ರೂ. ಖರ್ಚು ಮಾಡಿದೆ. ಇದು ಎಲ್ಲಾ ರಾಜಕೀಯ ಪಕ್ಷಗಳ ಚುನಾವಣಾ ವೆಚ್ಚ(3,352.81 ಕೋಟಿ ರೂ.)ದ ಶೇ.44.56ರಷ್ಟು ಆಗಿದೆ. ಕಾಂಗ್ರೆಸ್ 620.14 ಕೋಟಿ ರೂ. (18.50 ಶೇ.) ವೆಚ್ಚ ಮಾಡಿದ್ದು , ತೀರಾ ದೂರದಲ್ಲಿ ದ್ವಿತೀಯ ಸ್ಥಾನದಲ್ಲಿದೆ.

## ಜರ್ಮನಿಯಲ್ಲಿ ಎಂಬಿಎ ವ್ಯಾಸಂಗ ಮಾಡುತ್ತಿದ ಭಾರತೀಯ ವಿದ್ಯಾರ್ಥಿ ನಾಪತ್ತೆ!

**ನವದೆಹಲಿ:** ಜರ್ಮನಿಯಲ್ಲಿ ಎಂಬಿಎ ವ್ಯಾಸಂಗ ಮಾಡುತ್ತಿದ್ದ 23 ವರ್ಷದ ಭಾರತೀಯ ವಿದ್ಯಾರ್ಥಿಯೊಬ್ಬ ನಾಪತ್ತೆಯಾಗಿರುವ ಘಟನೆ ನಡೆದಿದೆ. ಆತನ ಕುಟುಂಬ ಗುರುವಾರ ಗುರುವಾರ ಹಿಮಾಚಲ ಪ್ರದೇಶ ಮುಖ್ಯಮಂತ್ರಿ ಸುಖವಿಂದರ್ ಸಿಂಗ್ ಸುಖು ಮತ್ತು ಸಚಿವ ರಾಜೇಶ್ ಧರ್ಮಾನಿ ಅವರನ್ನು ಸಂಪರ್ಕಿಸಿದ್ದು, ಸಾಧ್ಯವಿರುವ ಎಲ್ಲ ನೆರವಿಗಾಗಿ ಜರ್ಮನ್ ಸರ್ಕಾರವನ್ನು ಸಂಪರ್ಕಿಸಲು ವಿದೇಶಾಂಗ ಸಚಿವಾಲಯ ಸಂಪರ್ಕಿಸುವಂತೆ ಕೋರಿದೆ. ಬಿಲಾಸ್‌ಪುರ ಜಿಲ್ಲೆಯ ಕಂಡ್ರೂರ್ ಕಸ್ಬಾ ಪ್ರದೇಶದದ ಆರ್ಯನ್, 2024 ರಿಂದ ಜರ್ಮನಿಯ ಮ್ಯೂನಿಚ್‌ನಲ್ಲಿ ಎಂಬಿಎ ವ್ಯಾಸಂಗ ಮಾಡುತ್ತಿದ್ದರು. ಭಾನುವಾರ ರಾತ್ರಿ 10 ಗಂಟೆ ಸುಮಾರಿಗೆ ತನ್ನ ಮಗ ನಾಪತ್ತೆಯಾಗಿದ್ದಾರೆ ಎಂದು ಆರ್ಯನ್ ತಂದೆ ವಿಚಿತ್ರಾ ಸಿಂಗ್ ಚಾಂಡೆಲ್ ತಿಳಿಸಿದ್ದಾರೆ. ಅಂದು ಮಧ್ಯಾಹ್ನ 1.30ರ ಸುಮಾರಿಗೆ ಸರೋವರವೊಂದಕ್ಕೆ ಈಜಲು ಹೋಗಿದ್ದ ಆರ್ಯನ್ ಅಲ್ಲಿ ಮುಳುಗಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಆರ್ಯನ್ ನುರಿತ ಈಜುಗಾರರಾಗಿದ್ದರು ಎಂದು ಜರ್ಮನಿಯಲ್ಲಿರುವ ಅವರ ಪರಿಚಯಸ್ಥರು ಹೇಳಿದ್ದಾರೆ. ಆದರೆ ಅವರು ಮುಳುಗುವ ಸಾಧ್ಯತೆಯನ್ನು ತಳ್ಳಿಹಾಕಲಾಗದು. ಆದರೆ, ಆತನ ಮೃತದೇಹವಾಗಲಿ, ಆತ ಇರುವ ಬಗ್ಗೆ ಯಾವುದೇ ಸುಳಿವು ಸಿಕ್ಕಿಲ್ಲ. ಆರ್ಯನ್ ಏಕೈಕ ಮಗನಾಗಿದ್ದರಿಂದ ನಾಪತ್ತೆ ಸುದ್ದಿ ಬಂದಾಗಿನಿಂದ ನೋವು ಅನುಭವಿಸುತ್ತಿರುವುದಾಗಿ ಪೋಷಕರು ಹೇಳಿಕೊಂಡಿದ್ದಾರೆ. ನಾಲ್ಕು ದಿನಗಳ ಹಿಂದೆ 'ಫಾದರ್ ಡೇ' ದಿನ ಆರ್ಯನ್ ತನ್ನ ಸ್ನೇಹಿತರೊಂದಿಗೆ ಸರೋವರದ ದಡದಲ್ಲಿ ವಾಕ್ ಮಾಡಲು ಹೋದಾಗ ತನಗೆ ಕರೆ ಮಾಡಿದ್ದ ಎಂದು ಚಾಂಡೆಲ್ ಹೇಳಿದ್ದಾರೆ.ಅಂದು ತನ್ನ ಚಿಕ್ಕಪ್ಪನಿಗೂ ಫೋನ್ ಮಾಡಿ ವಿಶ್ ಮಾಡಿದ್ರು. ಈ ಕುರಿತು ಅಧಿಕೃತ ವಕ್ತಾರರನ್ನು ಸಂಪರ್ಕಿಸಿದಾಗ, ನಾಪತ್ತೆಯಾದ ವಿದ್ಯಾರ್ಥಿಯ ಪತ್ತೆಗೆ ಪ್ರಯತ್ನಗಳು ನಡೆಯುತ್ತಿವೆ. ಈ ನಿಟ್ಟಿನಲ್ಲಿ ವಿದೇಶಾಂಗ ಸಚಿವಾಲಯದ ಸಹಾಯವನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಹೇಳಿದರು.

## ವಿದ್ಯುತ್ ಉತ್ಪಾದನೆಯಲ್ಲಿ ವಿಶ್ವದಲ್ಲೇ ಭಾರತಕ್ಕೆ 3ನೇ ಸ್ಥಾನ

**ನವದೆಹಲಿ:** ಅಂತರರಾಷ್ಟ್ರೀಯ ಇಂಧನ ಸಂಸ್ಥೆ ಇತ್ತೀಚಿನ ವರದಿಯ ಪ್ರಕಾರ, ಕಳೆದ ಐದು ವರ್ಷಗಳಲ್ಲಿ ಚೀನಾ ಮತ್ತು ಯುನೈಟೆಡ್ ಸ್ಟೇಟ್ಸ್ ನಂತರ ಭಾರತವು ವಿದ್ಯುತ್ ಉತ್ಪಾದನಾ ಸಾಮರ್ಥ್ಯದ ವಿಷಯದಲ್ಲಿ ವಿಶ್ವದ ಮೂರನೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರಾಷ್ಟ್ರವಾಗಿ ಹೊರಹೊಮ್ಮಿದೆ.



ಶೀಘ್ರ ನಗರ ವಿಸ್ತರಣೆ, ಹವಾನಿಯಂತ್ರಣಗಳು ಮತ್ತು ಗೃಹೋಪಯೋಗಿ ಉಪಕರಣಗಳ ಹೆಚ್ಚಿದ ಬಳಕೆ ಮತ್ತು ಕೈಗಾರಿಕೆಗಳಿಂದ ಹೆಚ್ಚಿನ ಇಂಧನ ಅಗತ್ಯಗಳಿಂದಾಗಿ ಭಾರತದಾದ್ಯಂತ ವಿದ್ಯುತ್ ಬೇಡಿಕೆಯಲ್ಲಿನ ಏರಿಕೆಯನ್ನು ವರದಿಯು ಎತ್ತಿ ತೋರಿಸಿದೆ. ಈ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು, ನವೀಕರಿಸಬಹುದಾದ ಸೇರಿದಂತೆ ದೇಶದ ಎಲ್ಲಾ ಇಂಧನ ಮೂಲಗಳಲ್ಲಿ ವಿದ್ಯುತ್ ಉತ್ಪಾದನೆ ವಿಸ್ತರಿಸಿದೆ. ಈ ವಿಸ್ತರಣೆಗೆ ಪ್ರಮುಖ ಕೊಡುಗೆ ನೀಡಿರುವುದು ಭಾರತದ ಮಹತ್ವಾಕಾಂಕ್ಷೆಯ ಶುದ್ಧ ಇಂಧನ ಕಾರ್ಯಸೂಚಿಯಾಗಿದೆ. ನವೀಕರಿಸಬಹುದಾದ ಇಂಧನದಲ್ಲಿ, ವಿಶೇಷವಾಗಿ ಸೌರ ದ್ಯುತಿವಿದ್ಯುಜ್ಜನಕ ಯೋಜನೆಗಳಲ್ಲಿ ಹೂಡಿಕೆಗಳಲ್ಲಿ ವಿಶೇಷವಾಗಿ ಬಲವಾದ ಏರಿಕೆಯನ್ನು IEA ಗಮನಿಸಿದೆ. ಕಳೆದ ಐದು ವರ್ಷಗಳಲ್ಲಿ ಭಾರತದ ಒಟ್ಟು ಪಳೆಯುಳಿಕೆಯೇತರ ಇಂಧನ ಹೂಡಿಕೆಗಳಲ್ಲಿ ಸೌರ PV ಮಾತ್ರ ಅರ್ಧಕ್ಕಿಂತ ಹೆಚ್ಚಿನದನ್ನು ಹೊಂದಿದೆ.

2024 ರಲ್ಲಿ, ದೇಶದ ಒಟ್ಟು ವಿದ್ಯುತ್ ಕ್ಷೇತ್ರದ ಹೂಡಿಕೆಯ ಗಮನಾರ್ಹ 83% ಶುದ್ಧ ಇಂಧನ ಉಪಕ್ರಮಗಳ ಕಡೆಗೆ ನಿರ್ದೇಶಿಸಲಾಗಿದೆ. ಕಳೆದ ವರ್ಷ ಭಾರತವು ಶುದ್ಧ ಇಂಧನ ಯೋಜನೆಗಳಿಗೆ ಅಭಿವೃದ್ಧಿ ಹಣಕಾಸು ಸಂಸ್ಥೆ (ಆಈಖ)ಯಿಂದ ಹಣಕಾಸು ಪಡೆದ ವಿಶ್ವದ ಅತಿದೊಡ್ಡ ದೇಶವಾಗಿ ಹೊರಹೊಮ್ಮಿತು, ಯೋಜನೆ-ನಿರ್ದಿಷ್ಟ ಬೆಂಬಲದಲ್ಲಿ ಸುಮಾರು 2.4 ಬಿಲಿಯನ್ ಪಡೆಯಿತು.

## ಸ್ವಾಮಿ ನಿತ್ಯಾನಂದನ ಕೈಲಾಸ ಸ್ಥಳ ಕೊನೆಗೂ ಬಹಿರಂಗ

**ಮಧುರೈ:** ತಿರುವಣ್ಣಮಲೈ ಮಠದಿಂದ ಸ್ವಾಮಿ ನಿತ್ಯಾನಂದನ ನಿಷೇಧಕ್ಕೆ ಸಂಬಂಧಿಸಿದ ಮೇಲ್ಮನವಿ ವಿಚಾರಣೆಯ ಸಂದರ್ಭದಲ್ಲಿ ಮದ್ರಾಸ್ ಹೈಕೋರ್ಟ್‌ನ ಮಧುರೈ ಪೀಠ ಇಂದು ಸ್ವಯಂ ಘೋಷಿತ ದೇವಮಾನವ ನಿತ್ಯಾನಂದ (ಓಣಥಿಚಿಟಿಚಿಟಿಜಚಿ) ಎಲ್ಲಿದ್ದಾರೆ ಎಂಬುದರ ಕುರಿತು ಅಚ್ಚರಿಯ ಮಾಹಿತಿಯನ್ನು ಬಹಿರಂಗಪಡಿಸಿದೆ. ಅತ್ಯಾಚಾರ ಆರೋಪದ ಮೇಲೆ ಭಾರತದಿಂದ ಪರಾರಿಯಾಗಿದ್ದ ಆಧ್ಯಾತ್ಮಿಕ ನಾಯಕ ನಿತ್ಯಾನಂದ ಪ್ರಸ್ತುತ ಆಸ್ಟ್ರೇಲಿಯಾ ಬಳಿಯ ''ಯುಎಸ್‌ಕೆ'' ಎಂಬ ಸ್ವಯಂ ಘೋಷಿತ ರಾಷ್ಟ್ರದಲ್ಲಿ ವಾಸಿಸುತ್ತಿದ್ದಾರೆ ಎಂದು ನ್ಯಾಯಾಲಯಕ್ಕೆ ತಿಳಿಸಲಾಗಿದೆ. ಇದುವರೆಗೂ ಕೈಲಾಸ ಎಲ್ಲಿದೆ ಎಂಬುದರ ಬಗ್ಗೆ ಭಾರೀ ಚರ್ಚೆ ನಡೆಯುತ್ತಿತ್ತು. ''ಕೈಲಾಸ'' ರಾಷ್ಟ್ರದ ಸ್ಥಳದ ಕುರಿತು ನ್ಯಾಯಾಲಯವು ಸ್ವಾಮಿ ನಿತ್ಯಾನಂದನ ಅನುಯಾಯಿಗಳನ್ನು ಕೆಣಕಿತು. ಅಧಿನಾಮ ಮಠದಿಂದ ಅವರನ್ನು ನಿಷೇಧಿಸುವ ಏಕ-ನ್ಯಾಯಾಧೀಶರ ಆದೇಶದ ವಿರುದ್ಧದ ಮೇಲ್ಮನವಿಯ ವಿಚಾರಣೆಯ ಸಮಯದಲ್ಲಿ ನ್ಯಾಯಮೂರ್ತಿಗಳಾದ ಎಸ್. ಎಂ ಸುಬ್ರಮಣ್ಯಂ ಮತ್ತು ಮಾರಿಯಾ ಕ್ಲೆಟ್ ಅವರನ್ನೊಳಗೊಂಡ ವಿಭಾಗೀಯ ಪೀಠವು ನಿತ್ಯಾನಂದನ ಭೌತಿಕ ಸ್ಥಳದ ಬಗ್ಗೆ ತೀಕ್ಷ್ಣವಾದ ಪ್ರಶ್ನೆಗಳನ್ನು ಎತ್ತಿತು. ''ಅರ್ಜಿದಾರರು ಎಲ್ಲಿದ್ದಾರೆ ಈ ಕೈಲಾಸ ಎಲ್ಲಿದೆ'' ಎಂದು ನ್ಯಾಯಾಧೀಶರು ಕೇಳಿದಾಗ, ನಿತ್ಯಾನಂದನ ಶಿಷ್ಯ ಅರಚನ ತಿರುಮಲ, ವಿವಾದಾತ್ಮಕ ಗುರು ಆಸ್ಟ್ರೇಲಿಯಾ ಬಳಿ ''ಯುನೈಟೆಡ್ ಸ್ಟೇಟ್ಸ್ ಆಫ್ ಕೈಲಾಸ'' (ಯುಎಸ್‌ಕೆ) ಅನ್ನು ವಿಶ್ವಸಂಸ್ಥೆಯ ಮಾನ್ಯತೆಯೊಂದಿಗೆ ಸ್ಥಾಪಿಸಿದ್ದಾರೆ ಎಂದು ಪ್ರತಿಪಾದಿಸಿದ್ದಾರೆ.ನ್ಯಾಯಾಲಯವು ನಿತ್ಯಾನಂದನ ಅನುಯಾಯಿಗಳಿಗೆ ಹೊಸ ಕಾನೂನು ಪ್ರಾತಿನಿಧ್ಯವನ್ನು ನೇಮಿಸಲು ಅನುಮತಿ ನೀಡಿತು. ಆದರೆ, ಬೇರೆ ಲೋಕದ ಸಾರ್ವಭೌಮತ್ವವನ್ನು ಪ್ರತಿಪಾದಿಸುವ ಅರ್ಜಿದಾರರೊಂದಿಗೆ ವ್ಯವಹರಿಸುವ ನ್ಯಾಯವ್ಯಾಪ್ತಿಯ ಸಂಕೀರ್ಣತೆಗಳ ಬಗ್ಗೆ ಸಂದೇಹ ವ್ಯಕ್ತಪಡಿಸಿತು. ಭಾರತದಲ್ಲಿ ಅವರ ವಿರುದ್ಧ ಅನೇಕ ಕ್ರಿಮಿನಲ್ ಪ್ರಕರಣಗಳ ನಂತರ ನಿತ್ಯಾನಂದ ತನ್ನದೇ ಆದ ರಾಷ್ಟ್ರವನ್ನು ರಚಿಸುವುದಾಗಿ ಮೊದಲು ಘೋಷಿಸಿದ ವರ್ಷಗಳ ನಂತರ ಈ ಬೆಳವಣಿಗೆ ಸಂಭವಿಸಿದೆ.

## ಭಾರತದಿಂದ ಕಾಪಾಡುವಂತೆ ಸೌದಿ ರಾಜಕುಮಾರನಿಗೆ ಕರೆ ಮಾಡಿತ್ತು ಪಾಕ್

**ಇಸ್ಲಾಮಾಬಾದ್:** ಭಾರತ ಪಾಕಿಸ್ತಾನದ ಮೇಲೆ ನಡೆಸಿದ ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತದಿಂದ ತಮ್ಮನ್ನು ಕಾಪಾಡುವಂತೆ ಕೇಳಿ ಪಾಕಿಸ್ತಾನವು ಸೌದಿ ರಾಜಕುಮಾರನಿಗೆ ಕರೆ ಮಾಡಿತ್ತು ಎನ್ನುವ ವಿಚಾರ ಬಹಿರಂಗಗೊಂಡಿದೆ. ಈ ವಿಚಾರವನ್ನು ಸಂದರ್ಶನವೊಂದರಲ್ಲಿ ಪಾಕಿಸ್ತಾನದ ಉಪ ಪ್ರಧಾನಿ ಇಶಾಕ್ ದಾರ್ ಖುದ್ದಾಗಿ ಹೇಳಿದ್ದಾರೆ. ಕದನ ವಿರಾಮ ಒಪ್ಪಂದಕ್ಕೆ ತಾವೇ ಮೊದಲು ಮನವಿ ಮಾಡಿದ್ದು ಎಂಬ ಪಾಕ್ ಗುಟ್ಟು ಹೊರಬಿದ್ದಂತಾಗಿದೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತೀಯ ಕ್ಷಿಪಣಿಗಳು ಪಾಕಿಸ್ತಾನದ ವಾಯುನೆಲೆಗಳನ್ನು ಗುರಿಯಾಗಿಸಿಕೊಂಡಾಗ, ಸೌದಿ ಅರೇಬಿಯಾ ಪಾಕಿಸ್ತಾನದ ಮನವಿ ಮೇರೆಗೆ ಭಾರತದ ಮನವೊಲಿಸಲು ಬಹಳ ಪ್ರಯತ್ನಿಸಿತ್ತು. ಭಾರತವು ನೂರ್ ಖಾನ್ ವಾಯುನೆಲೆ ಮತ್ತು ಶೋರ್ಕೋಟ್ ವಾಯುನೆಲೆ ಮೇಲೆ ದಾಳಿ ಮಾಡುವ ಮೊದಲು ನಾವು ಭಾರತದ ಮೇಲೆ ದಾಳಿ ಮಾಡಲು ಪ್ರಯತ್ನಿಸುತ್ತಿದ್ದೆವು ಎಂದು ಇಶಾಕ್ ದಾರ್ ಒಪ್ಪಿಕೊಂಡಿದ್ದಾರೆ. ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ ಭಾರತವು ಮೇ 7ರ ರಾತ್ರಿ ಪಾಕಿಸ್ತಾನದ ವಿರುದ್ಧ ಆಪರೇಷನ್ ಸಿಂಧೂರ್ ನಡೆಸಿತ್ತು. ಉಗ್ರರ ದಾಳಿಯಲ್ಲಿ 26 ಅಮಾಯಕರು ಪ್ರಾಣ ಕಳೆದುಕೊಂಡಿದ್ದರು. ಸಂದರ್ಶನದಲ್ಲಿ ಇಶಾಕ್ ದಾರ್ ಮಾತನಾಡಿ, ಭಾರತದ ದಾಳಿ ಬಳಿಕ, ಪ್ರಧಾನಿ ಸಶಸ್ತ್ರ ಪಡೆಗಳಿಗೆ ಪ್ರತೀಕಾರ ತೀರಿಸಿಕೊಳ್ಳಲು ಅಧಿಕಾರ ನೀಡಿದರು. ನಾವು ಏನು ಮಾಡಬೇಕೆಂದು ನಿರ್ಧರಿಸಲಾಯಿತು. ನಾವು ನಾಲ್ಕು ಗಂಟೆಗಳ ಬಳಿಕ ದಾಳಿ ಪ್ರಾರಂಭಿಸೆವು. ಆದರೆ ದುರಾದೃಷ್ಟವಶಾತ್, ಭಾರತವು 2.30ಕ್ಕೆ ಮತ್ತೆ ದಾಳಿ ಮಾಡಿತು. ಅದೇ ರಾತ್ರಿ ನೂರ್ ಖಾನ್ ಹಾಗೂ ಶೋರ್ಕೋರ್ಟ್ ವಾಯುನೆಲೆ ಮೇಲೆ ದಾಳಿ ಮಾಡಿದ್ದರು. ಈ ದಾಳಿಯ ಕೇವಲ 45 ನಿಮಿಷಗಳ ನಂತರ, ಸೌದಿ ರಾಜಕುಮಾರ ಫೈಸಲ್ ಬಿನ್ ಸಲ್ಮಾನ್‌ಗೆ ಕರೆ ಮಾಡಿ, ಪಾಕಿಸ್ತಾನ ಯುದ್ಧ ನಿಲ್ಲಿಸಲು ತಯಾರಿದೆ ಎಂದು ಜೈಶಂಕರ್‌ಗೆ ನೀವು ಹೇಳಬಹುದೇ ಎಂದು ಮನವಿ ಮಾಡಲಾಯಿತು. ಭಾರತದೊಂದಿಗಿನ ಉದ್ವಿಗ್ನತೆಯಲ್ಲಿ ಮಧ್ಯಸ್ಥಿಕೆವಹಿಸಲು ಪಾಕಿಸ್ತಾನವು ಅಮೆರಿಕದ ಜತೆಗೆ ಸೌದಿ ಅರೇಬಿಯಾದ ಬಳಿಯೂ ಮನವಿ ಮಾಡಿತ್ತು ಎನ್ನುವ ವಿಚಾರವನ್ನು ಇಶಾಕ್‌ದಾರ್ ಬಿಚ್ಚಿಟ್ಟಿದ್ದಾರೆ.

## ಪುರುಲಿಯಾದಲ್ಲಿ ಲಾರಿ-ಕಾರು ನಡುವೆ ಭೀಕರ ಅಪಘಾತ, 9 ಮಂದಿ ಸಾವು

**ಪುರುಲಿಯಾ:** ಪಶ್ಚಿಮ ಬಂಗಾಳದ ಪುರುಲಿಯಾ ಜಿಲ್ಲೆಯಲ್ಲಿ ಶುಕ್ರವಾರ ನಡೆದ ಭೀಕರ ರಸ್ತೆ ಅಪಘಾತ ದಲ್ಲಿ ಒಂಬತ್ತು ಜನರು ಸಾವನ್ನಪ್ಪಿದ್ದಾರೆ. ಬಲರಾಂಪುರ ಪೊಲೀಸ್ ಠಾಣೆ ಪ್ರದೇಶದ ನಮ್ಶೋಲ್ ಬಳಿಯ ರಾಷ್ಟ್ರೀಯ ಹೆದ್ದಾರಿ 18 ರಲ್ಲಿ ಎಲ್ಲರೂ ಮದುವೆ ಸಮಾರಂಭದಿಂದ ಹಿಂದಿರುಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ.



ನಮ್ಶೋಲ್‌ನಲ್ಲಿ ಬೊಲೆರೊ ವಾಹನವು ವೇಗವಾಗಿ ಬರುತ್ತಿದ್ದ ಲಾರಿಗೆ ಮುಖಾಮುಖಿ ಡಿಕ್ಕಿ ಹೊಡೆದಿದೆ. ಮೃತರು ಪುರುಲಿಯಾದ ಬರಾಬಜಾರ್ ಪೊಲೀಸ್ ಠಾಣೆ ಪ್ರದೇಶದ ಅಡಬಾನಾ ಗ್ರಾಮದಿಂದ ಜಾರ್ಖಂಡ್‌ನ ನಿಮ್ದಿಹ್ ಪೊಲೀಸ್ ಠಾಣೆ ಪ್ರದೇಶದ ತಿಲೈತಾಂಡ್‌ಗೆ ಬೊಲೆರೊ ವಾಹನದಲ್ಲಿ ಪ್ರಯಾಣಿಸುತ್ತಿದ್ದರು. ವಾಹನವು ತೀವ್ರವಾಗಿ ಹಾನಿಗೊಳಗಾಗಿದ್ದು, ಎಲ್ಲಾ ಗಾಯಾಳುಗಳನ್ನು ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಯಿತು. ಆದರೆ, ಎಲ್ಲಾ ಪ್ರಯಾಣಿಕರು ಆಸ್ಪತ್ರೆ ತಲುಪುವಷ್ಟರಲ್ಲಿ ಮೃತಪಟ್ಟಿದ್ದಾರೆ ಎಂದು ವೈದ್ಯರು ಘೋಷಿಸಿದರು.

ಪುಣೆಯಲ್ಲಿ ಅಪಘಾತ, 9 ಮಂದಿ ಸಾವು ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿ ಬುಧವಾರ ಸೆಡಾನ್ ಮತ್ತು ಪಿಕಪ್ ಟ್ರಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಒಂಬತ್ತು ಜನರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಜೆಜುರಿ-ಮೋರ್ಗಾಂವ್ ರಸ್ತೆಯಲ್ಲಿರುವ ಹೋಟೆಲ್ ನ ಹೊರಗೆ ಸಂಜೆ 6.45 ರ ಸುಮಾರಿಗೆ ಈ ಘಟನೆ ನಡೆದಿದೆ. ಮೃತರಲ್ಲಿ ಒಬ್ಬರು ಹೋಟೆಲ್ ಮಾಲೀಕರಾಗಿದ್ದರು. ಅವರು ಮತ್ತು ಅವರ ಸಿಬ್ಬಂದಿ ಪಿಕ್-ಅಪ್ ವಾಹನದಿಂದ ರೆಫ್ರಿಜರೇಟರ್ ಅನ್ನು ಇಳಿಸುತ್ತಿದ್ದಾಗ ಅಪಘಾತ ಸಂಭವಿಸಿದೆ. ಕಾರು ಐದು ಜನರಿಗೆ ಡಿಕ್ಕಿ ಹೊಡೆದಿದ್ದು, ಹೋಟೆಲ್ ಮಾಲೀಕರು, ಪಿಕ್-ಅಪ್ ಚಾಲಕ ಮತ್ತು ಫ್ರಿಡ್ಜ್ ಇಳಿಸಲು ಸಹಾಯ ಮಾಡುತ್ತಿದ್ದ ಮೂವರು, ಆರು ವರ್ಷದ ಬಾಲಕ ಮತ್ತು ಮಹಿಳೆ, ಕಾರಿನಲ್ಲಿದ್ದ ನಾಲ್ವರು ವ್ಯಕ್ತಿಗಳೊಂದಿಗೆ ಈ ಐವರು ಸಾವನ್ನಪ್ಪಿದ್ದಾರೆ.

## ಮಹಾರಾಷ್ಟ್ರ ಶಾಲೆಗಳಲ್ಲಿ 3ನೇ ಭಾಷೆಯಾಗಿ ಹಿಂದಿ ಕಲಿಸಲು ಆದೇಶ; ಮರಾಠಿ ಸಂಘಟನೆ, ಕಾಂಗ್ರೆಸ್ ವಿರೋಧ

**ಮುಂಬೈ:** ಮಹಾಯುತಿ ಸರ್ಕಾರ ಮಂಗಳವಾರ ರಾತ್ರಿ, ರಾಜ್ಯದ ಮರಾಠಿ ಮತ್ತು ಇಂಗ್ಲಿಷ್ ಮಾಧ್ಯಮ ಶಾಲೆಗಳಲ್ಲಿ 1 ರಿಂದ 5ನೇ ತರಗತಿಯವರೆಗೆ ಹಿಂದಿಯನ್ನು ಮೂರನೇ ಐಚ್ಛಿಕ ಮತ್ತು ಕಡ್ಡಾಯ ಭಾಷೆಯಾಗಿ ಕಲಿಸಲು ಸರ್ಕಾರಿ ಆದೇಶ ಹೊರಡಿಸಿದೆ.



ಕೆಲವು ಮರಾಠಿ ಭಾಷಾ ವಕೀಲರು ಸರ್ಕಾರವು ಆರಂಭದಲ್ಲಿ ಹಿಂದೆ ಸರಿದು ಈಗ ಹಿಂಬಾಗಿಲಿನ ಮೂಲಕ ಹಿಂದಿ ನೀತಿಯನ್ನು ಮರುಪರಿಚಯಿಸಿದೆ ಎಂದು ಆರೋಪಿಸಿದರೆ, ವಿರೋಧ ಪಕ್ಷ ಕಾಂಗ್ರೆಸ್, ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರು ಮರಾಠಿಗರ ಎದೆಗೆ ಇರಿಯುವ ಕೆಲಸ ಮಾಡಿದ್ದಾರೆ ಎಂದು ಕಿಡಿ ಕಾರಿದೆ.

ಹಿಂದಿ ಸಾಮಾನ್ಯವಾಗಿ ಮೂರನೇ ಭಾಷೆಯಾಗಿರುತ್ತದೆ ಎಂದು ಆದೇಶದಲ್ಲಿ ಹೇಳಲಾಗಿದೆ. ಆದರೆ ಶಾಲೆಯಲ್ಲಿ ಪ್ರತಿ ತರಗತಿಗೆ 20 ವಿದ್ಯಾರ್ಥಿಗಳು ಹಿಂದಿ ಹೊರತುಪಡಿಸಿ ಇತರೆ ಯಾವುದೇ ಭಾರತೀಯ ಭಾಷೆ ಅಧ್ಯಯನ ಮಾಡುವ ಬಯಕೆ ವ್ಯಕ್ತಪಡಿಸಿದರೆ ಅದನ್ನು ಕಲಿಸುವ ಆಯ್ಕೆಯನ್ನು ನೀಡಿದೆ.

ಆದಾಗ್ಯೂ, ರಾಜ್ಯ ಶಾಲಾ ಶಿಕ್ಷಣ ಇಲಾಖೆ ಹಿಂದಿ ಹೊರತುಪಡಿಸಿ ಮೂರನೇ ಭಾಷೆಗೆ ಶಿಕ್ಷಕರನ್ನು ಒದಗಿಸುವ ಜವಾಬ್ದಾರಿಯಿಂದ ತಪ್ಪಿಸಿಕೊಂಡಿದೆ. 20 ವಿದ್ಯಾರ್ಥಿಗಳು ಫ್ರೆಂಚ್ ಅಥವಾ ಸ್ಪ್ಯಾನಿಷ್ ನಂತಹ ಬೇರೆ ಭಾಷೆಯನ್ನು ಅಧ್ಯಯನ ಮಾಡಲು ತೀವ್ರ ಆಸಕ್ತಿ ತೋರಿಸಿದರೆ, ಆ ನಿರ್ದಿಷ್ಟ ಭಾಷೆಯ ಶಿಕ್ಷಕರನ್ನು ಶಾಲೆಗೆ ಒದಗಿಸುವುದು ಕಡ್ಡಾಯವಲ್ಲ. ಹೀಗಾಗಿ, ಹಿಂದಿ ಹೊರತುಪಡಿಸಿ ಇತರ ಭಾಷೆಗಳನ್ನು ಡಿಜಿಟಲ್ ವೇದಿಕೆಗಳ ಮೂಲಕ ಕಲಿಸಲಾಗುತ್ತದೆ ಎಂದು ತಿಳಿಸಲಾಗಿದೆ. ಇದು ಹಿಂಬಾಗಿಲ ಮೂಲಕ ಹಿಂದಿ ಹೇರಿಕೆಯಲ್ಲದೆ ಬೇರೇನೂ ಅಲ್ಲ ಎಂದು ಮರಾಠಿಪರ ಹೋರಾಟಗಾರ ಮುಂಬೈ ಮೂಲದ ಮರಾಠಿ ಭಾಷಾ ಅಭ್ಯಾಸ ಕೇಂದ್ರದ ದೀಪಕ್ ಪವಾರ್ ಅವರು ಹೇಳಿದ್ದಾರೆ.

ಸರ್ಕಾರವು ಮರಾಠಿ ಜನರಿಗೆ ದ್ರೋಹ ಮಾಡಿದೆ. ನಾವು ಈಗ ಮೌನವಾಗಿದ್ದರೆ, ಅದು ಒಕ್ಕೂಟ ರಚನೆ ಮತ್ತು ಸಂಯುಕ್ತ ಮಹಾರಾಷ್ಟ್ರ ಚಳವಳಿಯ ಪರಂಪರೆಯನ್ನು ಕೆಡವಲು ದಾರಿ ಮಾಡಿಕೊಡುತ್ತದೆ ಎಂದು ಪವಾರ್ ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಆರೋಪಿಸಿದ್ದಾರೆ ಮತ್ತು ಜನ ಇದರ ವಿರುದ್ಧ ಪ್ರತಿಭಟಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಕಲಾನಿಧಿ ಮಾರನ್‌ಗೆ ಲೀಗಲ್ ನೋಟಿಸ್ ಕಳಿಸಿದ ದಯಾನಿಧಿ

**ಚೆನ್ನೈ:** ಡಿಎಂಕೆ ಚೆನ್ನೈ ಸೆಂಟ್ರಲ್ ಸಂಸದ ದಯಾನಿಧಿ ಮಾರನ್ ಅವರು ಸನ್ ಮೀಡಿಯಾ ಸಾಮ್ರಾಜ್ಯವನ್ನು ಹೊಂದಿರುವ ತಮ್ಮ ಸಹೋದರ ಕಲಾನಿಧಿ ಮಾರನ್ ಅವರಿಗೆ ಕಾನೂನು ನೋಟಿಸ್ ಕಳುಹಿಸಿದ್ದಾರೆ.

ತಮ್ಮ ತಂದೆ, ಡಿಎಂಕೆ ನಾಯಕ ಮತ್ತು ಮಾಜಿ ಕೇಂದ್ರ ಸಚಿವ ಮುರಸೋಲಿ ಮಾರನ್ ನಿಧನದ ಸ್ವಲ್ಪ ಮೊದಲು ಮತ್ತು ನಂತರ ಷೇರುಗಳನ್ನು ಮೋಸದಿಂದ ಮತ್ತು ಅಕ್ರಮವಾಗಿ ವರ್ಗಾಯಿಸುವ ಮೂಲಕ ಕಂಪನಿಯನ್ನು ಸ್ವಾಧೀನಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.



ಮುರಸೋಲಿ ಮಾರನ್ ದಿವಂಗತ ಮುಖ್ಯಮಂತ್ರಿ ಎಂ. ಕರುಣಾನಿಧಿ ಅವರ ಸೋದರಳಿಯ ಮತ್ತು ಆಪ್ತ ಸಹಾಯಕರಾಗಿದ್ದರು, ಮಾರನ್ ಅವರನ್ನು ತಮ್ಮ ಆತ್ಮಸಾಕ್ಷಿ ಎಂದು ಕರೆದಿದ್ದರು. ಜೂನ್ 10, 2025 ರಂದು ತಮ್ಮ ವಕೀಲರ ಮೂಲಕ ಕಳುಹಿಸಲಾದ ನೋಟಿಸ್‌ನಲ್ಲಿ, ಸನ್ ಗ್ರೂಪ್‌ನ ಮಾಲೀಕತ್ವದ ಮೂಲಕ ಕಲಾನಿಧಿ ಗಳಿಸಿದ ಸಂಪೂರ್ಣ ಗಳಿಕೆಯು ಅಪರಾಧದ ಆದಾಯ ಎಂದು ದಯಾನಿಧಿ ವಾದಿಸಿದ್ದಾರೆ, ಏಕೆಂದರೆ ಷೇರುಗಳ ವರ್ಗಾವಣೆಯೇ ಕಾನೂನುಬಾಹಿರವಾಗಿದೆ.

ಕಲಾನಿಧಿ, ಅವರ ಪತ್ನಿ ಕಾವೇರಿ ಮಾರನ್ ಮತ್ತು ಕಂಪನಿ ಕಾರ್ಯದರ್ಶಿ ರವಿ ರಾಮಮೂರ್ತಿ ಸೇರಿದಂತೆ ಕಂಪನಿಗಳ ಗುಂಪಿನೊಂದಿಗೆ ನಿಕಟ ಸಂಬಂಧ ಹೊಂದಿರುವ ಇತರ ಆರು ಜನರ ವಿರುದ್ಧ, ವಂಚನೆ, ಪಿತೂರಿ, ಮಾಹಿತಿಯ ಸುಳ್ಳು ಮೂಲಕ ಷೇರು ವಿನಿಮಯ ಕೇಂದ್ರಗಳನ್ನು ದಾರಿತಪ್ಪಿಸುವುದು ಮತ್ತು ಹಣ ವರ್ಗಾವಣೆಯ ಅಪರಾಧಗಳಿಗಾಗಿ ಗಂಭೀರ ವಂಚನೆ ತನಿಖಾ ಕಚೇರಿ, ಭಾರತೀಯ ಭದ್ರತಾ ಮತ್ತು ವಿನಿಮಯ ಮಂಡಳಿ ಮತ್ತು ಜಾರಿ ನಿರ್ದೇಶನಾಲಯ ಸೇರಿದಂತೆ ಸಮರ್ಥ ಅಧಿಕಾರಿಗಳೊಂದಿಗೆ ಕ್ರಿಮಿನಲ್ ದೂರುಗಳನ್ನು ದಾಖಲಿಸುವುದಾಗಿ ಅವರು ಬೆದರಿಕೆ ಹಾಕಿದರು.

2003 ರಲ್ಲಿ ಅವರ ತಂದೆ ನಿಧನರಾದ ನಂತರ, ಮರಣ ಪ್ರಮಾಣಪತ್ರ ಅಥವಾ ಕಾನೂನುಬದ್ಧ ಉತ್ತರಾಧಿಕಾರಿ ಪ್ರಮಾಣಪತ್ರದಂತಹ ಸರಿಯಾದ ಕಾನೂನು ದಾಖಲೆಗಳಿಲ್ಲದೆ ಷೇರುಗಳನ್ನು ಅವರ ತಾಯಿ ಮಲ್ಲಿಕಾ ಮಾರನ್ ಅವರಿಗೆ ವರ್ಗಾಯಿಸಲಾಗಿದೆ ಎಂದು ನೋಟಿಸ್ ನಲ್ಲಿ ಆರೋಪಿಸಿದೆ, ಇವುಗಳನ್ನು ಕೆಲವು ದಿನಗಳು ಅಥವಾ ತಿಂಗಳುಗಳ ನಂತರ ನೀಡಲಾಯಿತು. ನಂತರ ಕಲಾನಿಧಿ ಮಾರನ್ ಅವರಿಗೆ ಷೇರುಗಳನ್ನು ವರ್ಗಾಯಿಸಲು ಸಹಾಯ ಮಾಡಲು ಈ ವರ್ಗಾವಣೆಯನ್ನು ಮಾಡಲಾಗಿದೆ ಎಂದು ಆರೋಪಿಸಲಾಗಿದೆ. 2003 ಸೆಪ್ಟೆಂಬರ್ 15ರಂದು ಕಲಾನಿಧಿ ಅವರು ತಲಾ 10 ರೂ.ಗಳಂತೆ 12 ಲಕ್ಷ ಈಕ್ವಿಟಿ ಷೇರುಗಳನ್ನು ತಮಗೆ ಹಂಚಿಕೆ ಮಾಡಿಕೊಂಡಿದ್ದಾರೆ ಎಂದು ನೋಟಿಸ್ ಆರೋಪಿಸಿದೆ, ಇದು ಕ್ರಿಮಿನಲ್ ನಂಬಿಕೆ ದ್ರೋಹ ಮತ್ತು ವಂಚನೆಯ ಕಾನೂನುಬಾಹಿರ ಕೃತ್ಯ. ಆಗ ಷೇರುಗಳ ಮೌಲ್ಯವು ನೋಟಿಸ್ ಪ್ರಕಾರ 2,500 ರಿಂದ 3,000 ರೂ.ಗಳ ನಡುವೆ ಇತ್ತು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಶೈನ್-ಅಂಕಿತಾ ಸಿನಿಮಾಗೆ ನಟ ದೇವರಾಜ್ ಎಂಟ್ರಿ



ಅಜನೀಶ್ ಲೋಕನಾಥ್ ಜೊತೆ ಸೇರಿ ಸಿ.ಆರ್.ಬಾಬಿ ನಿರ್ಮಿಸಿ, ನಿರ್ದೇಶನ ಮಾಡಿರುವ, ಬಿಗ್‌ಬಾಸ್ ಖ್ಯಾತಿಯ ಶೈನ್ ಶೆಟ್ಟಿ ಹಾಗೂ ಅಂಕಿತ ಅಮರ್ ನಾಯಕ-ನಾಯಕಿಯಾಗಿ ನಟಿಸಿರುವ ಬಹುನಿರೀಕ್ಷಿತ ''ಜಸ್ಟ್ ಮ್ಯಾರೀಡ್'' ಚಿತ್ರ ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿದೆ.

ಕನ್ನಡ ಚಿತ್ರರಂಗದ ಸಾಕಷ್ಟು ಅನುಭವಿ ಹಾಗೂ ಹಿರಿಯ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ಆ ಪೈಕಿ ತಮ್ಮ ಅಮೋಘ ಅಭಿನಯದಿಂದ ಅಭಿಮಾನಿಗಳ ಮನಗೆದ್ದಿರುವ ಡೈನಾಮಿಕ್ ಸ್ಟಾರ್ ದೇವರಾಜ್ ಅವರು ಸಹ ಈ ಚಿತ್ರದ ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ.

ದೇವರಾಜ್ ಅವರು ನಿವೃತ್ತ ನ್ಯಾಯಾಧೀಶರ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಪೂರ್ಣಚಂದ್ರ ಇವರ ಪಾತ್ರದ ಹೆಸರು. ''ಕರ್ತವ್ಯದಲ್ಲಿ ನ್ಯಾಯಾಧೀಶ, ಸ್ವಭಾವದಲ್ಲಿ ರಕ್ಷಕ ನ್ಯಾಯಾಲಯದಲ್ಲಾದರೂ ಮನೆಯಲ್ಲಾದರೂ ಕಾನೂನು ಸದಾ ಪಾಲನೆ ಆಗುತ್ತದೆ. ನ್ಯಾಯವು ಕೇವಲ ಉದ್ಯೋಗವಲ್ಲ, ಅದು ಬದುಕಿನ ಶೈಲಿ'' ಎಂಬ ವಾಕ್ಯಗಳೊಂದಿಗೆ ದೇವರಾಜ್ ಅವರ ಪಾತ್ರವನ್ನು ಪರಿಚಯಿಸುವ ಪೋಸ್ಟರ್ ಅನ್ನು ಚಿತ್ರತಂಡ ಬಿಡುಗಡೆ ಮಾಡಿದೆ. ''ಜಸ್ಟ್ ಮ್ಯಾರೀಡ್'' ಪ್ರೇಮಕಥೆಯ ಚಿತ್ರವಾಗಿದ್ದರೂ, ಪ್ರೇಕ್ಷಕರಿಗೆ ಬೇಕಾದ ಎಲ್ಲಾ ಅಂಶಗಳು ಹೊಂದಿದೆ. ಸಿ.ಆರ್ ಬಾಬಿ ಅವರೆ ಕಥೆ ಬರೆದಿದ್ದು, ಚಿತ್ರಕಥೆ ಸಿ.ಆರ್ ಬಾಬಿ ಹಾಗೂ ಧನಂಜಯ್ ರಂಜನ್ ಅವರದು. ರಘು ನಿಡುವಳ್ಳಿ ಈ ಚಿತ್ರದ ಸಂಭಾಷಣೆಕಾರರು.

ಅಜನೀಶ್ ಲೋಕನಾಥ್ ಅವರ ಸಂಗೀತ ನಿರ್ದೇಶನ, ಪಿಜಿ ಅವರ ಛಾಯಾಗ್ರಹಣ, ಶ್ರೀಕಾಂತ್ ಮತ್ತು ಪ್ರತೀಕ್ ಅವರ ಸಂಕಲನ., ಅಮರ್ ಅವರ ಕಲಾ ನಿರ್ದೇಶನ, ವಿಕ್ರಮ್ ಮೋರ್ ಅವರ ಸಾಹಸ ನಿರ್ದೇಶನ ಹಾಗೂ ಬಾಬಾ ಭಾಸ್ಕರ್, ಶಾಂತಿ ಅರವಿಂದ್ ಅವರ ನೃತ್ಯ ನಿರ್ದೇಶನವಿರುವ ''ಜಸ್ಟ್ ಮ್ಯಾರಿಡ್'' ಚಿತ್ರದ ಹಾಡುಗಳನ್ನು ಕೆ.ಕಲ್ಯಾಣ್, ಡಾ.ವಿ ನಾಗೇಂದ್ರ ಪ್ರಸಾದ್, ಪ್ರಮೋದ್ ಮರವಂತೆ, ನಾಗರ್ಜುನ ಶರ್ಮ ಮತ್ತು ಧನಂಜಯ್ ರಂಜನ್ ಬರೆದಿದ್ದಾರೆ.

# 'ಲಕ್ಷ್ಮೀ ನಿವಾಸ'ದಿಂದ ಹೊರನಡೆದ ಶ್ವೇತಾ





ಕನ್ನಡದ ಹೆಸರಾಂತ ಲಕ್ಷ್ಮೀ ನಿವಾಸ ಧಾರಾವಾಹಿಯಿಂದ ನಟಿ ಶ್ವೇತಾ ಹೊರನಡೆದಿದ್ದಾರೆ. ಲಕ್ಷ್ಮಿ ಪಾತ್ರದಲ್ಲಿ ಕಾಣಿಸ್ಕೊಂಡಿದ್ದ ಶ್ವೇತಾ ಧಾರಾವಾಹಿಗೆ ಕಳೆ ತಂದಿದ್ದರು. ಕಳೆದ ಒಂದು ತಿಂಗಳಿಂದ ಪ್ರಸಾರವಾಗುತ್ತಿದ್ದ ಸಂಚಿಕೆಗಳಲ್ಲೂ ಶ್ವೇತಾ ಕಾಣಿಸಿಕೊಂಡಿರಲಿಲ್ಲ. ಇದೀಗ ಅಭಿಮಾನಿಗಳಿಗೆ ನಿರಾಸೆ ಮೂಡಿಸಿದ್ದಾರೆ. ಧಾರಾವಾಹಿ ತಂಡ ಘೋಷಿಸುವ ಮೊದಲೇ ಲಕ್ಷ್ಮೀ ನಿವಾಸದಿಂದ ಹೊರಬಂದ ವಿಚಾರ ಅವರೇ ಇನ್‌ಸ್ಟಾದಲ್ಲಿ ಹಂಚಿಕೊಂಡಿದ್ದಾರೆ.

ಸುಮಾರು 1 ವರ್ಷದಿಂದ ಲಕ್ಷ್ಮೀ ನಿವಾಸ ಧಾರಾವಾಹಿ ಜೀ ಕನ್ನಡ ವಾಹಿನಿಯಲ್ಲಿ ಪ್ರಸಾರವಾಗುತ್ತಿತ್ತು. ಒಂದು ಗಂಟೆಗಳ ಕಾಲ ಪ್ರಸಾರವಾಗುತ್ತಿದ್ದ ಸುದೀರ್ಘ ಧಾರಾವಾಹಿ ಇದಾಗಿದ್ದು ಬಹಳ ವರ್ಷಗಳ ಬಳಿಕ ಶ್ವೇತಾ ಕನ್ನಡಕ್ಕೆ ವಾಪಸ್ಸಾಗಿದ್ರು.

ಚೆನ್ನೈನಲ್ಲಿ ಕುಟುಂಬದೊಂದಿಗೆ ವಾಸವಿರುದ ಶ್ವೇತಾ ಶೂಟಿಂಗ್ ಇದ್ದಾಗ ಮಾತ್ರ ಬೆಂಗಳೂರಿಗೆ ಬರುತ್ತಿದ್ದರು. ಇದೀಗ ತಾಯಿಯ ಅನಾರೋಗ್ಯದ ಕಾರಣ ಕೊಟ್ಟು ಧಾರಾವಾಹಿಯಿಂದ ಹೊರಬಂದಿರೋದಾಗಿ ಹೇಳಿಕೊಂಡಿದ್ದಾರೆ.

ಚೈತ್ರದ ಪ್ರೇಮಾಂಜಲಿ ಚಿತ್ರದ ಮೂಲಕ ಕನ್ನಡಿಗರಿಗೆ ಪರಿಚಿತವಾದ ತಮಿಳಿನ ವಿನೋದಿನಿ ಕನ್ನಡದಲ್ಲಿ ಶ್ವೇತಾ ಹೆಸರಿನಲ್ಲಿ ಜನಪ್ರಿಯತೆ ಗಳಿಸಿದ್ದಾರೆ. ಮೂಲ ತಮಿಳುನಾಡಿನವರಾಗಿದ್ದರೂ ಕನ್ನಡ ಸಿನಿಮಾಗಳಲ್ಲಿ ನಟಿಸಿ ಕನ್ನಡಿಗರ ಪ್ರೀತಿ ಗಳಿಸಿದವರು ಶ್ವೇತಾ. ಗೆಜ್ಜೆನಾದ, ಲಕ್ಷ್ಮಿ ಮಹಾಲಕ್ಷ್ಮಿ, ಕರ್ಪೂರದ ಗೊಂಬೆ ಸೇರಿ ಹಲವು ಸಿನಿಮಾಗಳಲ್ಲಿ ಇವರ ಅಭಿನಯ ಮರೆಯುವಂತಿಲ್ಲ.

ಬಹು ವರ್ಷಗಳ ಬಳಿಕ ಲಕ್ಷ್ಮೀ ನಿವಾಸ ಧಾರಾವಾಹಿಯಲ್ಲಿ ಲೀಡ್‌ರೋಲ್‌ನಲ್ಲಿ ಅಭಿನಯಿಸೋ ಮೂಲಕ ಕಮ್‌ಬ್ಯಾಕ್ ಆಗಿದ್ದರು. ಇದೀಗ ವೈಯಕ್ತಿಕ ಕಾರಣ ಹೇಳಿ ಬ್ರೇಕ್ ತೆಗೆದುಕೊಂಡಿದ್ದಾಗಿ ಹೇಳಿಕೊಂಡಿದ್ದಾರೆ. ಮತ್ತೆ ಮರಳುತ್ತಾರಾ? ಅಲ್ಲಿಯವರೆಗೂ ಧಾರಾವಾಹಿಯಲ್ಲಿ ಲಕ್ಷ್ಮಿ ಪಾತ್ರವನ್ನ ಹೊರಗಿಟ್ಟು ಚಿತ್ರೀಕರಣ ಮಾಡಲಾಗುತ್ತಾ? ಶ್ವೇತಾ ಪಾತ್ರವನ್ನ ಬೇರೆಯವರು ರಿಪ್ಲೇಸ್ ಮಾಡೋದಾಗಿದ್ರೆ, ಯಾರು ಮಾಡಲಿದ್ದಾರೆ? ಅನ್ನೋದು ಸಸ್ಪೆನ್ಸ್ ಆಗಿ ಉಳಿದಿದೆ.

## ಶ್ವೇತಾ ಹೇಳಿದ್ದೇನು ?

**ವೈಯಕ್ತಿಕ ಕಾರಣ ಹಾಗೂ ತಾಯಿಯ ಅನಾರೋಗ್ಯದಿಂದಾಗಿ ಲಕ್ಷ್ಮೀ ನಿವಾಸ ಧಾರಾವಾಹಿಯಿಂದ ಬ್ರೇಕ್ ತೆಗೆದುಕೊಂಡಿದ್ದೇನೆ. ನನ್ನನ್ನು ಪ್ರೀತಿಯಿಂದ ಒಪ್ಪಿಕೊಂಡಿದ್ದಕ್ಕಾಗಿ ಕರ್ನಾಟಕ ಜನತೆಗೆ ಧನ್ಯವಾದ ಅರ್ಪಿಸುತ್ತೇನೆ. ಧಾರಾವಾಹಿ ಸೆಟ್‌ನಲ್ಲಿ ಹಲವರನ್ನು ತುಂಬಾ ಮಿಸ್ ಮಾಡಿಕೊಳ್ಳುತ್ತೇನೆ. ಅದ್ಭುತ ಪ್ರೀತಿ ಕೊಡುವ ಕನ್ನಡಿಗರಿಗೆ ನನ್ನನ್ನು ರೀ ಎಂಟ್ರಿ ಮಾಡಿಸಿರೋದಕ್ಕೆ ಜೀ ಕನ್ನಡ ವಾಹಿನಿ ಧನ್ಯವಾದ ಹೇಳುತ್ತೇನೆ. ಮತ್ತೆ ಸಿಗುತ್ತೇನೆ.**

# ದೇವರೇ ಎದುರು ಬಂದೂ ನಾನು ಕ್ಷಮೇ ಕೇಳಲ್ಲ



ರಚಿತಾ ರಾಮ್ ಅವರು ಸದ್ಯ ಸುದ್ದಿಯಲ್ಲಿದ್ದಾರೆ. 'ಸಂಜು ವೆಡ್ಸ್ ಗೀತಾ 2' ಪ್ರಚಾರಕ್ಕೆ ಅವರು ಬಂದಿಲ್ಲ ಎನ್ನುವ ಆರೋಪವನ್ನು ತಂಡ ಮಾಡಿತ್ತು. ಈ ವಿಚಾರಕ್ಕೆ ಸಂಬಂಧಿಸಿದಂತೆ ಚಿತ್ರದ ನಿರ್ದೇಶಕ ನಾಗಶೇಖರ್ ಅವರು ಫಿಲ್ಮ್ ಚೇಂಬರ್?ಗೆ ದೂರು ನೀಡಿದ್ದಾರೆ. ಈ ವಿಚಾರದಲ್ಲಿ ಇಷ್ಟು ದಿನ ಮೌನವಾಗಿದ್ದ ರಚಿತಾ ರಾಮ್ ಅವರು ಇದೇ ಮೊದಲ ಬಾರಿ ಮಾತನಾಡಿದ್ದಾರೆ. ಈ ಪ್ರಕರಣದ ಪ್ರತಿ ವಿಚಾರವನ್ನೂ ತೆರೆದಿಟ್ಟಿದ್ದಾರೆ.

'ಸಂಜು ವೆಡ್ಸ್ ಗೀತಾ 2' ಚಿತ್ರ ಜನವರಿಯಲ್ಲಿ ರಿಲೀಸ್ ಆಯಿತು. ಇದಾದ ಬಳಿಕ ಸಿನಿಮಾನ ಇತ್ತೀಚೆಗೆ ಮತ್ತೊಮ್ಮೆ ರೀ-ರೀಲಿಸ್ ಮಾಡಲಾಯಿತು. ಈ ವೇಳೆ ತಂಡದವರು ಪ್ರಚಾರ ಮಾಡಿದರು. ಆದರೆ, ರಚಿತಾ ಎಲ್ಲಿಯೂ ಕಾಣಿಸಿಕೊಂಡಿಲ್ಲ. ರಚಿತಾ ಕರೆಗಳಿಗೆ ಪ್ರತಿಕ್ರಿಯಿಸುತ್ತಿಲ್ಲ ಎಂದು ನಾಗೇಶಖರ್ ದೂರಿದರು. ಈ ಎಲ್ಲಾ ವಿಚಾರಗಳಿಗೆ ರಚಿತಾ ಸ್ಪಷ್ಟನೆ ನೀಡಿದ್ದಾರೆ.

ಈ ಮೊದಲು 'ಸಂಜು ವೆಡ್ಸ್ ಗೀತಾ 2' ಶೂಟ್ ವೇಳೆ ಮತ್ತೊಂದು ಚಿತ್ರದ ಪ್ರಚಾರವನ್ನು ಮಾಡಲು ನಿರ್ದೇಶಕ ನಾಗಶೇಖರ್ ಅವಕಾಶ ನೀಡಿರಲಿಲ್ಲವಂತೆ. ಈಗ ರಚಿತಾ ಅವರು ಬೇರೆ ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಇದ್ದರು. ಹೀಗಾಗಿ, ಈ ಚಿತ್ರದ ಪ್ರಚಾರಕ್ಕೆ ಬರೋಕಾಗಿಲ್ಲ. ಅವರು ಮಾಡಿದ್ದನ್ನೇ ನಾನು ಮಾಡಿದ್ದೇನೆ ಎಂದು ರಚಿತಾ ಹೇಳಿದ್ದಾರೆ.

ಇನ್ನು ಸೋಶಿಯಲ್ ಮೀಡಿಯಾ ಮೂಲಕ ರಚಿತಾ ಅವರು 'ಸಂಜು ವೆಡ್ಸ್ ಗೀತಾ 2' ಚಿತ್ರವನ್ನು ಪ್ರಚಾರ ಮಾಡುತ್ತಲೇ ಇದ್ದರು. ಹೀಗಾಗಿ ರಚಿತಾಗೆ ತಾವು ತಪ್ಪು ಮಾಡಿದ್ದೇನೆ ಎಂದು ಅನಿಸಿಲ್ಲ. 'ನಾನು ತಪ್ಪು ಮಾಡಿದ್ದೇನೆ ಎಂದು ಅನಿಸುತ್ತಿಲ್ಲ. ತಪ್ಪು ಮಾಡಿದ್ದೇನೆ ಎಂದರೆ ಚಿಕ್ಕ ಮಕ್ಕಳ ಕಾಲಿಗೆ ಬೇಕಿದ್ದರೂ ಬೀಳುತ್ತೇನೆ. ತಪ್ಪು ಮಾಡಿಲ್ಲ ಎಂದರೆ ದೇವರೇ ಎದುರು ಬಂದರೂ ಕ್ಷಮೆ ಕೇಳಲ್ಲ. ನನ್ನಿಂದ ನನ್ನ ಅಭಿಮಾನಿಗಳಿಗೆ ಬೇಸರ ಆಗಿದ್ದರೆ ನಾನು ಕ್ಷಮೆ ಕೇಳುತ್ತೇನೆ. ಬೇರೆ ಯಾರಿಗೂ ನಾನು ಕ್ಷಮೆ ಕೇಳಲ್ಲ. ಲವ್? ಯೂ ಆಲ್' ಎಂದಿದ್ದಾರೆ ಅವರು. ರಚಿತಾ ಪ್ರತಿಕ್ರಿಯೆಗೆ ತಂಡ ಯಾವ ರೀತಿಯಲ್ಲಿ ಉತ್ತರಿಸುತ್ತದೆ ಎಂಬುದನ್ನು ನೋಡಬೇಕಿದೆ.

# ಗಿಟಾರ್‌ಗಿಂತ ಮುಂಚೆ ಮತ್ತೊಂದು ಚಿತ್ರ ನಿರ್ದೇಶಿಸಲಿದ್ದಾರೆ ಹಂಸಲೇಖ



ಸ್ಯಾಂಡಲ್‌ವುಡ್‌ನ ಹೆಸರಾಂತ ಸಂಗೀತ ನಿರ್ದೇಶಕ ಹಂಸಲೇಖ ಅವರು ಗಿಟಾರ್ ಸಿನಿಮಾವನ್ನು ನಿರ್ದೇಶನ ಮಾಡುವುದಾಗಿ ಈ ಹಿಂದೆ ಘೋಷಿಸಿದ್ದರು. ಅದೊಂದು ಪ್ಯಾನ್‌ವರ್ಲ್ಡ್ ಸಿನಿಮಾ ಆಗಲಿದೆ ಅಂತಾನೂ ಹೇಳಿದ್ದರು. ಈಗ ಆ ಸಿನಿಮಾಗಿಂತ ಮುಂಚೆ ಮತ್ತೊಂದು ಸಿನಿಮಾ ಘೋಷಿಸಲಿದ್ದಾರೆ. ಅವರ ಹುಟ್ಟುಹಬ್ಬದಂದು ಹೊಸ ಚಿತ್ರಕ್ಕೆ ಚಾಲನೆ ಸಿಗಲಿದೆ.

ತಮ್ಮ ಚೊಚ್ಚಲ ನಿರ್ದೇಶನದ ಚಿತ್ರಕ್ಕೆ 'ಓಕೆ' ಎಂದು ಹೆಸರಿಟ್ಟಿದ್ದಾರೆ ಹಂಸಲೇಖ. ಜೂ.23ರಂದು ಹಂಸಲೇಖ ಅವರ ಹುಟ್ಟುಹಬ್ಬವಿದ್ದು. ಅಂದು ಈ ಚಿತ್ರದ ಚಿತ್ರೀಕರಣದ ಕಾಯಕಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಚಾಲನೆ ನೀಡಲಿದ್ದಾರೆ. ವಿ.ರವಿಚಂದ್ರನ್, ಬಿಎನ್ ಗಂಗಾಧರ್ ಮತ್ತು ಲತಾ ಹಂಸಲೇಖ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನ ಕೂಡ ಮಾಡಲಾಗುತ್ತಿದೆ.

ಆಕಾಂಕ್ಷ ಪ್ರೊಡಕ್ಷನ್ ಮತ್ತು ಐದನಿ ಎಂಟರ್ಟೈನಮೆಂಟ್ ಲಾಂಛನದಲ್ಲಿ ಈ ಚಿತ್ರ ಮೂಡಿಬರಲಿದ್ದು, ನಾಗೇಶ್ ವಾಷ್ಟರ್ ಮತ್ತು ಸೂರ್ಯಪ್ರಕಾಶ್ ಈ ಚಿತ್ರದ ನಿರ್ಮಾಪಕರು. ಹೆಚ್ಚಿನ ಮಾಹಿತಿಯನ್ನು ತಮ್ಮ ಹುಟ್ಟುಹಬ್ಬದಂದೇ ಹಂಸಲೇಖ ಅವರು ಹಂಚಿಕೊಳ್ಳಲಿದ್ದಾರೆ.

# ಯಶ್ ತಾಯಿ ನಿರ್ಮಾಣದ ಕೊತ್ತಲವಾಡಿ ರಿಲೀಸ್ ಡೇಟ್ ಫಿಕ್ಸ್



ಭಾರತೀಯ ಚಿತ್ರರಂಗವನ್ನು ಕನ್ನಡದತ್ತ ತಿರುಗಿ ನೋಡುವಂತೆ ಮಾಡಿರುವವ ಪೈಕಿ ನಟ ರಾಕಿಂಗ್ ಸ್ಟಾರ್ ಯಶ್ ಕೂಡ ಒಬ್ಬರು. ಅವರ ತಾಯಿ ಪುಷ್ಪ ಅರುಣ್ ಕುಮಾರ್ ತಮ್ಮದೇ ಪಿಎ ಪ್ರೊಡಕ್ಷನ್ಸ್ ಸ್ಥಾಪಿಸಿ, ಈ ನಿರ್ಮಾಣ ಸಂಸ್ಥೆಯಡಿ ಕೊತ್ತಲವಾಡಿ ಎಂಬ ಚೊಚ್ಚಲ ಚಿತ್ರ ನಿರ್ಮಿಸಿದ್ದಾರೆ. ಇದೀಗ ಈ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆ ಮಾಡಲಾಗಿದೆ.

ಆಗಸ್ಟ್ 1ಕ್ಕೆ ಯಶ್ ತಾಯಿ ಪುಷ್ಪ ಅವರು ನಿರ್ಮಿಸಿರುವ ಚೊಚ್ಚಲ ಚಿತ್ರ ಕೊತ್ತಲವಾಡಿ ಥಿಯೇಟರ್‌ಗೆ ಎಂಟ್ರಿ ಕೊಡಲಿದೆ. ಯುವ ಪ್ರತಿಭೆ ಶ್ರೀರಾಜ್ ಅವರ ನಿರ್ದೇಶನ ಮೊದಲ ಚಿತ್ರ ಇದಾಗಿದ್ದು, ಪೃಥ್ವಿ ಅಂಬರ್ ನಾಯಕನಾಗಿ ಹಾಗೂ ಕಿರುತೆರೆ ನಟಿ ಕಾವ್ಯಾ ಶೈವ ನಾಯಕಿಯಾಗಿ ನಟಿಸುತ್ತಿದ್ದಾರೆ.

ಗೋಪಾಲಕೃಷ್ಣ ದೇಶಪಾಂಡೆ, ರಾಜೇಶ್ ನಟರಂಗ ಅವರಂತಹ ಅನುಭವಿ ತಾರಾಬಳಗ ಚಿತ್ರದಲ್ಲಿದೆ. ಇಲ್ಲಿಯವರೆಗೂ ಲವ್ವರ್ ಬಾಯ್ ಆಗಿ ಕಾಣಿಸಿಕೊಳ್ಳುತ್ತಿದ್ದ ಪೃಥ್ವಿ 'ಕೊತ್ತಲವಾಡಿ' ಚಿತ್ರದಲ್ಲಿ ಕಂಪ್ಲೀಟ್ ಮಾಸ್ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಈಗಾಗಲೇ ಕೊತ್ತಲವಾಡಿ ಟೀಸರ್ ಮೂಲಕ ಪ್ರೇಕ್ಷಕರ ವಲಯದಲ್ಲಿ ನಿರೀಕ್ಷೆ ಹೆಚ್ಚಿಸಿದೆ. ಸಿನಿಮಾದ ಹಾಡುಗಳಿಗೆ ವಿಕಾಸ್ ವಸಿಷ್ಠ ಸಂಗೀತ ಸಂಯೋಜಿಸಿದ್ದಾರೆ. ಕಾರ್ತಿಕ್ ಎಸ್. ಛಾಯಾಗ್ರಹಣ ಮಾಡಿದ್ದಾರೆ. ರಾಮಿಸೆಟ್ಟಿ ಪವನ್ ಸಂಕಲನ ಮಾಡಿದ್ದಾರೆ. ರಘು ನಿಡುವಳ್ಳಿ ಸಂಭಾಷಣೆ ಬರೆದಿದ್ದಾರೆ. ವಿ. ನಾಗೇಂದ್ರ ಪ್ರಸಾದ್, ಕಿನ್ನಾಳ್ ರಾಜ್, ಪ್ರಮೋದ್ ಮರವಂತೆ, ಗೌಸ್ ಪಿರ್ ಸಾಹಿತ್ಯ ಬರೆದಿದ್ದಾರೆ. ಅಭಿನಂದನ್ ಕಶ್ಯಪ್ ಹಿನ್ನೆಲೆ ಸಂಗೀತ ನೀಡಿದ್ದಾರೆ.

## ಎಂಎಸ್ ಧೋನಿ ದಾಖಲೆ ಹಿಂದಿಕ್ಕಿ ನಂ. 1

# ವಿಕೆಟ್ ಕೀಪರ್ ಆದ ರಿಷಭ್ ಪಂತ್



ಇಂಗ್ಲೆಂಡ್ ಮತ್ತು ಭಾರತ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯ ಹೆಡಿಂಗ್ಲಿಯಲ್ಲಿ ನಡೆಯುತ್ತಿದೆ. ಈ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಭರ್ಜರಿ ಆರಂಭವನ್ನು ಪಡೆದುಕೊಂಡಿದೆ. ಮೊದಲ ದಿನದಾಟದ ಅಂತ್ಯದ ವೇಳೆಗೆ ಭಾರತ 3 ವಿಕೆಟ್ ನಷ್ಟಕ್ಕೆ 359 ರನ್ ಗಳಿಸಿದೆ. ಪಂದ್ಯದ ಮೊದಲ ದಿನದಂದು ಭಾರತೀಯ ಬ್ಯಾಟ್ಸ್‌ಮನ್‌ಗಳು ಅತ್ಯುತ್ತಮ ಪ್ರದರ್ಶನ ನೀಡಿದರು. ಟೀಮ್ ಇಂಡಿಯಾ ಪರವಾಗಿ ಇಬ್ಬರು ಬ್ಯಾಟ್ಸ್‌ಮನ್‌ಗಳು ಶತಕಗಳನ್ನು ಗಳಿಸಿದರೆ, ರಿಷಭ್ ಪಂತ್ 65 ರನ್ ಗಳಿಸಿ ಅಜೇಯರಾಗಿ ಉಳಿದಿದ್ದಾರೆ.

65 ರನ್‌ಗಳ ಇನ್ನಿಂಗ್ಸ್‌ನಲ್ಲಿ, ರಿಷಭ್ ಪಂತ್ ತಮ್ಮ ಹೆಸರಿನಲ್ಲಿ ಕೆಲವು ದಾಖಲೆಗಳನ್ನು ನಿರ್ಮಿಸಿದ್ದಾರೆ. ಭಾರತೀಯ ವಿಕೆಟ್‌ಕೀಪರ್ ಆಗಿ ಸೇನಾ ದೇಶಗಳಲ್ಲಿ ಅತಿ ಹೆಚ್ಚು ಟೆಸ್ಟ್ ರನ್ ಗಳಿಸುವ ವಿಷಯದಲ್ಲಿ ಪಂತ್ ಅವರು ಎಂಎಸ್ ಧೋನಿಯನ್ನು ಹಿಂದಿಕ್ಕಿದ್ದಾರೆ.

ಇದಕ್ಕೂ ಮೊದಲು, ಭಾರತೀಯ ವಿಕೆಟ್ ಕೀಪರ್ ಆಗಿ ಸೇನಾ ದೇಶಗಳಲ್ಲಿ ಟೆಸ್ಟ್ ಸ್ವರೂಪದಲ್ಲಿ ಅತಿ ಹೆಚ್ಚು ರನ್ ಗಳಿಸಿದ ದಾಖಲೆಯನ್ನು ಎಂಎಸ್ ಧೋನಿ ಹೊಂದಿದ್ದರು. ಅಲ್ಲಿ ಅವರು 1731 ರನ್ ಗಳಿಸಿದ್ದರು. ಪಂತ್ ಈಗ ಅವರನ್ನು ಹಿಂದಿಕ್ಕಿದ್ದಾರೆ. ರಿಷಭ್ ಪ್ರಸ್ತುತ 1746 ರನ್ ಗಳಿಸಿದ್ದಾರೆ. ಈ ಸಂದರ್ಭದಲ್ಲಿ, ಫಾರೂಕ್ ಎಂಜಿನಿಯರ್ (1099) ಮೂರನೇ ಸ್ಥಾನದಲ್ಲಿದ್ದಾರೆ. ಸೈಯದ್ ಕಿರ್ಮಾನಿ (785) ನಾಲ್ಕನೇ ಸ್ಥಾನದಲ್ಲಿದ್ದಾರೆ ಮತ್ತು ಕಿರಣ್ ಮೋರ್ (627) ಐದನೇ ಸ್ಥಾನದಲ್ಲಿದ್ದಾರೆ.

ಈ ಇನ್ನಿಂಗ್ಸ್‌ನಲ್ಲಿ, ಪಂತ್ ಎಂಎಸ್ ಧೋನಿ ನಂತರ ಟೆಸ್ಟ್ ಕ್ರಿಕೆಟ್‌ನಲ್ಲಿ 3000 ರನ್ ಗಳಿಸಿದ ಎರಡನೇ ಭಾರತೀಯ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಕೂಡ ಆಗಿದ್ದಾರೆ. 27 ವರ್ಷದ ಪಂತ್, ಕುಮಾರ್ ಸಂಗಕ್ಕಾರ ಅವರನ್ನು ಹಿಂದಿಕ್ಕಿ 3000 ರನ್ ಗಳಿಸಿದ ಏಷ್ಯಾದ ಅತ್ಯಂತ ವೇಗದ ವಿಕೆಟ್ ಕೀಪರ್ ಎನಿಸಿಕೊಂಡಿದ್ದಾರೆ. ಆಡಮ್ ಗಿಲ್‌ಕ್ರಿಸ್ಟ್ ನಂತರ ಈ ಸಾಧನೆ ಮಾಡಿದ ಎರಡನೇ ವೇಗದ ಆಟಗಾರ ರಿಷಭ್ ಪಂತ್ ಆಗಿದ್ದಾರೆ.

- **ಆಡಮ್ ಗಿಲ್‌ಕ್ರಿಸ್ಟ್: 63 ಇನ್ನಿಂಗ್ಸ್‌ಗಳು**
- **ರಿಷಭ್ ಪಂತ್: 76 ಇನ್ನಿಂಗ್ಸ್**
- **ಕುಮಾರ್ ಸಂಗಕ್ಕಾರ: 78 ಇನ್ನಿಂಗ್ಸ್**
- **ಆಂಡಿ ಫ್ಲವರ್: 78 ಇನ್ನಿಂಗ್ಸ್**

ಮೊದಲ ಟೆಸ್ಟ್‌ನಲ್ಲಿ ಇಂಗ್ಲೆಂಡ್ ನಾಯಕ ಬೆನ್ ಸ್ಟೋಕ್ಸ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿದರು. ಅವರ ನಿರ್ಧಾರ ತಪ್ಪೆಂದು ಸಾಬೀತಾಯಿತು. ಯಾಕೆಂದರೆ ಭಾರತೀಯ ಬ್ಯಾಟ್ಸ್‌ಮನ್‌ಗಳು ಇಂಗ್ಲೆಂಡ್ ಬೌಲರ್‌ಗಳ ಬೆಂಡೆತ್ತಿದರು. ಮೊದಲ ದಿನದ ಆಟದ ಅಂತ್ಯದ ವೇಳೆಗೆ ಭಾರತ 3 ವಿಕೆಟ್‌ಗಳಿಗೆ 359 ರನ್ ಗಳಿಸಿತು. ಓಪನರ್ ಯಶಸ್ವಿ ಜೈಸ್ವಾಲ್ ಅಮೋಘ ಶತಕ (101) ಗಳಿಸಿದರು. ಅದೇ ಸಮಯದಲ್ಲಿ, ನಾಯಕ ಶುಭ್‌ಮನ್ ಗಿಲ್ ಕೂಡ ಶತಕ ಗಳಿಸಿದರು ಮತ್ತು ಅವರು 127 ರನ್ ಗಳಿಸಿ ಎರಡನೇ ದಿನಕ್ಕೆ ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ. ಭಾರತ ಸದ್ಯ 500 ರನ್‌ಗಳ ಗುರಿಯತ್ತ ಚಿತ್ತ ನೆಟ್ಟಿದೆ.

# ಮೊದಲ ಪಂದ್ಯದಲ್ಲೇ ಜೈಸ್ವಾಲ್, ಗಿಲ್ ಶತಕದ ಸಾಧನೆ



ಇಂಗ್ಲೆಂಡ್ ವಿರುದ್ಧ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯದಲ್ಲಿ ಭಾರತದ ಬ್ಯಾಟರ್‌ಗಳಾದ ಯಶಸ್ವಿ ಜೈಸ್ವಾಲ್ ಮತ್ತು ಕ್ಯಾಪ್ಟನ್ ಶುಭಮನ್ ಗಿಲ್ ದ್ವಿಶತಕದ ಸಾಧನೆ ಮಾಡಿದ್ದಾರೆ.

ಜೈಸ್ವಾಲ್, ಇಂಗ್ಲೆಂಡ್ ನೆಲದಲ್ಲಿ ತಾನು ಆಡಿದ ಚೊಚ್ಚಲ ಪಂದ್ಯದಲ್ಲೇ ಶತಕ ಗಳಿಸಿದ ಹಿರಿಮೆಗೆ ಪಾತ್ರರಾಗಿದ್ದಾರೆ. ಅಂತೆಯೇ ಶುಭಮನ್ ಗಿಲ್ ನಾಯಕನಾಗಿ ತಮ್ಮ ಮೊದಲ ಪಂದ್ಯದಲ್ಲಿ ಶತಕ ಸಿಡಿಸಿ ಸಾಧನೆ ಮಾಡಿದ್ದಾರೆ.

ಸ್ಟಾರ್ ಬ್ಯಾಟರ್‌ಗಳಾದ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರ ನಿವೃತ್ತಿಯ ನಂತರ, ಭಾರತದ ಬ್ಯಾಟಿಂಗ್‌ನ ಭವಿಷ್ಯವು ಸುರಕ್ಷಿತ ಕೈಯಲ್ಲಿದೆ ಎಂದು ಸಾಬೀತುಪಡಿಸಿದರು.

ಭಾರತದ ಮಾಜಿ ನಾಯಕ ಸೌರವ್ ಗಂಗೂಲಿ ಅವರೊಂದಿಗೆ ಎಲೈಟ್ ಪಟ್ಟಿಗೆ ಜೈಸ್ವಾಲ್ ಸೇರ್ಪಡೆಯಾಗಿದ್ದಾರೆ. 1996ರಲ್ಲಿ ಗಂಗೂಲಿ ಟೆಸ್ಟ್ ಪಂದ್ಯದಲ್ಲಿ ಶತಕದ (131) ಸಾಧನೆ ಮಾಡಿದ್ದರು.

ಲೀಡ್ಸ್‌ನಲ್ಲಿ ಶುಕ್ರವಾರ ಆರಂಭವಾದ ಟೆಸ್ಟ್ ಪಂದ್ಯದಲ್ಲಿ ಜೈಸ್ವಾಲ್ ಅಮೋಘ ಇನ್ನಿಂಗ್ಸ್ ಕಟ್ಟಿದರು. 159 ಬಾಲ್‌ಗೆ 101 ರನ್ ಗಳಿಸಿದ್ದಾರೆ. ಇನ್ನು ಶುಭಮನ್ ಗಿಲ್ ಔಟಾಗದೇ ಶತಕದ ಸಾಧನೆ ಮಾಡಿದ್ದಾರೆ.



# ಘಾಟಿ ಇಶಾ ಫೌಂಡೇಷನ್ ಹೆಸರಲ್ಲಿ ನೂತನ ಪ್ರವಾಸ ಮಾರ್ಗ



**ಬೆಂಗಳೂರು:** ಈಗಾಗಲೇ ಅತ್ಯಂತ ಜನಪ್ರಿಯವಾಗಿರುವ ಬೆಂಗಳೂರು ಹಾಗೂ ಇಶಾ ಫೌಂಡೇಷನ್ ವಿಶೇಷ ಟೂರ್ ಜೊತೆಗೆ ಇದೀಗ ಪ್ರಯಾಣಿಕರ ಒತ್ತಾಸೆಯ ಮೇರೆಗೆ ಘಾಟಿ ಇಶಾ ಫೌಂಡೇಷನ್ ಹೆಸರಲ್ಲಿ ಃಒಖಿಅ ನೂತನ ಪ್ರವಾಸ ಮಾರ್ಗವನ್ನು ಪರಿಚಯಿಸಿದೆ.

ಹೌದು, ಪ್ರಯಾಣಿಕರ ಆದ್ಯತೆಯ ಮೇರೆಗೆ ಘಾಟಿ ಇಶಾ ಫೌಂಡೇಷನ್ ಪ್ರವಾಸದ ಹೊಸ ಪ್ಯಾಕೇಜ್‌ನ್ನು ಹೊರತಂದಿದೆ. ಈ ಪ್ಯಾಕೇಜ್ ಮೂಲಭೂತ ಸೌಲಭ್ಯಗಳೊಂದಿಗೆ ಪ್ರಮುಖ ದೇವಾಲಯಗಳ ದರ್ಶನ ಪಡೆಯುವ ಅವಕಾಶವನ್ನು ಒದಗಿಸುತ್ತದೆ. ಬೆಂಗಳೂರು ನಗರವು ಐತಿಹಾಸಿಕ ಮಹತ್ವದ ಹಲವು ದೇವಾಲಯಗಳನ್ನು ಹೊಂದಿದ್ದು, ಭಕ್ತರ ಹಾಗೂ ಪ್ರವಾಸಿಗರ ಮಹತ್ವದ ಆರಾಧ್ಯ ಕೇಂದ್ರವಾಗಿದೆ. ಈ ದೇವಾಲಯಗಳು ಪ್ರಾಚೀನ ಶಿಲ್ಪಕಲೆಯ ಪ್ರತಿಬಿಂಬವಾಗಿದ್ದು, ಭಕ್ತಿ, ಶ್ರದ್ಧೆ ಮತ್ತು ಸಂಸ್ಕೃತಿಯ ಆಗರವಾಗಿದೆ.

ಬೆಂಗಳೂರಿನ ಸುತ್ತಮುತ್ತಲಿನ ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡುವ ಪ್ರವಾಸಿಗರ ಅನುಕೂಲಕ್ಕಾಗಿ ಬೆಂ.ಮ.ಸಾ.ಸಂಸ್ಥೆಯು ಹೆಚ್ಚುವರಿ ಸೇರ್ಪಡೆಯಾಗಿ ಘಾಟಿ ಇಶಾ ಫೌಂಡೇಷನ್ ಎಂಬ ಹೆಸರಿನಡಿಯಲ್ಲಿ ಜೂ.21ರಿಂದ ಜಾರಿಗೆ ಬರಲಿದೆ. ವಾರಾಂತ್ಯ ದಿನಗಳಾದ ಶನಿವಾರ, ಭಾನುವಾರ ಹಾಗೂ ಸಾರ್ವತ್ರಿಕ ರಜೆ ದಿನಗಳಂದು ಹವಾನಿಯಂತ್ರಿತ ಬಸ್ಸಿನೊಂದಿಗೆ ಪ್ರವಾಸಿಗರಿಗೆ ಸಾರಿಗೆ ಸೌಲಭ್ಯವನ್ನು ಪ್ರಾರಂಭಿಸಲಾಗುತ್ತಿದೆ.

ಘಾಟಿ ಇಶಾ ಫೌಂಡೇಷನ್ ಪ್ಯಾಕೇಜ್‌ನ ವಾಹನವು ಕೆಂಪೇಗೌಡ ಬಸ್ ನಿಲ್ದಾಣದಿಂದ ಬೆಳಿಗ್ಗೆ 9 ಗಂಟೆಗೆ ಪ್ರಾರಂಭವಾಗುತ್ತದೆ. ಪ್ರವಾಸದ ಅವಧಿಯಲ್ಲಿ ನೆಲದಾಂಜನೇಯ ಸ್ವಾಮಿ ದೇವಸ್ಥಾನ, ಶ್ರೀ ಘಾಟಿ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ, ಜ್ಞಾನತೀರ್ಥ ಲಿಂಗ (ಮುದ್ದೇನಹಳ್ಳಿ), ಶ್ರೀ ದಕ್ಷಿಣ ಕಾಶಿ ಪಂಚನಂದಿ ಕ್ಷೇತ್ರ ಪಾಪಾಘ್ನಿ ಮಠ (ಸ್ಕಂದಗಿರಿ), ಕಲ್ಯಾಣಿ (ಕಾರಂಜಿ) ಬಳಿಕ (ಊಟ ವಿರಾಮ) ಮತ್ತು ಇಶಾ ಫೌಂಡೇಷನ್. ಸದರಿ ವಾಹನವು ಕೆಂಪೇಗೌಡ ಬಸ್ ನಿಲ್ದಾಣಕ್ಕೆ ಸಂಜೆ 7ಗಂಟೆಗೆ ಹಿಂದಿರುಗುತ್ತದೆ. ಒಟ್ಟು ಪ್ರಯಾಣ ದರ (ಟೋಲ್+ಜಿಎಸ್ಟಿ ಸೇರಿ) (ಪ್ರತಿ ಆಸನಕ್ಕೆ) 600 ರೂ. ನಿಗದಿಪಡಿಸಲಾದೆ.

ಜೂ.21ರಿಂದ ಬನಶಂಕರಿ ಟಿಟಿಎಂಸಿಯಿಂದ 1ಎ ಹಾಗೂ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ 1ಬಿ ಬಸ್‌ಗಳು ಬೆಳಿಗ್ಗೆ 11 ಗಂಟೆಗೆ ಹೊರಟು ಭೋಗ ನಂದೀಶ್ವರ ದೇವಸ್ಥಾನ, ಕಣಿವೆ ಬಸವಣ್ಣ ದೇವಸ್ಥಾನ, ಸರ್.ಎಂ. ವಿಶ್ವೇಶ್ವರಯ್ಯ ಮ್ಯೂಸಿಯಂ ಮತ್ತು ಸಮಾಧಿ ಮುದ್ದೇನಹಳ್ಳಿ, ರಂಗಸ್ಥಳ ರಂಗನಾಥ ಸ್ವಾಮಿ ದೇವಸ್ಥಾನ ಮತ್ತು ಇಶಾ ಫೌಂಡೇಷನ್ ನೋಡಲು ಅವಕಾಶ ನೀಡಲಿವೆ. ಸದರಿ ಬಸ್‌ಗಳು ರಾತ್ರಿ 10 ಗಂಟೆಗೆ ನೀವು ಹತ್ತಿದ ಟಿಟಿಎಂಸಿಗೆ ಹಿಂದುರಗಲಿವೆ. ಬನಶಂಕರಿ ಟಿಟಿಎಂಸಿಯಿಂದ ಪ್ರಯಾಣಿಸುವವರಿಗೆ ಪ್ರತಿ ಆಸನಕ್ಕೆ 700 ರೂ ಹಾಗೂ ಸೆಂಟ್ರಲ್ ಸಿಲ್ಕ್ ಬೋರ್ಡ್ ಪ್ರಯಾಣಿಸುವವರಿಗೆ ಪ್ರತಿ ಆಸನಕ್ಕೆ 700 ರೂ. ನಿಗದಿಪಡಿಸಲಾಗಿದೆ.

ಮೇಲ್ಕಂಡ ಎಲ್ಲಾ ಸ್ಥಳಗಳನ್ನು ಒಂದೇ ದಿನದಲ್ಲಿ ಒಂದೇ ಬಸ್ಸಿನ ಮೂಲಕ ಸಂದರ್ಶಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ www.mybmtc.com & www.ksrtc.in ಸಂಪರ್ಕಿಸುವುದು. ಬೆ.ಮ.ಸಾ.ಸಂಸ್ಥೆ ವತಿಯಿಂದ ಪರಿಚಯಿಸಿರುವ ಬೆಂಗಳೂರು ದರ್ಶಿನಿ ರೌಂಡ್ಸ್ ಇದು ಬೆಂಗಳೂರಿನ ಪ್ರಮುಖ ಪ್ರವಾಸಿ ಸ್ಥಳಗಳ ದರ್ಶಿನಿಯಾಗಿದ್ದು, ಬೆಂಗಳೂರು-ಇಶಾ ಫೌಂಡೇಶನ್ ವಿಶೇಷ ಪ್ಯಾಕೇಜ್ ಟೂರ್‌ನ್ನು ಯಶಸ್ವಿಯಾಗಿ ಒಂದು ವರ್ಷ ಪೂರ್ಣಗೊಳಿಸಿದೆ. ಈವರೆಗೆ 50,000ಕ್ಕೂ ಹೆಚ್ಚಿನ ಪ್ರಯಾಣಿಕರು ಪ್ರವಾಸಿ ಸ್ಥಳಗಳನ್ನು ವೀಕ್ಷಿಸಿದ್ದಾರೆ.

# ನಂದಿ ಬೆಟ್ಟದಲ್ಲಿ ಸಚಿವ ಸಂಪುಟ ಸಭೆಗೆ ಮತ್ತೆ ದಿನಾಂಕ ನಿಗದಿ



**ಚಿಕ್ಕಬಳ್ಳಾಪುರ:** ಕಳೆದ ಜೂನ್ 19ರಂದು ಚಿಕ್ಕಬಳ್ಳಾಪುರ ತಾಲೂಕಿನ ನಂದಿ ಬೆಟ್ಟದಲ್ಲಿ ನಡೆಯಬೇಕಾಗಿದ್ದ ಸಚಿವ ಸಂಪುಟ ಸಭೆ ದಿಢೀರ್ ರದ್ದಾಗಿದ್ದು, ಜುಲೈ 2 ರಂದು ನಡೆಸಲು ನಿರ್ಧರಿಸಲಾಗಿದೆ.

ಚಿಕ್ಕಬಳ್ಳಾಪುರ, ಕೋಲಾರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯ ಕೆಲವು ಇಲಾಖೆಗಳಿಂದ ಪ್ರಸ್ತಾವನೆಗಳು ತಲುಪಿರಲಿಲ್ಲ. ಚಿಕ್ಕಬಳ್ಳಾಪುರ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಕೆಲಸಗಳು ಆಗಬೇಕು ಎಂಬ ಉದ್ದೇಶದಿಂದ ಮತ್ತು ಕೆಲವು ಸಚಿವರು ಮತ್ತು ಶಾಸಕರು ವಿಶೇಷ ಮನವಿಗಳನ್ನು ಮಾಡಿದ್ದರು. ಹೀಗಾಗಿ, ಈ ವ್ಯಾಪ್ತಿಯ ವಿಷಯಗಳನ್ನು ಬಿಟ್ಟು ಗುರುವಾರ ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆ ನಡೆಸಲಾಗಿದೆ.

ಸಚಿವ ಸಂಪುಟ ಸಭೆ ನಡೆಯುವ ಹಿನ್ನೆಲೆಯಲ್ಲಿ ನಂದಿ ಬೆಟ್ಟದಲ್ಲಿ ಬರಪೂರ ಸಿದ್ದತೆ ಮಾಡಿಕೊಳ್ಳಲಾಗಿದೆ. ನಂದಿ ಬೆಟ್ಟಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ, ಕಟ್ಟಡಗಳ ನವೀಕರಣ ಸೇರಿದಂತೆ ವಿವಿಧ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕಾರ್ಯ ನಡೆಯುತ್ತಿದೆ. ಸಚಿವ ಸಂಪುಟ ಸಭೆ ನಡೆಯುವ ಜಾಗದಲ್ಲಿ ಸಭಾ ವೇದಿಕೆ, ಪತ್ರಿಕಾಗೋಷ್ಠಿ ನಡೆಸಲು ವ್ಯವಸ್ಥೆಯನ್ನೂ ಮಾಡಲಾಗಿದೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054